ಸಂಪುಟ: 04 ಸಂಚಿಕೆ: 225 ಪುಟಗಳು: 08 ಸೋಮವಾರ 28 ಅಕ್ಟೋಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಜೀವನದ ಪ್ರತಿಯೊಂದು ಘಟನೆಗೂ ಒಂದು ಉದ್ದೇಶ ಇರುತ್ತದೆ. ನಗಬೇಕು ಎಂಬುದನ್ನು ಕೆಲವು ಘಟನೆಗಳು ಕಲಿಸುತ್ತವೆ. ಹಾಗೆಯೇ, ತುಂಬಾ ಅಳಬಾರದು ಎಂದು ಇನ್ನು ಕೆಲವು ಪ್ರಸಂಗಗಳು ಹೇಳಿಕೊಡುತ್ತವೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಹೈಕಮಾಂಡ್ ಸೂಚಿಸಿರುವ ಅಭ್ಯರ್ಥಿ ಪರ ಕೆಲಸ: ನಿರಾಣಿ

• ಉದಯವಾಹಿನಿ, ಹುಬ್ಬಳ್ಳಿ

ಶಿಗ್ಗಾಂವಿ ಉಪಚುನಾವಣೆಗೆ ನಾನು ಆಕಾಂಕ್ಷಿಯಾಗಿರಲಿಲ್ಲ. ಈ ಕುರಿತು ಹಿಂದೆಯೇ ಸ್ಪಷ್ಟಪಡಿಸಿದ್ದೇನೆ. ಹೈಕಮಾಂಡ್ ಸೂಚಿಸಿರುವ ಅಭ್ಯರ್ಥಿ ಪರವಾಗಿ ನಾವೆಲ್ಲ ಕೆಲಸ ಮಾಡುತ್ತೇವೆ ಎಂದು ಮಾಜಿ ಸಚಿವ ಮುರುಗೇಶ ನಿರಾಣಿ ಹೇಳಿದರು.ಸುದ್ದಿಗಾರರ ಜತೆ ಮಾತನಾಡಿ, ಚುನಾವಣೆ ಮುಗಿಯುವವರೆಗೂ ಶಿಗ್ಗಾಂವಿ ಕ್ಷೇತ್ರದಲ್ಲಿ ಉಳಿದು ಗೆಲ್ಲಿಸುವ ಕೆಲಸ ಮಾಡುತ್ತೇವೆ. ರಾಜ್ಯದಲ್ಲಿ ಕಾಂಗ್ರೇಸ್ ಸರಕಾರದ ದುರಾಡಳಿತದ ಬಗ್ಗೆ ಕಾಂಗ್ರೇಸ್ ಶಾಸಕರೇ ಭ್ರಮನಿರಸರಾಗಿದ್ದಾರೆ. ಯಾವುದೇ ಅಭಿವೃದ್ಧಿ ಆಗದಿರುವ ಹಿನ್ನೆಲೆಯಲ್ಲಿ ಅವರ ಪಕ್ಷದವರೇ ಅಸಮಾಧಾನದಲ್ಲಿದ್ದಾರೆ. ಹೀಗಾಗಿ ಮೂರು ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ದೊಡ್ಡ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ. ಗ್ಯಾರಂಟಿಗಳು ಫಲಾನುಭವಿಗಳಿಗೆ ಮುಟ್ಟಿಲ್ಲ. ಹೀಗಾಗಿ ಜನರು ಕಾಂಗ್ರೇಸ್ ವಿರೋಧವಾಗಿದ್ದಾರೆ. ಬಸವರಾಜ ಬೊಮ್ಮಾಯಿ ಇಲ್ಲಿ ಅಭಿವೃದ್ಧಿ ಕೆಲಸ ಮಾಡಿದ್ದಾರೆ ಎಂದರು.

ರೈತರ ಭೂಮಿ ಕಬಳಿಸಲು ವಕ್ಫ್‌ಗೆ ಕೈ ಕುಮ್ಮಕ್ಕು: ಅರವಿಂದ್ ಬೆಲ್ಲದ

• ಉದಯವಾಹಿನಿ, ಧಾರವಾಡ

ರೈತರ ಭೂಮಿ ಕಿತ್ತುಕೊಂಡು, ವಕ್ಫ್ ಬೋರ್ಡ್‌ಗೆ ನೀಡಲು ಹೊರಟಿರುವ ಕಾಂಗ್ರೇಸ್ ಸರ್ಕಾರ ಒಂದು ವಿಷಯ ನೆನಪಿಟ್ಟುಕೊಳ್ಳಬೇಕು. ದೇಶದಲ್ಲಿರುವುದು ಅಂಬೇಡ್ಕರ್ ವಿರಚಿತ ಸಂವಿಧಾನವೇ ಹೊರತು, ಷರಿಯಾ ಕಾನೂನಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕನ್ನಡನಾಡನ್ನೇ ಒಂದು ಸಮುದಾಯಕ್ಕೆ ಮಾರಲು ಹೊರಟಿರುವ ಕಾಂಗ್ರೇಸ್ ಸರ್ಕಾರಕ್ಕೆ, ಕನ್ನಡಿಗರು, ನಾಡಿನ ಅನ್ನದಾತರೇ ತಕ್ಕ ಪಾಠ ಕಲಿಸುವ ದಿನಗಳು ದೂರವಿಲ್ಲ ಎಂದು ಎಚ್ಚರಿಸಿದ್ದಾರೆ. ವಿಜಯಪುರಕ್ಕೆ ಇತ್ತೀಚೆಗೆ ಭೇಟಿ ನೀಡಿದ್ದ ಸಚಿವ ಜಮೀರ್ ಅಹ್ಮದ್‌ಖಾನ್ 15 ದಿನಗಳೊಳಗೆ ವಕ್ಫ್ ಆಸ್ತಿ ನೋಂದಣಿಗೆ ಜಿಲ್ಲಾಡಳಿತವನ್ನು ಒತ್ತಾಯಿಸಿರುವುದರ ಉದ್ದೇಶ ಹಿಂದೂ ರೈತರ ಭೂಮಿ ಕಿತ್ತುಕೊಂಡು ಅವರನ್ನು ಬೀದಿಪಾಲು ಮಾಡುವುದೇ ಆಗಿದೆ. ಸಚಿವರ ಈ ನಡೆಯಿಂದ ಕೃಷಿ ಕಾರ್ಯ ಮಾಡಿಕೊಂಡು ಬಂದಿರುವ ವಿಜಯಪುರ, ಕಲಬುರಗಿ, ಯಾದಗಿರಿ ಜಿಲ್ಲೆಗಳ ರೈತರು ತಮ್ಮ ಜಮೀನನ್ನು ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ. ವಕ್ಫ್ ಮಂಡಳಿ ವಿಜಯಪುರ ಜಿಲ್ಲೆಯೊಂದರಲ್ಲೇ 15,000 ಎಕರೆಗೂ ಅಧಿಕ ಕೃಷಿಭೂಮಿಯನ್ನು ಅಕ್ರಮವಾಗಿ ತನ್ನದೆಂದು ಘೋಷಣೆ ಮಾಡುತ್ತಿದೆ ಎಂದು ದೂರಿದ್ದಾರೆ.

ಚನ್ನಪಟ್ಟಣದಿಂದಲೇ ಯೋಗೇಶ್ವರ್ ಅವನತಿ-ಕುಮಾರಸ್ವಾಮಿ ಕಿಡಿ

• ಉದಯವಾಹಿನಿ, ಹಾಸನ

ಚನ್ನಪಟ್ಟಣದ ಉಪಚುನಾವಣೆಯಿಂದಲೇ ಸಿ.ಪಿ.ಯೋಗೇಶ್ವರ್ ಅವನತಿ ಆಗಲಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭವಿಷ್ಯ ನುಡಿದರು. ಭಾನುವಾರ ಹಾಸನಾಂಬೆಯ ದರ್ಶನ ಪಡೆದ ನಂತರ ಹುರುಪಿನಲ್ಲಿ ಮಾತನಾಡಿದ ಅವರು, ಬರೆದಿಟ್ಟುಕೊಳ್ಳಿ ನಿಖಿಲ್ ಗೆಲ್ಲುವುದು ನಿಶ್ಚಿತ, ಯೋಗೇಶ್ವರ್ ಸೋಲು ಖಚಿತ ಎಂದು ಹೆಚ್‌ಡಿಕೆ ಗುಡುಗಿದರು. ಏನೇ ಕುತಂತ್ರ ಮಾಡಿದರೂ ನಿಖಿಲ್ ಗೆಲ್ಲುತ್ತಾರೆ. ಚನ್ನಪಟ್ಟಣದ ನಮ್ಮ ಕಾರ್ಯಕರ್ತರು ನಿಖಿಲ್‌ನನ್ನು ಗೆಲ್ಲಿಸುತ್ತಾರೆ ಎಂಬ ವಿಶ್ವಾಸವಿದೆ ಎಂದರು. ಇನ್ನು ಬಿಜೆಪಿ ಜೊತೆ ಜೆಡಿಎಸ್‌ಗೆ ಮೈತ್ರಿ ಮಾಡಿಸಿದ್ದು ನಾನೇ, ಲೋಕಸಭೆ ಚುನಾವಣೆ ವೇಳೆ ಕುಮಾರಸ್ವಾಮಿಯನ್ನು, ಡಾ.ಮಂಜುನಾಥ್ ಅವರನ್ನ ಗೆಲ್ಲಿಸಿದ್ದು, ನನ್ನನ್ನು ಮಂತ್ರಿ ಮಾಡಿದ್ದು ಅವರೇ ಅಂತೆ ಎಂದು ಯೋಗೇಶ್ವರ್ ವಿರುದ್ಧ ಕುಟುಕಿದರು.

ಬಿಜೆಪಿಯ ಹೈಕಮಾಂಡ್‌ನಿಂದ ಮನವೊಲಿಸಿ ಬಿ.ಫಾರಂ ಪಡೆಯಲಾಗದೇ ಕಾಂಗ್ರೇಸ್‌ಗೆ ಹೋಗಿಲ್ವಾ ಎಂದು ವ್ಯಂಗ್ಯವಾಡಿದರು.

ಸುಳ್ಳು ಪೋಸ್ಟ್ ಹರಿಬಿಡುವವರ ವಿರುದ್ಧ ಕಠಿಣ ಕ್ರಮ : ಗೃಹ ಸಚಿವ

• ಉದಯವಾಹಿನಿ, ಶಿವಮೊಗ್ಗ

ಸಾಮಾಜಿಕ ಜಾಲತಾಣಗಳಲ್ಲಿ ಸಮಾಜದಲ್ಲಿ ಶಾಂತಿ ಕದಡುವ, ದ್ವೇಷ ಹರಡುವವರ ಮೇಲೆ ನಿಗಾ ವಹಿಸಿ ಕಾನೂನು ಚೌಕಟ್ಟಿನೊಳಗೆ ಕಠಿಣ ಕ್ರಮ ಕೈಗೊಳ್ಳಿ ಎಂದು ಗೃಹ ಸಚಿವ ಜಿ ಪರಮೇಶ್ವರ್ ಅವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ. ಶಿವಮೊಗ್ಗದಲ್ಲಿ ಪೊಲೀಸ್ ಇಲಾಖೆಯ ನೂತನವಾಗಿ ನಿರ್ಮಿಸಿರುವ ಜಿಲ್ಲಾ ಪೊಲೀಸ್ ಭವನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಶಾಂತಿ ಕದಡುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳಲ್ಲಿ ದ್ವೇಷಪೂರಿತ, ಸುಳ್ಳು ಸುದ್ದಿ, ವಿವಾದಾತ್ಮಕ ಪೋಸ್ಟ್ ಗಳನ್ನು ಪ್ರಕಟಿಸುವರ ಮೇಲೆ ನಿಗಾವಹಿಸಿ, ಕಾನೂನು ಚೌಕಟ್ಟಿನಲ್ಲಿ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು. ಅಧಿಕಾರಿ, ಸಿಬ್ಬಂದಿಗಳು ಚೆನ್ನಾಗಿ ಕೆಲಸ ಮಾಡಿ, ಅಪರಾಧ ಪ್ರಕರಣಗಳನ್ನು ನಿಯಂತ್ರಣಕ್ಕೆ ತಂದರೆ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ. ನಮ್ಮ ಇಲಾಖೆಯ ಮೇಲೆ ಹೆಚ್ಚು ಜವಾಬ್ದಾರಿ ಇದೆ. ಬಡವರ ಪರ ಸರ್ಕಾರ ನಮ್ಮದು. ಸಮಾಜದಲ್ಲಿ ಬಡವರಿಗೆ ಸಹಾಯವಾಗುವ ನಿಟ್ಟಿನಲ್ಲಿ ಕೆಲಸವಾಗಬೇಕು ಎಂದರು.

ಭೈರತಿ ಸುಟ್ಟು ಹಾಕಿದ್ರು ಮುಡಾ ಫೈಲ್..! ಶೋಭಾ ಸವಾಲ್

- ತಾಕತ್ತಿದ್ರೆ ನನ್ನ ಅಕ್ರಮದ ದಾಖಲೆ ಬಿಡುಗಡೆಗೊಳಿಸಿ
- ಬೈರತಿ ಸುರೇಶ ಮುಡಾದ ಸಾವಿರಾರು ಫೈಲ್ಸ್ ಸುಟ್ಟು ಹಾಕಿದ್ರು..!
- ಮೂರು ಕ್ಷೇತ್ರದಲ್ಲಿ ಎನ್ ಡಿಐ ಗೆಲ್ಲುತ್ತೆ
- ನಾನು ಯಾವುದೇ ಭ್ರಷ್ಟಾಚಾರ ಮಾಡಿಲ್ಲ.

ಕಟ್ಟಡ ನಿರ್ಮಾಣ ಮಾಡಲು ಟೆಂಡರ್ ಕರೆಯಲಾಗಿದೆ. ಬೆಳಗಾವಿಗೆ ಇರುವ ಈ ಆಸ್ಪತ್ರೆ 50 ಬೆಡ್‌ಗಳನ್ನು ಹೊಂದಿದೆ. ಹೊಸ ಕಟ್ಟಡದಲ್ಲಿ 100 ಬೆಡ್‌ಗಳ ವ್ಯವಸ್ಥೆ ಮಾಡಲು 152 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ನಿರ್ಮಾಣ ಮಾಡಲು ಟೆಂಡರ್ ಕರೆಯಲಾಗಿದೆ. ಇಲ್ಲಿ ಸೂಕ್ತ ವ್ಯವಸ್ಥೆ ಮಾಡಲಾಗುವುದು ಎಂದು ಅವರು ತಿಳಿಸಿದರು. ಬಿಜೆಪಿ ಅವಧಿಯಲ್ಲಿ ಶೋಭಾ ಕರಂದ್ಲಾಜೆ ಅವರು ಭ್ರಷ್ಟಾಚಾರ ಮಾಡಿದ್ದರು. ಅದರ ದಾಖಲಾತಿ ಸಂಗ್ರಹಿಸುವಂತೆ ಹೇಳಿದ್ದೇನೆ. ಮುಂದಿನ 15 ದಿನಗಳಲ್ಲಿ ದಾಖಲೆ ಬಿಡುಗಡೆ ಮಾಡುತ್ತೇನೆ

-ಭೈರತಿ ಸುರೇಶ್, ಸಚಿವ

ಚಾಮುಂಡೇಶ್ವರಿ ಮೇಲೆ ಆಣೆ ಇಟ್ಟ ಬೈರತಿ ಸುರೇಶ್

ನಿವೇಶನ ಮಂಜೂರಿ ಕೋರಿಕೆಗೆ ಸ್ಪಂದಿಸಲಿಲ್ಲ ಎಂಬ ಸೇಡಿನಿಂದ ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ತನ್ನ ಹಾಗೂ ಸಿಎಂ ಸಿದ್ದರಾಮಯ್ಯ ವಿರುದ್ಧ ಆಧಾರ ರಹಿತ ಆಪಾದನೆಗಳನ್ನು ಮಾಡಿದ್ದಾರೆ,'' ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಹೇಳಿದ್ದಾರೆ. ''ತಾಯಿ ಚಾಮುಂಡೇಶ್ವರಿ ಆಣೆಯಾಗಿಯೂ ಇದು ನಿಜ. ವಿಶ್ವನಾಥ್ ತಮ್ಮ ಪುತ್ರನೊಂದಿಗೆ ನನ್ನನ್ನು ಭೇಟಿ ಮಾಡಿ ನಿವೇಶನಕ್ಕೆ ಕೋರಿದ್ದರು. ಇದಕ್ಕೆ ಸ್ಪಂದಿಸಲಿಲ್ಲ ಎಂಬ ಕಾರಣಕ್ಕೆ ಸುಳ್ಳು ಆಪಾದನೆ ಮಾಡಿದ್ದಾರೆ,'' ಎಂದು ದೂರಿದರು. '' 250 ರಿಂದ 300 ಕೋಟಿ ರೂ. ಬೆಲೆ ಬಾಳುವ ಹೋಟೆಲ್ ನಡೆಸುತ್ತಿದ್ದಾರೆ ಎಂದು ವಿಶ್ವನಾಥ್ ನನ್ನ ವಿರುದ್ಧ ಆಪಾದಿಸಿದ್ದಾರೆ. ವಾಸ್ತವದಲ್ಲಿ ಹೋಟೆಲ್ ಇರುವ ಜಾಗ ನಮ್ಮ ಕುಟುಂಬದಿಂದ ಬಂದಿರುವ ಆಸ್ತಿ. ನನ್ನ ಪೂರ್ವಜರು ಖರೀದಿಸಿದ್ದ ಈ ಜಾಗದಲ್ಲಿ ಹೋಟೆಲ್, ಮಾಲ್ ಮತ್ತು ಪೆಟ್ರೋಲ್ ಬಂಕ್ ಇದೆ. ಆದರೆ, ಇಲ್ಲಿ ಸಿದ್ದರಾಮಯ್ಯ ಅವರ ಮಗ ಮತ್ತು ಸೊಸೆ ಹೋಟೆಲ್ ನಡೆಸುತ್ತಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಅಧಿಕಾರದಲ್ಲಿದ್ದಾಗ ನಡೆದಿದೆ ಎನ್ನಲಾದ ಭ್ರಷ್ಟಾಚಾರ ವಿಚಾರಕ್ಕೆ ಸಂಬಂಧಿಸಿದಂತೆ ತಮ್ಮ ಮೇಲೆ ಗುಡುಗಿದ್ದ ಸಚಿವ ಭೈರತಿ ಸುರೇಶ್ ಅವರಗೆ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಇಲಾಖೆಯ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಅವರು ನೇರವಾಗಿ ಚಾಲೆಂಜ್ ಮಾಡಿದ್ದಾರೆ. ಸದ್ಯ ನನ್ನ ಮೇಲೆ ಅವರು ವಿನಾಃ ಕಾರಣ ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು. ಭಾನುವಾರ ಮಾತನಾಡಿ, ಸಚಿವ ಬೈರತಿ ಸುರೇಶ್ ಅವರು ನೂರಾರು ಮುಡಾ ಕಡತಗಳನ್ನು ಸುಟ್ಟು ಹಾಕಿದ್ದ ವಿರುದ್ಧ ನಾನು ಧ್ವನಿ ಎತ್ತಿದ್ದೆ. ನನ್ನ ಮೇಲೆ ಭ್ರಷ್ಟಾಚಾರ ಆರೋಪ ಮಾಡುತ್ತಿದ್ದಾರೆ. ಅವರ ಆರೋಪಕ್ಕೆ ದಾಖಲೆಗಳು ಇದ್ದರೆ ಬಿಡುಗಡೆ ಮಾಡಲಿ ಎಂದು ಸಚಿವೆ ಸವಾಲು ಹಾಕಿದ್ದಾರೆ. ಇದಷ್ಟೇ ಅಲ್ಲದೇ ನನ್ನ ಮೇಲೆ ಬೇರೆ ಬೇರೆ ಆರೋಪ ಮಾಡುತ್ತಿದ್ದಾರೆ. ಹಲವಾರು ಸರ್ಕಾರದ ಸಚಿವರು ಭ್ರಷ್ಟಾಚಾರದ ತನಿಖೆ ಎದುರಿಸಿದ್ದಾರೆ.

ಶೋಭಾ ಕರಂದ್ಲಾಜೆ ಯಾವತ್ತಿಗೂ ಭ್ರಷ್ಟಾಚಾರ ಮಾಡಿಲ್ಲ, ಮಾಡುವುದಿಲ್ಲ ಮತ್ತು ಬಿಜೆಪಿಯಲ್ಲಿ ಕೊಟ್ಟ ಜವಾಬ್ದಾರಿಯನ್ನು ಪರಿಪೂರ್ಣವಾಗಿ ನಿಭಾಯಿಸಿದವಳು ನಾನು ಎಂದು ಅವರು ಉತ್ತರಿಸಿದ್ದಾರೆ. ರಾಜ್ಯ ಸರ್ಕಾರ ಮಳೆ ಹಾನಿ ಸಂತ್ರಸ್ತರಿಗೆ ಪರಿಹಾರ ಡಿಬಿಟಿ ಮಾಡಲು ವಿಪಕ್ಷ ಒತ್ತಾಯ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರಿಗೂ ವಿದ್ಯುತ್ ಇಲಾಖೆಗೂ ಏನು ಸಂಬಂಧ ಮಾಡಲು ಹೊರಟಿದ್ದೀರಿ..? ನಕಲಿ ದಾಖಲೆ ಸೃಷ್ಟಿಸಲು ಪೊನ್ನಣ್ಣನಿಗೆ ಜವಾಬ್ದಾರಿ ನೀಡಿದ್ದೀರಾ..? ಪೊನ್ನಣ್ಣ ಅವರು ಮುಖ್ಯಮಂತ್ರಿಯ ಕಾನೂನು ಸಲಹೆಗಾರರಾಗಿದ್ದಾರೆ. ಅವರಿಗೆ ನೀವು ವಿದ್ಯುತ್ ಇಲಾಖೆಯ ಜವಾಬ್ದಾರಿ ನೋಡಿ ಎಂದರೆ ಅದರಲ್ಲಿಯೂ ಭ್ರಷ್ಟಾಚಾರ ಮಾಡಲು ಹೋರಟ್ಟಿದೀರಿ ಎನ್ನುವ ಸಂಶಯ ಕಾಡುತ್ತಿದೆ ಎಂದು ತಿಳಿಸಿದರು. ತಾಕುತ್ತು ಇದ್ದರೆ ದಾಖಲೆ ಬಹಿರಂಗಪಡಿಸಿ ನನ್ನ ಮೇಲಿನ ಆರೋಪ ಕುರಿತು ನಿಮ್ಮಲ್ಲಿ ಯಾವ ದಾಖಲಾತಿ ಇದೆ ತಕ್ಷಣ ಬಹಿರಂಗ ಪಡಿಸಿ ಎಂದು ಅವರು ಪುನರುಚ್ಚರಿಸಿದರು. ಸಚಿವ ಬೈರತಿ ಸುರೇಶ್ ಮುಡಾ ದಾಖಲೆ ಸುಟ್ಟು ಹಾಕಿದ್ದು ಸತ್ಯ.. ಅದಕ್ಕಾಗಿ ಈಗ ಜಾರಿ ನಿರ್ದೇಶನಾಲಯ, ಲೋಕಾಯುಕ್ತ ತನಿಖೆ ಆರಂಭಿಸಿದೆ. ಹಲವಾರು ಸಂಘ ಸಂಸ್ಥೆಗಳು ಸರಕಾರದ ಮೇಲೆ ಕಣ್ಣಿಟ್ಟಿದ್ದಾರೆ. ನಿಮಗೆ ತಾಕತ್ತು ಇದ್ದರೆ ನನ್ನ ಭ್ರಷ್ಟಾಚಾರ ಬಹಿರಂಗ ಮಾಡಿ ಎಂದರು. ಇನ್ನೂ ಕರ್ನಾಟಕದ ಮೂರು ಕ್ಷೇತ್ರಗಳ ಉಪ ಚುನಾವಣೆ ಕುರಿತು ಮಾತನಾಡಿದ ಅವರು, ಈ ಚುನಾವಣೆಯಲ್ಲಿ ಎನ್ ಡಿಎ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶೋಭಾ ಭ್ರಷ್ಟತೆ ಬಯಲು ಮಾಡುವೆ

ಸಚಿವೆ ಶೋಭಾ ಕರಂದ್ಲಾಜೆ ರಾಜ್ಯದಲ್ಲಿ ಇಂಧನ ಸಚಿವರಾಗಿದ್ದ ಅವಧಿಯಲ್ಲಿ ನಡೆಸಿದ ಭ್ರಷ್ಟಾಚಾರದ ಬಗ್ಗೆ 15 ದಿನಗಳಲ್ಲಿ ದಾಖಲೆ ಸಮೇತ ಹೊರಗೆಳೆಯುತ್ತೇವೆ. ದಾಖಲೆ ಸಂಗ್ರಹಿಸಲು ಎ.ಎಸ್.ಪೊನ್ನಣ್ಣ ಅವರಿಗೆ ಸೂಚಿಸಲಾಗಿದೆ ಎಂದು ಸಚಿವ ಭೈರತಿ ಸುರೇಶ್ ಈ ಸಂದರ್ಭದಲ್ಲಿ ತಿಳಿಸಿದರು.

- ಸಚಿವೆ ಶೋಭಾ ಕರಂದ್ಲಾಜೆ ಇಂಧನ ಸಚಿವರಾಗಿದ್ದಾಗ ನಡೆಸಿದ ಭ್ರಷ್ಟಾಚಾರ ಬಯಲಿಗೆಳೆಯುವೆ: ಸಚಿವ ಭೈರತಿ ಸುರೇಶ್
- ತಾಕತ್ತಿದ್ರೆ ನನ್ನ ಅಕ್ರಮದ ದಾಖಲೆ ಬಿಡುಗಡೆಗೊಳಿಸಿ: ಶೋಭಾ ಕರಂದ್ಲಾಜೆ
- ನಿಮ್ಮತ್ರ ಯಾವ ಫೈಲ್ ಇದೆ, ಯಾವ ಮಾಹಿತಿ ಇದೆ ಅದನ್ನು ಶೀಘ್ರದಲ್ಲೇ ಹೊರಹಾಕಿ ಎಂದ ಶೋಭಾ ಕರಂದ್ಲಾಜೆ

ಮುಡಾ ಕೇಸ್‌ನಲ್ಲಿ ಕೇಂದ್ರದ ಸಂಸ್ಥೆಗಳು ಎಂಟ್ರಿ

ಪೊನ್ನಣ್ಣ ಇರೋದು ಸಿಎಂ ಕಾನೂನು ಸಲಹೆಗಾರರಾಗಿರಲು. ಅದರಲ್ಲೂ ಭ್ರಷ್ಟಾಚಾರ ಮಾಡಲು ಹೋರಟ್ಟಿದ್ದೀರಿ. ನಿಮ್ಮ ಬಳಿ ಇರೋ ದಾಖಲೆ ತಕ್ಷಣ ಹೊರಗೆ ಹಾಕಿ. ನಿಮ್ಮಗೆ ಈಗ ಸಂಕಷ್ಟ ಶುರುರುವಾಗಿದೆ. ಮೈಸೂರು ನಿಂದ ಫೈಲ್ ತಂದಿದ್ದು ಸತ್ಯ, ಸುಟ್ಟು ಹಾಕಿದ್ದು ಸತ್ಯ. ಮುಡಾ ಬಗ್ಗೆ ತನಿಖೆ ಆರಂಭವಾಗಿದೆ. ತನಿಖೆಗೆ ಕೇಂದ್ರದ ಸಂಸ್ಥೆಗಳು ಎಂಟ್ರಿ ಆಗಿವೆ. ಈ ಭಯದಿಂದ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಭೈರತಿ ಸುರೇಶ್ ವಿರುದ್ಧ ಶೋಭಾ ಕರಂದ್ಲಾಜೆ ಆರೋಪ ಮಾಡಿದ್ದಾರೆ.

ರಕ್ಷಣೆ ಇಲಾಖೆ ಕರ್ತವ್ಯ

ಮಹಾರಾಷ್ಟ್ರದಲ್ಲಿ ನಡೆಯುತ್ತಿರುವ ವಿಧಾನಸಭಾ ಚುನಾವೆಯಲ್ಲಿ ಶಿವಸೇನೆ, ಬಿಜೆಪಿಯ NDA ಮೈತ್ರಿಕೂಟ ಗೆಲವು ಸಾಧಿಸಲಿದೆ ಎಂದು ಅವರು ಹೇಳಿದರು. ಬೆಳಗಾವಿಯಲ್ಲಿವೆ ಅತ್ಯಧಿಕ ಕಾರ್ಮಿಕರ ಕಾರ್ಡ್ ರಾಜಧಾನಿ ಬೆಂಗಳೂರಿನ ಬಳಿಕ ಹೆಚ್ಚು ಕಾರ್ಮಿಕರ ಕಾರ್ಡ್ ಹೊಂದಿರುವುದು ಬೆಳಗಾವಿ ನಗರ. ಬಹಳ ದೊಡ್ಡ ಕೈಗಾರಿಕಾ ಕಂಪನಿಗಳು ಇಲ್ಲಿವೆ. ಇಲ್ಲಿನ ಕೈಗಾರಿಕೆಯ ಕಂಪನಿಗಳು ಪುಣೆ ಹಾಗೂ ಮಹಾರಾಷ್ಟ್ರಕ್ಕೆ ವಸ್ತುಗಳನ್ನು ರವಾನಿಸುತ್ತಾರೆ. ಸುಮಾರು ಮೂರುವರೆ ಲಕ್ಷ ಕಾರ್ಮಿಕರು ಕಾರ್ಡ್‌ಗಳು ಇಲ್ಲಿವೆ. ಆ ಎಲ್ಲಾ ಕಾರ್ಮಿಕರ ರಕ್ಷಣೆ ಇಲಾಖೆ ಕರ್ತವ್ಯವಾಗಿದೆ ಎಂದರು.

ಹಳ್ಳಿಕಾರ ಸಮುದಾಯವನ್ನು ಪ್ರವರ್ಗ 1ಕ್ಕೆ ಸೇರಿಸಲು ಸೂಕ್ತ ತೀರ್ಮಾನ: ಸಿಎಂ

• ಉದಯವಾಹಿನಿ, ಬೆಂಗಳೂರು

ಹಳ್ಳಿಕಾರ ಸಮುದಾಯವನ್ನು ಪ್ರವರ್ಗ 1ಕ್ಕೆ ಸೇರಿಸಬೇಕೆಂಬ ಬೇಡಿಕೆ ಬಗ್ಗೆ ವರದಿ ತರಿಸಿಕೊಂಡು ನಂತರ ಸೂಕ್ತ ತೀರ್ಮಾನ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ತಿಳಿಸಿದ್ದಾರೆ.

ರಾಜ್ಯ ಹಳ್ಳಿಕಾರರ ಸಂಘ ಆಯೋಜಿಸಿದ್ದ ಹಳ್ಳಿಕಾರ ಸಮುದಾಯದ ಸಮಾವೇಶ, ವಿದ್ಯಾರ್ಥಿವೇತನ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ಹಳ್ಳಿ ಕಾರ ಸಮುದಾಯದ ಬಗ್ಗೆ ಸಹಾನುಭೂತಿ ಇದೆ. ಹಳ್ಳಿಕಾರ ಸಮುದಾಯವನ್ನು ಪ್ರವರ್ಗ 3ಎ ಸೇರಿಸಿದ್ದು ಸರಿಯಲ್ಲ. ಪ್ರವರ್ಗ 1ಕ್ಕೆ ಸೇರಿಸಬೇಕೆಂಬ ಬೇಡಿಕೆ ಬಗ್ಗೆ ವರದಿ ತರಿಸಿಕೊಂಡು ನಂತರ ಸೂಕ್ತ ತೀರ್ಮಾನ ಮಾಡುತ್ತೇನೆ ಎಂದರು.

ಸಮಾಜದಲ್ಲಿನ ವಿವಿಧ ಜಾತಿಯ ಆರ್ಥಿಕ, ಸಾಮಾಜಿಕ ಸ್ಥಿತಿ ಗತಿ ತಿಳಿಯಲು ಜಾತಿ ಸಮೀಕ್ಷಾ ವರದಿಗಳು ಮುಖ್ಯವಾಗಿದೆ. 2011 ರ ಜನಗಣತಿಯೇ ಕೊನೆ ಗಣತಿ. ಈಗ ನಮ್ಮ ಸರ್ಕಾರ ಜಾತಿ ಗಣತಿ ವರದಿಯನ್ನು ಸ್ವೀಕರಿಸಿದೆ. ಕೇಂದ್ರದ ಮೋದಿ ಸರ್ಕಾರ ಆರ್ಥಿಕವಾಗಿ ಹಿಂದುಳಿದವರಿಗೆ ಶೇ. 10 ರಷ್ಟು ಮೀಸಲಾತಿ ನೀಡಿದೆ.

ಈ ವ್ಯಾಪ್ತಿಯೊಳಗೆ ಹಳ್ಳಿಕಾರ ಸಮುದಾಯ ಬರುತ್ತದೆಯಾ ಎನ್ನುವುದು ಪರಿಶೀಲಿಸಬೇಕಿದೆ ಎಂದು ಹೇಳಿದರು.

ಹಳ್ಳಿಕಾರ ಸಮುದಾಯವನ್ನು ಪ್ರವರ್ಗ 3ಎ ಗೆ ಸೇರಿಸಿರುವುದು ಸರಿಯಲ್ಲ. ಆದ್ದರಿಂದ ಶಾಶ್ವತ ಹಿಂದುಳಿದ ಆಯೋಗಕ್ಕೆ ಬೇಡಿಕೆ ಕಳುಹಿಸಿ ಅಧ್ಯಯನ ಮಾಡಿಸಿ ವರದಿ ಪಡೆಯಲಾಗುವುದು. ಆ ಬಳಿಕ ಸಮು

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಬ್ರಾಹ್ಮಂ ಕೃತಯುಗಂ ಪ್ರೋಕ್ತಂ ತ್ರೇತಾ ತು ಕ್ಷತ್ರಿಯಂ ಯುಗಂ

ವೈಶ್ಯೋ ದ್ವಾಪರಮಿತ್ಯಾಹುಃ ಶೂದ್ರಃ ಕಲಿಯುಗಃ ಸ್ಮೃತಃ. ಮನುಸ್ಮೃತಿಯ ಪ್ರಥಮಾಧ್ಯಾಯದ ಪಾಠಾಂತರ ಶ್ಲೋಕ. ಕೃತಯುಗವು ಧರ್ಮಪ್ರಧಾನ ಬ್ರಾಹ್ಮಣಮಯ. ತ್ರೇತಾ ಯುಗವು ಕ್ಷತ್ರಿಯ ಪ್ರಧಾನ. ರಾಜರ ಆಳ್ವಿಕೆ. ದ್ವಾಪರ ಯುಗದಲ್ಲಿ ವ್ಯಾಪಾರವೇ ಹೆಚ್ಚು, ಆದ್ದರಿಂದ ವೈಶ್ಯಪ್ರಧಾನ. ಕಲಿಯುಗದಲ್ಲಿ ಶೂದ್ರನೇ ಮುಖ್ಯ. ಆತನೇ ಆಳುವನು. ಬರಬರುತ್ತಾ ಧರ್ಮವು ಕ್ಷೀಣಿಸುವುದು, ಶೂದ್ರನು ಧರ್ಮರಹಿತನು ಎಂಬ ಅಭಿಪ್ರಾಯ ಈ ಶ್ಲೋಕದಲ್ಲಿದೆ. ಬರಬರುತ್ತಾ ಜನರ ಗಮನ ಧರ್ಮದ ಕಡೆಗಿಂತ ಹಣ ಆಸ್ತಿ ಅಂತಸ್ತು ಅಧಿಕಾರಗಳ ಭೋಗಜೀವನದ ಕಡೆಗೆ ವಾಲುವುದರಿಂದ ಧರ್ಮವರ್ತನೆ ಕ್ಷೀಣಿಸುವುದು ಎಂಬುದನ್ನು ಒಪ್ಪಿಕೊಳ್ಳಬಹುದೇ ಹೊರತು ಯುಗವೇ ಕ್ಷತ್ರಿಯಮಯ ವೈಶ್ಯಮಯ ಶೂದ್ರಮಯ ಎಂದು ಹೇಳಲಾಗದು. ಧರ್ಮಕ್ಷೀಣತೆ ಎಲ್ಲಾ ಜನಾಂಗದಲ್ಲಿಯೂ ತೋರುತ್ತಿರುವುದನ್ನು ಅಲ್ಲಗಳೆಯಲಾಗದು.

ಭ್ರಷ್ಟ ಕಾಂಗ್ರೇಸ್‌ನಲ್ಲಿ ಈಗ ಹನಿಟ್ರ್ಯಾಪ್ ಬ್ರಿಗೇಡ್ ಗಳದ್ದೇ ಸದ್ದು ಬಿಜೆಪಿ ಟೀಕೆ

• ಉದಯವಾಹಿನಿ, ಬೆಂಗಳೂರು

ನಲಪಾಡ್ ಬ್ರಿಗೆಡ್ ಅಧ್ಯಕ್ಷೆಯನ್ನು ಮಾಜಿ ಸಚಿವರ ಪುತ್ರನಿಗೆ ಬ್ಲ್ಯಾಕ್ ಮೇಲ್ ಆರೋಪದಲ್ಲಿ ಬಂಧಿಸಿರುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಬಿಜೆಪಿ ಪ್ರತಿಕ್ರಿಯಿಸಿದ್ದು, ಸಂತ ಶರಣರ ನಾಡಾಗಿದ್ದ ಕಲ್ಬುರ್ಗಿ, ರೌಡಿ-ಗೂಂಡಾ-ಹನಿಟ್ರ್ಯಾಪ್ ಬ್ರಿಗೇಡ್, ಗಾಂಜಾ ನಾಡಾಗುತ್ತಿರುವುದು ಅತ್ಯಂತ ಕಳವಳಕಾರಿಯಾದ ಸಂಗತಿ ಎಂದು ಕಿಡಿಕಾರಿದೆ. ಕಾಂಗ್ರೆಸ್ ನ ಹಿರಿಯ ನಾಯಕರಿಗೆ ಕಾಂಗ್ರೇಸ್ ನ ಕಾರ್ಯಕರ್ತರೆ, ಹನಿಟ್ರ್ಯಾಪ್ ಬಲೆಗೆ ಕೆಡುವುತ್ತಾರೆಂದರೆ, ಕಾಂಗ್ರೇಸ್ಸಿಗರಲ್ಲಿ ಎಲ್ಲವೂ ಸರಿಯಿಲ್ಲ ಎಂದರ್ಥ ಎಂದು ಟೀಕಿಸಿದೆ. ಟ್ರೋಲ್ ಪ್ರಿಯಾಂಕ್ ಖರ್ಗೆ ಅವರೆ, ನಿಮ್ಮ ಕಾರ್ಯಕರ್ತರ ಹಾಗೂ ನಾಯಕರ ನಡುವಿನ ಹನಿಟ್ರ್ಯಾಪ್ ನ ಫ್ಯಾಕ್ಟ್ ಚೆಕ್ ಅನ್ನು ಯಾವಾಗ ಮಾಡಿಸುವಿರಿ.. ಎಂದು ಬಿಜೆಪಿ ಪ್ರಶ್ನಿಸಿದೆ.

ಟೆಕ್ ಸಂಸ್ಥೆಗಳ ಸಮಸ್ಯೆ ಪರಿಹಾರಕ್ಕೆ ಸಮಾಲೋಚನಾ ಸಮಿತಿ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯ ಟೆಕ್ ಪಾರ್ಕ್‌ಗಳಲ್ಲಿರುವ ಸಂಸ್ಥೆಗಳು ಎದುರಿಸುತ್ತಿರುವ ಸವಾಲು ಮತ್ತು ಸಮಸ್ಯೆಯನ್ನು ಪ್ರಾಮುಖ್ಯತೆ ಮೇರೆಗೆ ಬಗೆಹರಿಸಲು ರಾಜ್ಯ ಸರ್ಕಾರ, ಸಮಾಲೋಚನಾ ಸಮಿತಿ ರಚಿಸಿದೆ. ಡಿಸಿಎಂ ಡಿ.ಕೆ.ಶಿವಕುಮಾರ್ ಸಮಿತಿ ಅಧ್ಯಕ್ಷರಾದರೆ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರು ಉಪಾಧ್ಯಕ್ಷರಾಗಿದ್ದಾರೆ. ಕಿಯೋನಿಕ್ಸ್ ಸಂಸ್ಥೆಯ ಅಧ್ಯಕ್ಷರು, ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ, ಬಿಬಿಎಂಪಿ ಮುಖ್ಯ ಆಯುಕ್ತರು, ಬೆಂಗಳೂರು ನಗರ ಪೊಲೀಸ್ ಆಯುಕ್ತ ಮತ್ತು ಡಿಸಿಎಂ ಕಾರ್ಯದರ್ಶಿಯವರು ಸಮಿತಿ ಸದಸ್ಯರಾಗಿದ್ದಾರೆ. ಬಿಬಿಎಂಪಿ ಪ್ರಧಾನ ಅಭಿಯಂತರ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ. ನಗರದಲ್ಲಿ ಇನ್ಫೋಸಿಸ್, ವಿಪ್ರೋ, ಗೂಗಲ್, ಮೈಕ್ರೋಸ್ಟ್, ಐಬಿಎಂ ಸೇರಿ ವಿಶ್ವದ ಪ್ರಮುಖ ಬಹುರಾಷ್ಟ್ರೀಯ ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ. ಕಂಪನಿಗಳಲ್ಲಿ ಲಾಂತರ ಉದ್ಯೋಗಿಗಳು ಕೆಲಸ ಮಾಡುತ್ತಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ, ವೈಟ್‌ಫೀಲ್ಡ್, ಮಾನ್ಯತಾ ಟೆಕ್ ಪಾರ್ಕ್ ಸೇರಿ ನಗರದ ವಿವಿಧ ಕಡೆಗಳಲ್ಲಿರುವ ಟೆಕ್ ಪಾರ್ಕ್‌ಗಳು ಎದುರಿಸುತ್ತಿರುವ ಸಮಸ್ಯೆ ಬಗೆಹರಿಸಲು ಸಮಿತಿ ರಚಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಮುಲಕನಾಡು ಪಂಗಡ ಬಗ್ಗೆ ಇನ್ನಷ್ಟು ಸಂಶೋಧನೆ ಅಗತ್ಯವಿದೆ

• ಉದಯವಾಹಿನಿ, ಬೆಂಗಳೂರು

ದೇಶದ ಸಂಸ್ಕೃತಿ, ಸಂಪ್ರದಾಯ, ಆಚಾರ-ವಿಚಾರ ಉಳಿಸಿ ಬೆಳೆಸುವಲ್ಲಿ ಮುಂಚೂಣಿಯಲ್ಲಿರುವ ಮುಲಕನಾಡು ಪಂಗಡ ಕುರಿತು ಹೆಚ್ಚು ಸಂಶೋಧನೆ ನಡೆಯುವ ಅಗತ್ಯವಿದೆ ಎಂದು ಹಿರಿಯ ಸಂಶೋಧಕ ಡಾ. ಬಾಬು ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು. ಗಿರಿನಗರದ ಶಂಕರಮಠ ಆವರಣದಲ್ಲಿ ಆಯೋಜಿಸಲಾಗಿದ್ದ 'ಲೇಖಕ ಕೆ.ಎಸ್. ರಾಮಮೂರ್ತಿ ರಚಿಸಿರುವ 'ಕೋಲಾರ ಜಿಲ್ಲಾ ಮುಲಕನಾಡು ಬ್ರಾಹ್ಮಣರು' ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಮುಲಕನಾಡು ಪಂಗಡವೂ ಸೇರಿ ಅನೇಕ ಬ್ರಾಹ್ಮಣ ಪಂಗಡಗಳೂ ಸಮಾಜದಲ್ಲಿ ನಿಸ್ವಾರ್ಥವಾಗಿ ಕೆಲಸ ಮಾಡುತ್ತಿವೆ. ಸನಾತನ ವೇದ, ಪುರಾಣಾಗಮ, ಉಪನಿಷತ್, ಭಗವದ್ಗೀತೆ ಮತ್ತು ಪ್ರಶ್ನಾತ್ರಯ ಮುಂತಾದ ಅಮೂಲ್ಯ ದಾಖಲೆಗಳ ಉಳಿವಿಗೆ ಕಾರಣೀಭೂತವಾಗಿವೆ. ಈ ದಿಶೆಯಲ್ಲಿ ಪಂಗಡ ಕುರಿತು ಇನ್ನಷ್ಟು ಸಂಶೋಧನೆ ನಡೆಯುವ ಕಾರ್ಯ ತಕ್ಷಣ ಆಗಬೇಕಿದೆ ಎಂದರು. ಹಾಸ್ಯ ಬರಹಗಾರ ಎಂ.ಎಸ್.ನರಸಿಂಹಮೂರ್ತಿ ಮಾತನಾಡಿ, ದೇಶ ಕಟ್ಟುವ ಕಾರ್ಯಕ್ಕೆ ಸಮರ್ಪಿಸಿಕೊಳ್ಳುವ ಯುವಶಕ್ತಿಗೆ ಸ್ಫೂರ್ತಿ ತುಂಬುವ ಕೆಲಸವನ್ನು ಮುಲಕನಾಡು ಸಮುದಾಯ ಮಾಡುತ್ತಿದೆ. ಸಮಾಜದ ಏಳಿಗೆಗೆ ಅನೇಕ ಕಾರ್ಯಗಳನ್ನೂ ಮಾಡಿದೆ ಎಂದರು. ಸಂಶೋಧಕ ಡಾ. ಆರ್.ಶೇಷಶಾಸ್ತ್ರಿ, ಲೇಖಕ ಕೆ.ಎಸ್.ರಾಮಮೂರ್ತಿ ಸೇರಿ ಮತ್ತಿತರರಿದ್ದರು.

ಅಬಕಾರಿ ಸಚಿವರ ಬದಲಿಸಲು ಮದ್ಯದಂಗಡಿ ಮಾಲೀಕರ ಆಗ್ರಹ

• ಉದಯವಾಹಿನಿ, ಬೆಂಗಳೂರು

ಅಬಕಾರಿ ಸಚಿವರನ್ನೇ ಬದಲಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿರುವ ಮದ್ಯದಂಗಡಿ ಮಾಲೀಕರು, ಇಲಾಖೆಯಲ್ಲಿ ಮಿತಿ ಮೀರಿರುವ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕದಿದ್ದರೆ ನ.20ರಿಂದ ಅಂಗಡಿಗಳನ್ನು ಬಂದ್ ಮಾಡುವುದಾಗಿ ಸರ್ಕಾರಕ್ಕೆ ಮತ್ತೊಮ್ಮೆ ಎಚ್ಚರಿಕೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಫೆಡರೇಷನ್ ಆಫ್ ವೈನ್ ಮರ್ಚೆಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಗುರುಸ್ವಾಮಿ, ಅಬಕಾರಿ ಇಲಾಖೆಯಲ್ಲಿ ಲಂಚಾವತಾರಕ್ಕೆ ಎಲ್ಲೆ ಮೀರಿದ್ದು, ಸನ್ನದುದಾರರಿಗೆ ಸಾಕಷ್ಟು ಕಿರುಕುಳ ನೀಡಲಾಗುತ್ತಿದೆ. ಅಧಿಕಾರಿಗಳ ವರ್ಗಾವಣೆಗೆ ಕೋಟ್ಯಂತರ ವಸೂಲಿ ಮಾಡುತ್ತಿರುವ ಸಚಿವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಈವರೆಗೆ ಶಾಂತಿಯುತವಾಗಿ ಪ್ರತಿಭಟನೆ ನಡೆಸಿದರೂ ಪ್ರಯೋಜನವಾಗಿಲ್ಲ. ಮುಂಬರುವ ದಿನಗಳಲ್ಲಿ ಸಿಎಂ, ಸಚಿವರ ನಿವಾಸ, ಆಯುಕ್ತರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು. ವಿವಿಧ ಬೇಡಿಕೆಗಳನ್ನು ನ.20ರೊಳಗೆ ಈಡೇರಿಸದಿದ್ದರೆ ರಾಜ್ಯಾದ್ಯಂತ ಮದ್ಯದಂಗಡಿಗಳನ್ನು ಬಂದ್ ಮಾಡುವುದಾಗಿ ಸರ್ಕಾರಕ್ಕೆ ಎಚ್ಚರಿಕೆ ಸಂದೇಶ ರವಾನಿಸಿದೆ. ಒಟ್ಟಾಗಿದ್ದರೆ ಅಧಿಕಾರಿಗಳಿಗೆ ಬುದ್ಧಿ ಕಲಿಸುವ ಜತೆಗೆ ಸಮಸ್ಯೆಗಳಿಗೂ ಪರಿಹಾರ ಸಿಗುತ್ತದೆ. ಪ್ರತಿ ನಿತ್ಯ ಸರ್ಕಾರಕ್ಕೆ ಬರುತ್ತಿರುವ 125 ಕೋಟಿ ರೂ. ಆದಾಯ ಸ್ಥಗಿತವಾದರೆ ನಮ್ಮ ಸಮಸ್ಯೆ ಬಗೆಹರಿಯುವ ವಿಶ್ವಾಸವಿದೆ ಎಂದರು.

ಸಿನಿಮಾದಲ್ಲಿ ಮಹಿಳೆಯರನ್ನು ಕೀಳಾಗಿ ತೋರಿಸಲಾಗುತ್ತಿದೆ ನಟಿಯರೆಲ್ಲ ಪರದಾಟ

• ಉದಯವಾಹಿನಿ, ಬೆಂಗಳೂರು

ಖ್ಯಾತ ಚಲನಚಿತ್ರ ನಿರ್ಮಾಪಕ ಮಣಿರತ್ನಂ ಅವರ ಪತ್ನಿ ಸುಹಾಸಿನಿ ಇತ್ತೀಚೆಗೆ ಚಿತ್ರರಂಗದಲ್ಲಿ ಮಹಿಳೆಯರ ಶೋಷಣೆಯ ಬಗ್ಗೆ ಬಹಿರಂಗವಾಗಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಅವರು ಅನೇಕ ಆಘಾತಕಾರಿ ಬಹಿರಂಗಪಡಿಸಿದ್ದಾರೆ. ಮಾಧ್ಯಮ ಸಂಸ್ಥೆವೊಂದಕ್ಕೆ ನೀಡಿದ ಸಂದರ್ಶನದಲ್ಲಿ, ಪಾಶ್ಚಾತ್ಯರ ಪ್ರಭಾವದಿಂದ ದೇಹ ಪ್ರದರ್ಶನ, ಇಂಟಿಮೇಟ್ ದೃಶ್ಯಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ.ಮುಖ್ಯ ಪಾತ್ರಗಳಲ್ಲಿ ನಟಿಸುತ್ತಿದ್ದ ಕಾಲದಲ್ಲಿ ನಾಯಕಿಯರನ್ನು ತೋರಿಸಲು ಮತ್ತು ಇಂಟಿಮೇಟ್ ದೃಶ್ಯಗಳಲ್ಲಿ ನಟಿಸಲು ತುಂಬಾ ಮುಜುಗರಪಡುತ್ತಿದ್ದರು. ಸ್ಕಿನ್ ಶೋ ದೃಶ್ಯಗಳಿರುವ ಚಿತ್ರಗಳಿಗೆ ತಮ್ಮ ತಲೆಮಾರಿನ ನಾಯಕಿಯರು ಬೇಡ ಎಂದಿರುವ ಪ್ರಕರಣಗಳು ಸಾಕಷ್ಟಿವೆ. ಈಗಿನ ನಾಯಕಿಯರು ಆ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ.

ಡಿಕೆಶಿ ಅವರೇ ನನ್ನ ಸಿಡಿ ನಿಮ್ಮ ಬಳಿ ಇದ್ರೆ ರಿಲೀಸ್ ಮಾಡಿ

ಸಿ ಪಿ ಯೋಗೇಶ್ವರ್ ಅವರು ಪಕ್ಷಾಂತರದ ನಿರ್ಧಾರ ತೆಗೆದುಕೊಂಡ್ರಾ ಎಂಬ ಬಗ್ಗೆ ಚರ್ಚೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಉಪಚುನಾವಣೆ ಕಾವು ರಾಜ್ಯ ರಾಜಕೀಯದಲ್ಲಿ ಜೋರಾಗಿದೆ. ಸಿ ಪಿ ಯೋಗೇಶ್ವರ್ ಬಿಜೆಪಿ ತೊರೆದು ಕಾಂಗ್ರೇಸ್ ಸೇರ್ಪಡೆಯಾಗಿದ್ದು, ಕಾಂಗ್ರೇಸ್ ಸೇರ್ಪಡೆ ಹಿಂದೆ ಡಿ ಕೆ ಶಿವಕುಮಾರ್ ಸಿಡಿ ರಹಸ್ಯದ ಇದೆ ಎನ್ನುವ ಆರೋಪ ಕೇಳಿ ಬಂದಿದೆ.

ಈ ಕುರಿತು ಚನ್ನಪಟ್ಟಣ ಕಾಂಗ್ರೇಸ್ ಅಭ್ಯರ್ಥಿ ಸಿ ಪಿ ಯೋಗೇಶ್ವರ್ ಅವರ ಪುತ್ರಿ ನಿಶಾ ಯೋಗೇಶ್ವರ್ ಅವರು ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ಹಂಚಿಕೊಂಡಿದ್ದಾರೆ.

ಡಿ ಕೆ ಶಿವಕುಮಾರ್ ಸರ್.. ನನ್ನ ಸಿಡಿ ನಿಮ್ಮ ಬಳಿ ಇದ್ದರೆ ಯಾವುದೇ ಯೋಚನೆ ಮಾಡದೇ ರಿಲೀಸ್ ಮಾಡಿ ಎಂದು ಹೇಳಿದ್ದಾರೆ. ಖಾಸಗಿ ಸುದ್ದಿ ವಾಹಿನಿಯಲ್ಲಿ ಸಿ ಡಿ ವಿಚಾರವಾಗಿ ಪ್ರಸ್ತಾಪವಾಗಿದ್ದು, ಪುತ್ರಿಯ ರಕ್ಷಣೆಗಾಗಿ ಸಿ ಪಿ ಯೋಗೇಶ್ವರ್ ಅವರು ಪಕ್ಷಾಂತರದ ನಿರ್ಧಾರ ತೆಗೆದುಕೊಂಡ್ರಾ ಎಂಬ ಬಗ್ಗೆ ಚರ್ಚೆಯಾಗಿದೆ. ಮಗಳ ಸಿಡಿ ಬಳಿಸಿಕೊಂಡು ಡಿ ಕೆ ಶಿವಕುಮಾರ್ ಅವರು ಕಾಂಗ್ರೇಸ್ ಪಕ್ಷಕ್ಕೆ ಸಿ ಪಿ ಯೋಗೇಶ್ವರ್ ಅವರನ್ನ ಕರೆ ತಂದಿದ್ದಾರೆ ಎಂದು ಡಿ ಕೆ ಶಿವಕುಮಾರ್ ಮೇಲೆ ಆರೋಪ ಇದೆ ಎಂದು ನಿಶಾ ಯೋಗೇಶ್ವರ್ ಅವರು ಹೇಳಿದ್ದಾರೆ. ಡಿ ಕೆ ಶಿವಕುಮಾರ್ ಸರ್ ನಿಮ್ಮ ಮೇಲೆ ಈ ರೀತಿಯಾದ ಆರೋಪ ಇದೆ. ನೀವು ನನ್ನ ಸಿಡಿ ಇಟ್ಟುಕೊಂಡು ನನ್ನ ತಂದೆಯನ್ನ ನಿಮ್ಮ ಪಕ್ಷಕ್ಕೆ ಎನ್ನುವ ಆರೋಪ ಇದೆ. ಡಿ ಕೆ ಶಿವಕುಮಾರ್ ಸರ್ ನೀವು ಯಾವುದಕ್ಕೂ ಹೆದರುವುದು ಬೇಡ, ನಿಮ್ಮ ಬಳಿ ಸಿಡಿ ಇದ್ರೆ ಹಿಂಜರಿಯದೇ ಸಿಡಿ ಬಿಡುಗಡೆ ಮಾಡಿ ಸರ್ ಎಂದು ನಿಶಾ ಯೋಗೇಶ್ವರ್ ಮನವಿ ಮಾಡಿದ್ದಾರೆ. ನನ್ನ ಅಗ್ನಿ ಪರೀಕ್ಷೆ ನಡೆಯುತ್ತಿದೆ. ಆ ಸಿಡಿ ಇಲ್ಲ ಎನ್ನುವುದಾದ್ರೆ ಅದನ್ನು ಸಹ ಜನರಿಗೆ ಬಂದು ತಿಳಿಸಿ ಸರ್. ಇದು ದೊಡ್ಡ ಆರೋಪ ನಿಮ್ಮ ಮೇಲಿದೆ. ನೀವು ದೊಡ್ಡವರು ಸರ್, ನಿಮ್ಮಲ್ಲಿ ಸಿಡಿ ವಿಷಯ ಮಾಮೂಲಿ, ಆದರೆ ನೀವು ಹೆಣ್ಣು ಮಕ್ಕಳನ್ನು ಇಂತಹ ವಿಷಯನ್ನ ಎಳೆಯುತ್ತಿದೀರಾ ಎಂದು ನನಗೆ ಶಾಕ್ ಆಗುತ್ತಿದೆ.

ಉದಯವಾಹಿನಿ ಚಿತ್ರ

ಸಿಡಿ ರಹಸ್ಯದ ಆರೋಪ

> ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಪ್ರತಿಷ್ಠೆಯ ಕಣವಾಗಿದೆ. ಕಾಂಗ್ರೇಸ್ ನಿಂದ ಮಾಜಿ ಸಚಿವ ಸಿ ಪಿ ಯೋಗೇಶ್ವರ್ ಕಣಕ್ಕಿಳಿದಿದ್ದು, ಎನ್ ಡಿ ಎ ಅಭ್ಯರ್ಥಿಯಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ನಡೆಸಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಸೋಲು ಕಂಡ ಡಿ ಕೆ ಬ್ರದರ್ಸ್ ಈ ಚುನಾವಣೆಯಲ್ಲಿ ಗೆಲ್ಲುವ ಮೂಲಕ ದಳಪತಿಗಳಿಗೆ ಠಕ್ಕರ್ ಕೊಡುವ ನಿಟ್ಟಿನಲ್ಲಿ ಸಿ ಪಿ ಯೋಗೇಶ್ವರ್ ಅವರನ್ನ ಕಣಕ್ಕಿಳಿಸಿದ್ದಾರೆ.

> ಡಿ ಕೆ ಶಿವಕುಮಾರ್ ಸರ್, ನೀವು ಒಬ್ರು ತಂದೆ. ನಿಮಗೂ ಹೆಣ್ಣು ಮಕ್ಕಳಿದ್ದಾರೆ. ಸರ್, ನಮ್ಮ ಪೀಳಿಗೆಗೆ ಸ್ಪಷ್ಟತೆ ಬೇಕು. ಆ ಸ್ಪಷ್ಟತೆಯನ್ನ ನೀವೇ ಕೊಡಿ ಸರ್. ನನ್ನ ಸಿಡಿ ನಿಜವಾಗಿಯೂ ನಿಮ್ಮ ಬಳಿ ಇದ್ರೆ, ಯಾವುದೇ ಯೋಚನೆ ಮಾಡದೇ ಬಿಡುಗಡೆ ಮಾಡಿ. ನಿಮ್ಮ ಉತ್ತರಕ್ಕೆ ನಾನು ಕಾಯುತ್ತಿರುತ್ತೇನೆ ಎಂದು ನಿಶಾ ಯೋಗೇಶ್ವರ್ ಹೇಳಿದ್ದಾರೆ.

ಪ್ರತಿಯೊಬ್ಬರೂ ಎಲ್ಲಾ ಸಮಾಜವನ್ನು ಗೌರವಿಸಿ

• ಉದಯವಾಹಿನಿ, ಬೆಂಗಳೂರು

ಎಲ್ಲಾ ಸಮಾಜವನ್ನು ಪ್ರತಿಯೊಬ್ಬರೂ ಗೌರವದಿಂದ ಕಾಣುವಂತಾಗಬೇಕೆಂದು ದಣಾಮ್ಮಾಯ ಶ್ರೀ ಶೃಂಗೇರಿ ಶಾರದಪೀಠದ ಪೀಠಾಧೀಶ ಶ್ರೀ ವಿಧುಶೇಖರಭಾರತಿ ಸ್ವಾಮೀಜಿ ಹೇಳಿದ್ದಾರೆ. ಶೃಂಗೇರಿ ಶಾರದಪೀಠ ವತಿಯಿಂದ ಚಾಮರಾಜಪೇಟೆಯ ಶ್ರೀ ಶೃಂಗೇರಿ ಶಂಕರಮಠದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಸವಿತಾ ಸಮಾಜ ಕುರಿತು ಆಶೀರ್ವಚನ ನೀಡಿದರು.

ಸವಿತಾ ಸಮುದಾಯದವರು ಕ್ಷೌರಿಕ ವೃತ್ತಿ ಮೂಲಕ ನಮ್ಮೆಲ್ಲರನ್ನೂ ಸುಂದರವಾಗಿ ಕಾಣಿಸುತ್ತಾರೆ. ವಾದ್ಯ ಸೇವೆ ದೇವರ ಸೇವೆಯಾಗಿದೆ. ಮಂಗಲವಾದ್ಯ ವಿಶೇಷ ವೃತ್ತಿಯಾಗಬೇಕು. ಮಂಗಳವಾದ್ಯ ನುಡಿಸುವ ಸಮುದಾಯವನ್ನು ಕಂಡರೆ ಎಲ್ಲವೂ ಮಂಗಳವಾಗಲಿದೆ.

ಈ ವೃತ್ತಿಗೆ ಶಾಶ್ವತವಾದ ನೆಲೆ, ಬೆಲೆ, ಗೌರವ ಸಿಗುವಂತಾಗ ಬೇಕು.ಸರ್ಕಾರದಿಂದಲೂ ಸೂಕ್ತ ಪ್ರೋತ್ಸಾಹ ದೊರೆಯುವಂತಾಗಲಿ ಎಂದು ಶ್ರೀಗಳು ಆಶಿಸಿದರು. ಸವಿತಾ ಸಮಾಜದ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ನರೇಶ್ ಕುಮಾರ್ ಮಾತನಾಡಿ, ಸವಿತಾ ಸಮಾಜದವರಿಂದ ಮಂಗಳವಾದ್ಯ ಸೇವೆಗೆ ಅವಕಾಶಕ್ಕೆ ಶ್ರೀಗಳು ಒಪ್ಪಿಗೆ ನೀಡಿದ್ದಾರೆ. ಚಾತುರ್ಮಾಸದಲ್ಲಿ ಗುರುದರ್ಶನ ಮಾಡುವುದು ವಿಶೇಷವಾದದ್ದು. ಕಾರ್ಯಕ್ರಮದಿಂದ ಸಮುದಾಯದ ಕುರಿತು ಸಮಾಜದಲ್ಲಿರುವ ಅಭಿಪ್ರಾಯ ಬದಲಿ ಒಳ್ಳೆಯ ಅಭಿಪ್ರಾಯ ಮೂಡುವಂತೆ ಮಾಡುವುದಕ್ಕೆ ಸಹಕಾರಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಯಡತೊರೆ ಶ್ರೀ ಯೋಗಾನಂದೇಶ್ವರ ಸ್ವರಸತೀ ಮಠದ ಮಠಾಧೀಶ ಶ್ರೀ ಶಂಕರ ಭಾರತೀ ಸ್ವಾಮೀಜಿ ದಿವ್ಯ ಆಶೀರ್ವಚನ ನೀಡಿದರು. ಉಪ ತಹಶೀಲ್ದಾರ್ ನಂದೀಶ್, ಎಸಿಪಿ ನಾರಾಯಣಸ್ವಾಮಿ, ವಕೀಲ ನರಸಿಂಹರಾಜು ಸೇರಿ ಸವಿತಾ ಸಮುದಾಯದ ಸಾವಿರಾರು ಜನರು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಶೇ.61ರಷ್ಟು ವಾಡಿಕೆಗಿಂತ ಅಧಿಕ ಮಳೆ

• ಉದಯವಾಹಿನಿ, ಬೆಂಗಳೂರು

ಈ ಬಾರಿ ಹಿಂಗಾರು ಅಬ್ಬರಿಸಿದ್ದು,ಅ.1ರಿಂದ ಅ.24ರವರೆಗೆ ರಾಜ್ಯಾದ್ಯಂತ 111 ಮಿಮೀ ಬದಲಾಗಿ 179 ಮಿಮೀ ಸುರಿದಿದ್ದು ವಾಡಿಕೆಗಿಂತ ಶೇ.61ರಷ್ಟು ಅಧಿಕ ಮಳೆಯಾಗಿದೆ. ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಈ ಬಾರಿ ವಾಡಿಕೆಗಿಂತ ಅಧಿಕ ಮಳೆ ಸುರಿದಿರುವುದು ಗಮನಾರ್ಹ. 2023ರ ಅ.1ರಿಂದ ಅ.24ರವರೆಗೆ 100 ಮಿಮೀ ಮಳೆಯಾಗುವ ಬದಲು 40 ಮಿಮೀ ಸುರಿದಿದ್ದು, ಶೇ.60ರಷ್ಟು ಮಳೆ ಕೊರತೆಯಾಗಿತ್ತು.

ಮುಂಗಾರು ಮುಗಿದ ಬೆನ್ನಲ್ಲೇ ಅ.1ರಿಂದ ಆರಂಭವಾದ ಹಿಂಗಾರು, ನಾಲ್ಕು ವಾರಗಳ ರಾಜ್ಯಾದ್ಯಂತ ಉತ್ತಮ ಮಳೆಯಾಯಿತು. 2024ರ ಅ.1ರಿಂದ ಅ.24ರವರೆಗೆ 16 ಜಿಲ್ಲೆಗಳಲ್ಲಿ ವಾಡಿಕೆಗಿಂತ ಅತಿ ಹೆಚ್ಚು, 5 ಜಿಲ್ಲೆಗಳಲ್ಲಿ ಹೆಚ್ಚು ಮತ್ತು 9 ಜಿಲ್ಲೆಗಳಲ್ಲಿ ವಾಡಿಕೆಯಷ್ಟೇ ಮಳೆ ಸುರಿದಿದೆ. ರಾಯಚೂರಿನಲ್ಲಿ ಮಾತ್ರ ಮಳೆ ಅಭಾವ ಉಂಟಾಗಿತ್ತು. ದಣ ಕರ್ನಾಟಕ ವ್ಯಾಪ್ತಿಯ ಜಿಲ್ಲ

100 ಹಾಸಿಗೆಗಳ ಇಎಸ್‌ಐ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ

● ಜಿಲ್ಲೆಯಲ್ಲಿ ಹೆಚ್ಚು ಕೈಗಾರಿಕಾ ಪ್ರದೇಶ ಇರುವುದರಿಂದ ಕಾರ್ಮಿಕರ ಬಹಳ ವರ್ಷಗಳ ಬೇಡಿಕೆಯಾಗಿತ್ತು

• ಉದಯವಾಹಿನಿ ಕೋಲಾರ

ಜಿಲ್ಲೆಯಲ್ಲಿ ಹೆಚ್ಚು ಕೈಗಾರಿಕಾ ಪ್ರದೇಶ ಇರುವುದರಿಂದ ಕಾರ್ಮಿಕರ ಬಹಳ ವರ್ಷಗಳ ಬೇಡಿಕೆಯಾಗಿದ್ದ ಇಎಸ್‌ಐ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಕನಸು ಕೊನೆಗೂ ನನಸಾಗುವ ಹಂತ ತಲುಪಿದೆ.

ತಾಲ್ಲೂಕಿನ ನರಸಾಪುರ ಕೈಗಾರಿಕಾ ಪ್ರದೇಶದಲ್ಲಿ 100 ಹಾಸಿಗೆಗಳ ಕಾರ್ಮಿಕರ ರಾಜ್ಯ ವಿಮಾ (ಇಎಸ್‌ಐ) ಆಸ್ಪತ್ರೆ ನಿರ್ಮಾಣಕ್ಕೆ ಅ.29ರ ಮಂಗಳವಾರ ಬೆಳಿಗ್ಗೆ ಶಂಕುಸ್ಥಾಪನೆ ನೆರವೇರಲಿದೆ.

ಅಂದು ನಡೆಯಲಿರುವ ಕಾರ್ಯಕ್ರಮದಲ್ಲಿ ನವದೆಹಲಿಯಿಂದ ಪ್ರಧಾನಿ ನರೇಂದ್ರ ಮೋದಿ ವರ್ಚುಲ್ ವೇದಿಕೆಯಲ್ಲಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್, ಸಂಸದ ಎಂ.ಮಲ್ಲೇಶ್ ಬಾಬು, ಶಾಸಕರು, ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಐದು ಎಕರೆ ಜಾಗವನ್ನು ನೋಂದಾಯಿಸಲಾಗಿದೆ. ಕಾರ್ಮಿಕರಿಗೆ, ಅವರ ಕುಟುಂಬದವರಿಗೆ ಉಚಿತ ಚಿಕಿತ್ಸೆ ಸಿಗಲಿದೆ. ವಿಶೇಷ ಯೋಜನೆಯಡಿ ಇತರರು ನಿಗದಿತ ಶುಲ್ಕ ನೀಡಿ ಚಿಕಿತ್ಸೆ ಪಡೆಯಬಹುದು. ಆಸ್ಪತ್ರೆ ನಿರ್ಮಾಣಕ್ಕೆ 120 ಕೋಟಿ ಅನುದಾನ ನಿಗದಿಪಡಿಸಿದ್ದು, ಹಂತಹಂತವಾಗಿ ಬಿಡುಗಡೆಯಾಗಲಿದೆ
-ರವಿ ಚಂದ್ರಶೇಖರ್, ಕೇಂದ್ರ ಸರ್ಕಾರದ ಕಾರ್ಮಿಕ ರಾಜ್ಯ ವಿಮಾ ನಿಗಮದ (ಇಎಸ್‌ಐಸಿ) ಜಿಲ್ಲಾ ಅಧೀಕ್ಷಕ ಕೆಜಿಎಫ್

120 ಕೋಟಿ ವೆಚ್ಚದ ಯೋಜನೆ ಇದಾಗಿದ್ದು,

ಕನಸು ಕೊನೆಗೂ ನನಸಾಗುವ ಹಂತ

ಉದಯವಾಹಿನಿ ಚಿತ್ರ

ಕೈಗಾರಿಕಾ ಪ್ರದೇಶದ ಭಾರತ್ ಪೆಟ್ರೋಲಿಯಂ ಬಳಿ ಐದು ಎಕರೆ ಪ್ರದೇಶದಲ್ಲಿ ಸುಸಜ್ಜಿತ ಆಸ್ಪತ್ರೆ ತಲೆ ಎತ್ತಲಿದೆ. 29 ತಿಂಗಳಲ್ಲಿ ಕಾಮಗಾರಿ ಮುಗಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಸ್ಥಾಪನೆಯಾದರೆ ಜಿಲ್ಲೆಯ 80 ಸಾವಿರಕ್ಕೂ ಅಧಿಕ ಕಾರ್ಮಿಕರಿಗೆ ಸಹಾಯವಾಗಲಿದೆ. ಏಕೆಂದರೆ ಜಿಲ್ಲೆಯಲ್ಲಿ ಸರ್ಕಾರದ ಯಾವುದೇ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲ.

ಕಾರ್ಮಿಕ ರಾಜ್ಯ ವಿಮಾ ನಿಗಮ ಕೆಜಿಎಫ್ ಇಎಸ್‌ಐ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇದಾಗಿದ್ದು ಎಲ್ಲಾ ತರಹದ ಚಿಕಿತ್ಸಾ ಸೌಲಭ್ಯ ಇರಲಿದೆ. 29 ತಿಂಗಳಲ್ಲಿ ಕಾಮಗಾರಿ ಮುಗಿಯಲಿದೆ. ಕಾರ್ಮಿಕರಿಗೆ ಕುಟುಂಬದವರಿಗೆ ಉಚಿತ ಚಿಕಿತ್ಸೆ ಸಿಗಲಿದೆ
-ರವಿ ಚಂದ್ರಶೇಖರ್, ಜಿಲ್ಲಾ ಅಧೀಕ್ಷಕ

ಜಿಲ್ಲೆಯಲ್ಲಿ ನರಸಾಪುರ, ವೇಮಗಲ್ ಹಾಗೂ ಮಾಲೂರು ಕೈಗಾರಿಕಾ ಪ್ರದೇಶ ಇರುವುದರಿಂದ ಇಎಸ್‌ಐ ಆಸ್ಪತ್ರೆ ನಿರ್ಮಿಸಬೇಕೆಂದು ಹಲವು ವರ್ಷಗಳ ಕೂಗು ಆಗಿದೆ. ಕಾರ್ಮಿಕರು ಅಲ್ಲದೇ, ಸಿಪಿಎಂ, ಸಿಐಟಿಯು ಸೇರಿದಂತೆ ಹಲವಾರು ಕಾರ್ಮಿಕ ಸಂಘಟನೆಗಳು ಹೋರಾಟ ನಡೆಸಿವೆ. ಆರೇಳು ವರ್ಷಗಳ ಹಿಂದೆಯೂ ಯೋಜನೆ ಮಂಜೂರು ಆಗಿದ್ದರೂ ವಿವಿಧ ಕಾರಣಗಳಿಂದ ವಿಳಂಬವಾಗಿದೆ.

ಪ್ರಧಾನಿ ಮೋದಿ ವರ್ಚುವಲ್ ವೇದಿಕೆಯಲ್ಲಿ ಉದ್ಘಾಟಿಸಲಿದ್ದಾರೆ

ಕೇಂದ್ರ ಹಾಗೂ ರಾಜ್ಯ ಸಹಯೋಗದಲ್ಲಿ ಕೈಗೆತ್ತಿಗೊಂಡಿರುವ ಯೋಜನೆ ಇದಾಗಿದೆ. 29ರಂದು ಬೆಂಗಳೂರು ಗ್ರಾಮಾಂತರದ ಬೊಮ್ಮಸಂದ್ರದಲ್ಲಿ ಕೂಡ 100 ಹಾಸಿಗೆಗಳ ಇಎಸ್‌ಐ ಆಸ್ಪತ್ರೆ ಸ್ಥಾಪನೆಗೆ ಶಂಕುಸ್ಥಾಪನೆ ನಡೆಯಲಿದೆ. ಅದನ್ನೂ ಪ್ರಧಾನಿ ಮೋದಿ ವರ್ಚುವಲ್ ವೇದಿಕೆಯಲ್ಲಿ ಉದ್ಘಾಟಿಸಲಿದ್ದಾರೆ. ರಾಮನಗರ ಜಿಲ್ಲೆಯ ಹಾರೋಹಳ್ಳಿ ಕೈಗಾರಿಕಾ ಪ್ರದೇಶದಲ್ಲೂ ಇಎಸ್‌ಐ ಆಸ್ಪತ್ರೆಗೆ ಶಂಕುಸ್ಥಾಪನೆ ನೆರವೇರಿಸಬೇಕಿತ್ತು. ಆದರೆ, ಉಪಚುನಾವಣಾ ನೀತಿ ಸಂಹಿತೆ ಕಾರಣ ಅದು ನೆರವೇರುತ್ತಿಲ್ಲ ಎಂಬುದು ಗೊತ್ತಾಗಿದೆ.

ಮಿನಿ ನ್ಯೂಸ್

ಚನ್ನಪಟ್ಟಣ ಉಪ ಚುನಾವಣೆ: ಪೊಲೀಸ್, ಅರೆ ಸೇನಾಪಡೆ ಪಥ ಸಂಚಲನ

ಉದಯವಾಹಿನಿ ಚಿತ್ರ

• ಉದಯವಾಹಿನಿ ಚನ್ನಪಟ್ಟಣ

ಉಪ ಚುನಾವಣೆ ಕಣವಾಗಿರುವ ತಾಲ್ಲೂಕಿನಲ್ಲಿ ಪೊಲೀಸರು ಮತ್ತು ಅರೆ ಸೇನಾಪಡೆ ಭಾನುವಾರ ಪಥ ಸಂಚಲನ ನಡೆಸಿದರು.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಚನ್ನಪಟ್ಟಣ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಹೊಂಗನೂರು, ತಗಚಗೆರೆ, ಕೋಡಂಬಳ್ಳಿ ಹಾಗೂ ಮೊಳೆದೊಡ್ಡಿ ಗ್ರಾಮಗಳಲ್ಲಿ ಜಿಲ್ಲಾ ಪಥ ಸಂಚಲನ ನಡೆಯಿತು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಟಿ.ವಿ. ಸುರೇಶ್, ಚನ್ನಪಟ್ಟಣ ಡಿವೈಎಸ್ಪಿ ಕೆ.ಸಿ. ಗಿರಿ ಸೇರಿದಂತೆ ಸ್ಥಳೀಯ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಗಳು ಭಾಗವಹಿಸಿದ್ದರು.

ಚನ್ನಪಟ್ಟಣದಲ್ಲಿ ಕಾಂಗ್ರೇಸ್‌ನ ತಂಡದಿಂದ ನಿಖಿಲ್‌ಗೆ ಬೆಂಬಲ: ಅಶೋಕ್

• ಉದಯವಾಹಿನಿ ರಾಮನಗರ

ನಿಖಿಲ್ ಕುಮಾರಸ್ವಾಮಿಗೆ ಎರಡು ಚುನಾವಣೆಯಲ್ಲಿ ಸೋತಿರುವ ಅನುಕಂಪವಿದ್ದು, ಈ ಚುನಾವಣೆಯಲ್ಲಿ ಗೆಲುವು ನಿಶ್ಚಿತ. ಯೋಗೇಶ್ವರ್ ಕಾಂಗ್ರೇಸ್ ಸೇರ್ಪಡೆಯಿಂದ ಅಲ್ಲಿಯ ಕಾರ್ಯಕರ್ತರು ರೆಬೆಲ್ ಆಗಿದ್ದಾರೆ. ಡಿಸಿಎಂ ಡಿ.ಕೆ. ಶಿವಕುಮಾರ್ ಕಟ್ಟಪ್ಪಣೆ ಮಾಡಿ ಸುಮ್ಮನಿರಿಸಿದ್ದಾರೆ. ಕಾಂಗ್ರೆಸ್‌ನ ಒಂದು ಟೀಂ ನಮಗೆ (ಎನ್‌ಡಿಎ ಅಭ್ಯರ್ಥಿ) ಬೆಂಬಲಿಸುತ್ತದೆ ಎಂದು ವಿಪಕ್ಷದ ನಾಯಕ ಆರ್.ಅಶೋಕ್ ಹೇಳಿದರು.

ಇಲ್ಲಿನ ಜಾನಪದ ಲೋಕದ ಸಮೀಪ ಇರುವ ಖಾಸಗಿ ಹೊಟೇಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅಧಿಕಾರದಲ್ಲಿರುವ ಪಕ್ಷಕ್ಕೆ ಹೋಗುವುದು ಯೋಗೇಶ್ವರ್‌ಗೆ ಚಾಳಿಯಾಗಿದೆ. ಅವರು ಕಾಂಗ್ರೇಸ್ ಸೇರಿರುವುದು ಚನ್ನಪಟ್ಟಣ ಅಭಿವೃದ್ಧಿಗಾಗಿ ಅಲ್ಲ, ಸ್ವಂತ ಅಭಿವೃದ್ಧಿಗಾಗಿ. ಕಾಂಗ್ರೆಸ್ ಅವರನ್ನು ಹರಕೆಯ ಕುರಿ ಮಾಡುತ್ತಿದೆ ಎಂದರು. ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಮಾತನಾಡಿ, ಚನ್ನಪಟ್ಟಣದ ಕೆರೆಗಳನ್ನು ತುಂಬಿಸುವ ನೀರಾವರಿ ಯೋಜನೆಗೆ 150 ಕೋಟಿ ರೂ. ಹಣ ಬಿಡುಗಡೆ ಮಾಡಿದ್ದು ನಾನು. ಭಗೀರಥ ಎಂಬ ಕ್ರೆಡಿಟ್ ನನಗೆ ಹಾಗೂ ಬಿಜೆಪಿ ಪಕ್ಷಕ್ಕೆ ಬರಬೇಕು.

ಯೋಗೇಶ್ವರ್ ಅವರ ಪಾತ್ರ ಇದರಲ್ಲಿ ಏನೂ ಇಲ್ಲ ಎಂದರು. ಮಾಜಿ ಡಿಸಿಎಂ ಡಾ. ಅಶ್ವತ್ಥ್ ನಾರಾಯಣ್ ಮಾತನಾಡಿದರು.

ಪಾರ್ವತಿ ಸಿದ್ದರಾಮಯ್ಯ ವಿರುದ್ಧ ಇಡಿಗೆ ಮತ್ತೊಂದು ದೂರು ಸಲ್ಲಿಕೆ

• ಉದಯವಾಹಿನಿ, ಮೈಸೂರು

ಮುಡಾ ಹಗರಣದಲ್ಲಿ ಈಗಾಗಲೇ ಸಿಎಂ ಸಿದ್ದರಾಮಯ್ಯ ಹಾಗೂ ಪತ್ನಿ ಪಾರ್ವತಿ ಅವರಿಗೆ ತೀವ್ರ ಸಂಕಷ್ಟ ಎದುರಾಗಿದ್ದು, ಕಳೆದ ಎರಡು ದಿನಗಳ ಹಿಂದೆ ಪತ್ನಿ ಪಾರ್ವತಿ ಅವರನ್ನು ವಿಚಾರಣೆಗೆ ಒಳಪಡಿಸಲಾಗಿತ್ತು. ಇದೀಗ ಪಾರ್ವತಿ ಸಿದ್ದರಾಮಯ್ಯ ವಿರುದ್ಧ ಜಾರಿ ನಿರ್ದೇಶನಾಲಯಕ್ಕೆ ಮತ್ತೊಂದು ದೂರು ನೀಡಲಾಗಿದೆ.

ಹೌದು ಆರ್‌ಟಿಐ ಕಾರ್ಯಕರ್ತ ಗಂಗರಾಜು ಅವರು ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ವಿರುದ್ಧ ಮತ್ತೊಂದು ದಾಖಲಿಸಿದ್ದಾರೆ. ಮೈಸೂರಿನ ಕೈಗಾರಿಕಾ ಪ್ರದೇಶದಲ್ಲಿ 2023ರ ನವೆಂಬರ್‌ನಲ್ಲಿ 1.84 ಕೋಟಿ ರೂ. ಹಣ ನೀಡಿ ಖರೀದಿಸಿರುವ 20 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಹಣದ ಮೂಲ ಪತ್ತೆ ಹಚ್ಚಿ ಎಂದು ಆರ್‌ಟಿಐ ಕಾರ್ಯಕರ್ತ ಗಂಗರಾಜು ಇಆ ಗೆ ದೂರು ನೀಡಿದ್ದಾರೆ.

ಇನ್ನು ಕೆಆರ್‌ಎಸ್ ರಸ್ತೆಯಲ್ಲಿ 20 ಗುಂಟೆ ಜಮೀನು ಖರೀದಿ ಕುರಿತು ಆಕ್ಷೇಪ ವ್ಯಕ್ತಪಡಿಸಿದ್ದರು. ಅಲ್ಲದೆ ಮೊದಲ ಪ್ರಕರಣದಲ್ಲಿ ಕೆಸರೆಯ ಸರ್ವೇ ನಂಬರ್ 462 ಮತ್ತು 464ರ 3.16 ಎಕರೆ ಭೂಮಿ ಹಾಗೂ 14 ಸೈಟ್ ವಿಚಾರದಲ್ಲಿ ದಾಖಲೆ ಬಿಡುಗಡೆ ಮಾಡಿದ್ದರು. ಹೀಗಾಗಿ ವೈಯಕ್ತಿಕ ಮಾಹಿತಿಗಳ ಜತೆಗೆ ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗುವಂತೆ ಇ.ಡಿ. ನೋಟಿಸ್ ನೀಡಿದೆ. ಈ ಹಿನ್ನೆಲೆಯಲ್ಲಿ ಗಂಗರಾಜು ಇಡಿ ವಿಚಾರಣೆಗೆ ಹಾಜರಾಗಲಿದ್ದಾರೆ.

ಕಳವು ಪ್ರಕರಣ: ಇಬ್ಬರ ಬಂಧನ, 8.5 ಲಕ್ಷದ ಒಡವೆ, ವಾಹನ ವಶ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಳವಳ್ಳಿ

ತಾಲ್ಲೂಕಿನ ಕಿರುಗಾವಲು ಪೊಲೀಸರು ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಭಾನುವಾರ ಇಬ್ಬರನ್ನು ಬಂಧಿಸಿ, ಅವರಿಂದ 8.5 ಲಕ್ಷ ಮೌಲ್ಯದ 114 ಗ್ರಾಂ.ತೂಕದ ಚಿನ್ನಾಭರಣ, ಕೃತ್ಯಕ್ಕೆ ಬಳಸಿದ್ದ ಬೈಕ್ ಅನ್ನು ವಶಪಡಿಸಿಕೊಂಡಿದ್ದಾರೆ. ಕಿರುಗಾವಲು ನಿವಾಸಿ ಸುಮೇದ್(27) ಹಾಗೂ ಬೆಂಗಳೂರಿನ ಸೈಯದ್ ಸೈಫ್(26) ಬಂಧಿತರು.

ಕಿರುಗಾವಲಿನ ಪುಟ್ಟೇಗೌಡನಕೊಪ್ಪಲು ಗ್ರಾಮದ ಸುರೇಶ್ ಎಂಬುವರು ಆಗಸ್ಟ್ 15ರಂದು ಕುಟುಂಬಸಮೇತ ಬೆಂಗಳೂರಿಗೆ ತೆರಳುತ್ತಿದ್ದಾಗ, ಮನೆಯ ಬಾಗಿಲು ಮುರಿದ ಕಳ್ಳರು ಬೀರಿನ ಬಾಗಿಲು ಮೀಟಿ 114 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ಕಳವು ಮಾಡಿದ್ದ ಬಗ್ಗೆ ಪ್ರಕರಣ ದಾಖಲಾಗಿತ್ತು. ಆರೋಪಿಗಳ ಪತ್ತೆಗೆ ಹಲಗೂರು ಸಿಪಿಐ ಬಿ.ಎಸ್. ಶ್ರೀಧರ್ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಲಾಗಿತ್ತು.

ಕಿರುಗಾವಲು ಪಿಎಸ್‌ಐ ಡಿ.ರವಿಕುಮಾರ್, ಸಿಬ್ಬಂದಿ ರಿಯಾಜ್ ಪಾಷ, ಪ್ರಭುಸ್ವಾಮಿ, ಎಂ.ಕೆ.ನಾಗೇಂದ್ರ, ಜಯಕುಮಾರ್, ಮಹೇಶ್, ಮಹೇಂದ್ರ, ಶ್ರೀನಿವಾಸ್, ಮಧುಕಿರಣ್, ಸಿದ್ದರಾಜು, ಮಲ್ಲಿಕಾರ್ಜುನ ಚುಳಕಿ, ಅನಿಲ್, ಎನ್.ಸಿ.ಶಿವಕುಮಾರ್, ರವಿಕಿರಣ್, ಲೋಕೇಶ್, ಮಹದೇವಸ್ವಾಮಿ, ಪ್ರೀತಿಕುಮಾರ್ ಆರೋಪಿಗಳನ್ನು ಬಂಧಿಸಿದ್ದರು. ಆರೋಪಿ ಸುಮೇದ್ ಬೆಂಗಳೂರಿನ ಪರಿಚಯಸ್ಥ ಸೈಯದ್ ಸೈಫ್ ಎಂಬಾತನನ್ನು ಕರೆಸಿಕೊಂಡು ರಾತ್ರಿ ಬೀಗಹಾಕಿದ ಮನೆಗಳ ಬಾಗಿಲು ಮುರಿದು ಕೃತ್ಯ ನಡೆಸುತ್ತಿದ್ದ ಬಗ್ಗೆ ವಿಚಾರಣೆ ವೇಳೆ ತಿಳಿದು ಬಂದಿದೆ.

ಉಚಿತ ಹೊಲಿಗೆ ಯಂತ್ರ ವಿತರಣಾ ಕಾರ್ಯಕ್ರಮ

• ಉದಯವಾಹಿನಿ, ಬಂಗಾರಪೇಟೆ

ಮಹಿಳೆಯರ ಸ್ವಾವಲಂಬಿ ಬದುಕಿಗೆ ಆಸರೆಯಾಗುವ ನಿಟ್ಟಿನಲ್ಲಿ ಸರ್ಕಾರ ಉಚಿತವಾಗಿ ಹೊಲಿಗೆ ಯಂತ್ರಗಳನ್ನು ನೀಡುವುದರ ಮೂಲಕ ಆರ್ಥಿಕ ಸಬಲೀಕರಣಕ್ಕೆ ಮುನ್ನುಡಿ ಬರೆಯಲಾಗಿದೆ ಎಂದು ಶಾಸಕ ಎಸ್ ಎನ್ ನಾರಾಯಣ ಸ್ವಾಮಿ ಅಭಿಪ್ರಾಯಪಟ್ಟರು

ಉದಯವಾಹಿನಿ ಚಿತ್ರ

ಪಟ್ಟಣದ ಹೊರವಲಯದ ಎಸ್ ಎನ್ ರೆಸಾರ್ಟ್ ಆವರಣದಲ್ಲಿ ದೇವರಾಜ್ ಅರಸು ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಆಯೋಜಿಸಲಾಗಿದ್ದ ಉಚಿತ ಹೊಲಿಗೆ ಯಂತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಕಾಂಗ್ರೇಸ್ ಸರ್ಕಾರ ಬದ್ಧವಾಗಿದ್ದು ಸ್ವಯಂ ಉದ್ಯೋಗಕ್ಕೆ ಅವಕಾಶವನ್ನು ಕಲ್ಪಿಸಿಕೊಡುವುದರ ಮೂಲಕ ಆರ್ಥಿಕವಾಗಿ ಸಾಮಾಜಿಕವಾಗಿ ಪ್ರಗತಿಯ ಹಾದಿಯಲ್ಲಿ ಮುನ್ನುಡಿ ಬರೆಯಲು ಪ್ರೇರಕವಾಗಿದೆ ಎಂದರು.

ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಮನವಿ: ಗ್ರಾಮೀಣ ಭಾಗದ ಮಹಿಳೆಯರ ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡಲು ಹೋಳಿಗೆ ಯಂತ್ರಗಳನ್ನು ನೀಡಲಾಗಿದ್ದು, ತಾಲ್ಲೂಕಿನಾದ್ಯಂತ 36 ಜನ ಫಲಾನುಭವಿಗಳು ಅರ್ಜಿಯನ್ನು ಹಾಕಿದರು, ಅರ್ಜಿ ಹಾಕಿದ ಪ್ರತಿಯೊಬ್ಬರಿಗೂ ಜಾತಿ ಮತ ಪಕ್ಷ ಭೇದ ಮರೆತು ಹೊಲಿಗೆ ಯಂತ್ರಗಳನ್ನು ನೀಡಲಾಗಿದೆ ಅರ್ಹ ಫಲಾನುಭವಿಗಳು ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ಕೊಟ್ಟರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಗೋವಿಂದ, ಜಿಲ್ಲಾ ವ್ಯವಸ್ತಾಪಕರು ಸುಜಾತ ಚಂದವಾಕಟೆ, ಸಹಾಯಕ ಅಭಿವೃದ್ಧಿ ಅಧಿಕಾರಿ ವಿ ಲಕ್ಷ್ಮಯ್ಯ, ಸಿಬ್ಬಂದಿ ವಿಶ್ವನಾಥ್, ಮುಖಂಡರಾದ ವಿವೇಕಾನಂದ, ಹೆಚ್.ಕೆ.ನಾರಾಯಣಸ್ವಾಮಿ, ಷಫಿ, ವರ್ತೂರು ಬಾಬು ಇತರರು ಉಪಸ್ಥಿತರಿದ್ದರು.

ರೈಲ್ವೆ ನೌಕರರು ಎಸ್‌ಡಬ್ಲ್ಯೂ ಆರ್ ಕೆ ಟಿ ಎ ಸಂಘವನ್ನು ಬಲಪಡಿಸಬೇಕು

• ಉದಯವಾಹಿನಿ, ಬಂಗಾರಪೇಟೆ

ದೇಶದ ಆರ್ಥಿಕತೆಯ ಅತಿ ದೊಡ್ಡ ಸಂಸ್ಥೆ ರೈಲ್ವೆ ಇಲಾಖೆ ಯಾಗಿದೆ ಆದರೆ ಇಂದಿಗೂ ಸಹ ನೌಕರರು 10 ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಈ ಹಿನ್ನಲೆಯಲ್ಲಿ ತಮ್ಮ ಹಕ್ಕುಗಳಿಗಾಗಿ ಚುನಾವಣೆಯಲ್ಲಿ ಸ್ಪರ್ಧೆ ಮಾಡಬೇಕಾಗಿರುವುದು ಅನಿವಾರ್ಯ ಆದಕಾರಣ ಎಲ್ಲಾ ನೌಕರರು ಇರಬೇಕು, ಎಸ್ ಡಬ್ಲ್ಯೂ ಆರ್‌ಕೆಟಿಎ ಸಂಘವನ್ನು ಬಲಪಡಿಸಬೇಕು ಎಂದು ಮಾರಿಕುಪ್ಪಕ ರೈಲ್ವೆ ನಿಲ್ದಾಣ ವ್ಯವಸ್ಥಾಪಕ ರಮೇಶ್ ಗೌಡ ತಿಳಿಸಿದರು.

ಪಟ್ಟಣದ ಹೊರವಲಯದ ಶ್ಯಾಮ್ ಆಸ್ಪತ್ರೆಯ ಮುಂಭಾಗದಲ್ಲಿರುವ ಎ,ವಿ ,ಕೆ , ಕಲ್ಯಾಣ ಮಂಟಪದಲ್ಲಿ ಸೌತ್ ವೆಸ್ಟರ್ನ್ ರೈಲ್ವೆ ಎಂಪ್ಲಾಯೀಸ್ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಬೃಹತ್ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಜಾತಂತ್ರ ವ್ಯವಸ್ಥೆಯಲ್ಲಿ ನಮ್ಮ ಹಕ್ಕುಗಳಿಗಾಗಿ ಚುನಾವಣೆಯಲ್ಲಿ ಭಾಗವಹಿಸುವುದು

ಉದಯವಾಹಿನಿ ಚಿತ್ರ

ಅನಿವಾರ್ಯ ಈ ನಿಟ್ಟಿನಲ್ಲಿ ಡಿಸೆಂಬರ್ 4, 5, ಮತ್ತು 6ರಂದು ನಡೆಯುವ ಚುನಾವಣೆಯಲ್ಲಿ ನಮ್ಮ ಸಂಘಟನೆಯನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಧಿಕಾರಿಗಳಾದ ತುಳಿಸಿದಾಸ್ ಬಿಕೆ, ಶ್ರೀನಿವಾಸ್, ನೇಮಚೆಂದ ಮೀನಾ, ಪ್ರಭಾಕರ್, ಮಹೇಶ್, ಶ್ರೀ ರಾಮ್, ನಾಗರಾಜ್ ಸಿಜೆ, ಆಫೀಸ್, ಬಾಬು, ಪುನೀತ್, ಶಿವಕುಮಾರ್, ಶಶಿಕುಮಾರ್, ಇತರರು ಉಪಸ್ಥಿತರಿದ್ದರು.

ಚುನಾವಣೆಯಲ್ಲಿ ಗೆದ್ದ ನಂತರ ಕಾರ್ಮಿಕರ ವಸತಿಗೆ ಸಂಬಂಧಪಟ್ಟಂತೆ ವಸತಿಗೃಹಗಳನ್ನು ಸಮರ್ಪಕವಾಗಿ ಹಂಚಿಕೆ ಮಾಡಲಾಗುವುದು ಹಾಗೂ ರೈಲ್ವೆ ಇಲಾಖೆಯಲ್ಲಿರುವಂತ ಎಲ್ಲಾ ಸೌಲಭ್ಯಗಳನ್ನು ನೌಕರರಿಗೆ ತಲುಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು, ಇದರೊಟ್ಟಿಗೆ ರೈಲ್ವೆ ಆಸ್ಪತ್ರೆಗಳನ್ನು ಉನ್ನತೀಕರಣ ಗೊಳಿಸುವುದರೊಂದಿಗೆ ಅತ್ಯಾಧುನಿಕ ಸೌಲಭ್ಯಗಳನ್ನು ಒದಗಿಸಿ ನೌಕರರ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು, ಮತ್ತು ಕಾರ್ಮಿಕರ ಸಮಸ್ಯೆಗಳಿಗೆ ಸಂಬಂಧಪಟ್ಟಂತೆ ಪ್ರತಿ ತಿಂಗಳಿಗೊಮ್ಮೆ ಕಾರ್ಮಿಕರು ಮತ್ತು ಅಧಿಕಾರಿಗಳ ನಡುವೆ ಸಮೋಲೋಚನ ಸಭೆಯನ್ನು ಆಯೋಜಿಸಲಾಗುವುದು ಇದರೊಟ್ಟಿಗೆ ಎಲ್,ಡಿ,ಸಿ,ಈ, ಯನ್ನು ಮುಕ್ತವನ್ನಾಗಿಸುತ್ತಿವೆ -ರಮೇಶ್ ಗೌಡ, ಮಾರಿಕುಪ್ಪಕ ರೈಲ್ವೆ ನಿಲ್ದಾಣ ವ್ಯವಸ್ಥಾಪಕ

ಮಾಲಿನ್ಯ ಮುಕ್ತ ದೀಪಾವಳಿ ಹಬ್ಬಕ್ಕೆ ಮನವಿ

• ಉದಯವಾಹಿನಿ, ಕುಶಾಲನಗರ

ಹಣತೆ ಬೆಳಗಿಸಿ, ಮಾಲಿನ್ಯ ತಡೆಯಿರಿ, ಮಾಲಿನ್ಯಕಾರಿ ಪಟಾಕಿ ತ್ಯಜಿಸಿ, ಹಸಿರು ಪಟಾಕಿ ಬಳಸಿ, ಮಾಲಿನ್ಯ ಮುಕ್ತ ದೀಪಾವಳಿ ಆಚರಿಸಿ, ಪರಿಸರ ಸ್ನೇಹಿ ದೀಪಾವಳಿ ಆಚರಿಸಿ, ಹಸಿರು ದೀಪಾವಳಿ- ಪರಿಸರ ದೀಪಾವಳಿ, ಪರಿಸರ ಸ್ನೇಹಿ ದೀಪಾವಳಿ ಆಚರಿಸಿ ಎಂಬಿತ್ಯಾದಿ ಘೋಷಣೆಗಳನ್ನು ಕೂಗಿದ ಕೂಡುಮಂಗಳೂರು ಪ್ರೌಢ ಶಾಲೆಯ ವಿದ್ಯಾರ್ಥಿಗಳು ಮಾಲಿನ್ಯಮುಕ್ತ

ಅಂತರಾಳದಿಂದ... EDITORIAL

ಕಜಾನ್‌ನಲ್ಲಿ ಮೋದಿ-ಷಿ ಭೇಟಿ

ಹೊಸ ಸೌಹಾರ್ದ ಬಹುಕಾಲ ಇರಲಿ

ಈ ಸೌಹಾರ್ದ ಎಷ್ಟು ದಿನ ಇರಬೇಕು ಎಂಬುದನ್ನು ನಿರ್ಧರಿಸುವ ಅವಕಾಶವನ್ನು ಚೀನಾಕ್ಕೆ ಭಾರತವು ಈ ಬಾರಿ ಕೊಡಬಾರದು ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾದ ಅಧ್ಯಕ್ಷ ಷಿ ಜಿನ್ ಪಿಂಗ್ ಅವರು ರಷ್ಯಾದ ತತಾರ್‌ಸ್ತಾನ್ ಗಣರಾಜ್ಯದ ರಾಜಧಾನಿ ಕಜಾನ್‌ನಲ್ಲಿ ನಡೆದ ಬ್ರಿಕ್ಸ್‌ನ 16ನೇ ಶೃಂಗಸಭೆ ಸಂದರ್ಭದಲ್ಲಿ ಭೇಟಿಯಾಗಿದ್ದಾರೆ. ಐದು ವರ್ಷಗಳಲ್ಲಿ ಇದು ಈ ಇಬ್ಬರ ನಡುವೆ ನಡೆದ ಮೊದಲ ಅಧಿಕೃತ ದ್ವಿಪಕ್ಷೀಯ ಮಾತುಕತೆ. ಪೂರ್ವ ಲಡಾಕ್‌ನಲ್ಲಿ ವಾಸ್ತವ ನಿಯಂತ್ರಣ ರೇಖೆಯ (ಎಲ್‌ಸಿ) ಉದ್ದಕ್ಕೂ 2020ರ ಏಪ್ರಿಲ್-ಮೇ ತಿಂಗಳಲ್ಲಿ ನಡೆದ ಸೇನಾ ಸಂಘರ್ಷವು ಎರಡೂ ದೇಶಗಳ ನಡುವಣ ಸಂಬಂಧವು ಹದಗೆಡುವಂತೆ ಮಾಡಿತ್ತು. ಇಬ್ಬರು ನಾಯಕರ ಭೇಟಿಗೆ ಕೆಲವು ವಾರಗಳಿಂದಲೇ ಪೂರ್ವತಯಾರಿ ನಡೆದಿತ್ತು.

ರಾಜತಂತ್ರಜ್ಞರು ಮತ್ತು ಸೇನಾಧಿಕಾರಿಗಳ ನಡುವೆ ಹಲವು ಸುತ್ತುಗಳ ಮಾತುಕತೆ ಆಗಿತ್ತು. ಗಡಿಯ ಎರಡೂ ಭಾಗಗಳಲ್ಲಿ ಜಮಾಯಿಸಲಾಗಿದ್ದ ಸೈನಿಕರನ್ನು ಪರಸ್ಪರ ಒಪ್ಪಿಗೆ ಮೂಲಕ ಹಿಂದಕ್ಕೆ ಕರೆಸಿಕೊಳ್ಳಲಾಗಿದ್ದರೂ ಡೆಪ್ರಾಂಗ್ ಮತ್ತು ಡೆಮ್‌ಚೋಕ್‌ನಲ್ಲಿ ಸಂಘರ್ಷ ಮುಂದುವರಿದಿತ್ತು. ರಾಜತಂತ್ರಜ್ಞರು ಮತ್ತು ಸೇನಾಧಿಕಾರಿಗಳ ನಡುವಣ ಮಾತುಕತೆಯ ಬಳಿಕ ಈ ಪ್ರದೇಶಗಳಲ್ಲಿಯೂ ಗಸ್ತು ವ್ಯವಸ್ಥೆ ಮಾಡಲಾಗಿತ್ತು. ಹೀಗೆ ಮಾತುಕತೆಗೆ ಪೂರಕವಾದ ವಾತಾವರಣವನ್ನು ಸೃಷ್ಟಿಸಲಾಗಿತ್ತು.

ಇತ್ತೀಚೆಗೆ ನಡೆದಿರುವ ಒಪ್ಪಂದದ ಹೆಚ್ಚಿನ ವಿವರಗಳನ್ನು ಬಹಿರಂಗಗೊಳಿಸಿಲ್ಲ. 2020ರಲ್ಲಿ ಭಾರತವು ಗಸ್ತು ನಡೆಸುತ್ತಿದ್ದ ಪ್ರದೇಶಗಳಲ್ಲಿ ಗಸ್ತು ಆರಂಭಿಸಲು ಚೀನಾ ಒಪ್ಪಿಕೊಂಡಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಹೇಳಿದ್ದಾರೆ. ಗೋಗ್ರಾ ಪೋಸ್ಟ್ ಮತ್ತು ಹಾಟ್ ಸ್ಪ್ರಿಂಗ್‌ನ ವಿವಿಧ ಪ್ರದೇಶಗಳಿಂದ ಎರಡೂ ದೇಶಗಳು ಸೇನೆ ಹಿಂತೆಗೆದುಕೊಂಡ ಬಳಿಕ ಸೃಷ್ಟಿಸಲಾದ ತಟಸ್ಥ ವಲಯಗಳು ಹಾಗೆಯೇ ಮುಂದುವರಿಯಲಿವೆ. ಎಲ್‌ಸಿಯ ಉದ್ದಕ್ಕೂ 2020ಕ್ಕೂ ಹಿಂದಿನ ಗಸ್ತು ವ್ಯವಸ್ಥೆ ಮರುಸ್ಥಾಪನೆ ಆಗದೇ ಇದ್ದರೆ ಚೀನಾದ ಸೇನೆಗೆ ಅದು ಅನುಕೂಲಕರ ಸ್ಥಿತಿ. ವಿವಾದಿತ ಗಡಿಯಲ್ಲಿ ಈಗ ಆಗಿರುವ ಬದಲಾವಣೆಗಳೇ 'ಹೊಸ ವಾಸ್ತವ' ಎಂಬುದನ್ನು ಚೀನಾವು ಹೇರದಂತೆ ಭಾರತವು ನೋಡಿಕೊಳ್ಳಬೇಕು: ಹಾಗೆ ಆಗುವುದಿಲ್ಲ ಎಂಬ ಭರವಸೆಯನ್ನು ಸರ್ಕಾರವು ಜನರಿಗೆ ನೀಡಬೇಕು. ಮೋದಿ ಅವರು ಷಿ ಅವರಿಗೆ ಸಾಬರಮತಿ ನದಿಯ ದಂಡೆಯಲ್ಲಿ 2014ರ ಸೆಪ್ಟೆಂಬರ್‌ನಲ್ಲಿ ಆತಿಥ್ಯ ಒದಗಿಸುತ್ತಿದ್ದಾಗ ಅತ್ತ ಲಡಾಕ್‌ನ ಎಲ್‌ಸಿಯ ಚುಮಾರ್ ಎಂಬಲ್ಲಿ ಸೇನೆಗಳ ನಡುವೆ ಮುಖಾಮುಖಿ ನಡೆದಿತ್ತು. ಪಶ್ಚಿಮ ಭೂತಾನ್‌ನ ದೋಕಲಾಂ ತಪ್ಪಲಿನಲ್ಲಿ 2017ರ ಜೂನ್ ಆಗಸ್ಟ್‌ನಲ್ಲಿ ಚೀನಾ ಕಾರ್ಯಾಚರಣೆ ನಡೆಸಿತ್ತು. ಅದಾಗಿ ಒಂದು ವರ್ಷಕ್ಕೂ ಮೊದಲೇ ಇಬ್ಬರೂ ನಾಯಕರು ಚೀನಾದ ವುಹಾನ್‌ನಲ್ಲಿ 'ಅನೌಪಚಾರಿಕ' ಮಾತುಕತೆ ನಡೆಸಿದ್ದರು. ಅದಾದ ಬಳಿಕ, 2019ರ ಅಕ್ಟೋಬರ್‌ನಲ್ಲಿ ಇಬ್ಬರೂ ನಾಯಕರು ಚೆನ್ನೈ ಸಮೀಪದ ಮಾಮಲ್ಲಪುರದಲ್ಲಿ ಭೇಟಿಯಾದರು. ಆದರೆ ಈ ಎರಡೂ ಕಡೆಯಲ್ಲಿ ವ್ಯಕ್ತವಾದ ಸ್ನೇಹ ಮತ್ತ ಸೌಹಾರ್ದ ಬಹುಕಾಲ ಬಾಳಲಿಲ್ಲ. 2020ರ ಜೂನ್‌ನಲ್ಲಿ ಗಾಲ್ವನ್ ಕಣಿವೆಯಲ್ಲಿ ಭಾರತದ ಯೋಧರು ಮತ್ತು ಚೀನಾದ ಸೈನಿಕರ ನಡುವೆ ಹಿಂಸಾತ್ಮಕ ಸಂಘರ್ಷ ನಡೆಯಿತು. ಈ ಸಂಘರ್ಷವು ಎರಡೂ ದೇಶಗಳ ನಡುವಣ ಸಂಬಂಧವನ್ನು ಪಾತಾಳಕ್ಕೆ ತಳ್ಳಿತು. ನಾಲ್ಕು ವರ್ಷಗಳಿಂದ ಪರಿಸ್ಥಿತಿ ಹಾಗೆಯೇ ಇದೆ. ಈಗ, ತತಾರ್‌ಸ್ತಾನ್‌ನಲ್ಲಿ ಮೂಡಿರುವ ಸೌಹಾರ್ದವು ಎಷ್ಟು ದಿನ ಬಾಳಬಹುದು ಈ ಸೌಹಾರ್ದ ಎಷ್ಟು ದಿನ ಇರಬೇಕು ಎಂಬುದನ್ನು ನಿರ್ಧರಿಸುವ ಅವಕಾಶವನ್ನು ಚೀನಾಕ್ಕೆ ಭಾರತವು ಈ ಬಾರಿ ಕೊಡಬಾರದು.

> ಗಸ್ತು ನಡೆಸುತ್ತಿದ್ದ ಹಲವು ಪ್ರದೇಶಗಳಿಗೆ ಭಾರತದ ಸೈನಿಕರು ಹೋಗುವುದನ್ನು ಚೀನಾದ ಸೈನಿಕರು 2020ರಲ್ಲಿ ತಡೆದಿದ್ದರು. 2020ರ ಹಿಂದಿನ ಸ್ಥಿತಿಗೆ ಗಸ್ತು ವ್ಯವಸ್ಥೆ ಮರುಸ್ಥಾಪನೆಯಾದರೆ ಅದು ಭಾರತಕ್ಕೆ ಮಹತ್ವದ ಬೆಳವಣಿಗೆ ಎಂಬುದರಲ್ಲಿ ಅನುಮಾನವೇ ಇಲ್ಲ. ದೌಲತ್ ಬೇಗ್ ಓಲ್ಡಿ ಸೇನಾ ನೆಲೆಯಿಂದ ಕಾರ್ಯಾಚರಣೆ ನಡೆಸಲು ಮತ್ತು ಕಾರಕೋರಂ ಕಣಿವೆಯವರೆಗೆ ಸಾಗುವುದು ಭಾರತಕ್ಕೆ ಸಾಧ್ಯವಾಗುತ್ತದೆ. ಚೀನಾದ ಅಕ್ರಮಣಶೀಲತೆಗೆ ತಡೆ ಒಡ್ಡಲು ಇದರಿಂದ ಅನುಕೂಲವಾಗುತ್ತದೆ. ಆಗಾಗ ಕುಟುಕುತ್ತಲೇ ಇರುವ ಚೀನಾದ ಕಾರ್ಯತಂತ್ರದ ಬೆದರಿಕೆ ಸದಾ ಇದ್ದೇ ಇರುತ್ತದೆ. ಗಾಲ್ವನ್ ಕಣಿವೆ ಮತ್ತು ಪ್ಯಾಂಗಾಂಗ್ ಸರೋವರದ ಉತ್ತರ ದಂಡೆಯಲ್ಲಿ ಪರಸ್ಪರ ಒಪ್ಪಿಗೆ ಮೇರೆಗೆ ಆಗಿರುವ ಗಸ್ತು ಸ್ಥಗಿತದಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ.

ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ಬೈಎಲೆಕ್ಷನ್ ಕುತ್ತು

ಚನ್ನಪಟ್ಟಣದಲ್ಲಿ ಕಾಂಗ್ರೇಸ್‌ನ ಗೆಲುವಿನ ಮೇಲೆ ಡಿಕೆಶಿ ಭವಿಷ್ಯ ನಿಂತಿದೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಬೈಎಲೆಕ್ಷನ್ ಕಾವು ಜೋರಾಗಿರುವಾಗಲೇ ಕಾಂಗ್ರೇಸ್‌ನಲ್ಲಿ ಹೊಸ ಸಿಎಂ ಹೆಸರು ಮುನ್ನೆಲೆ ಬಂದಿದೆ. ಸಿಎಂ ಕುರ್ಚಿ ಮೇಲೆ ಮೊದಲಿನಿಂದಲೂ ಕಣ್ಣಿಟ್ಟಿರುವ ಡಿ.ಕೆ.ಶಿವಕುಮಾರ್ ಅವರಿಗೆ ಆ ಸ್ಥಾನ ಒಲಿಯಲು ಈ ಉಪಚುನಾವಣೆಯು ವರದಾನವಾಗಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಅದರಲ್ಲೂ ಚನ್ನಪಟ್ಟಣದಲ್ಲಿ ಕಾಂಗ್ರೇಸ್‌ನ ಗೆಲುವಿನ ಮೇಲೆ ಡಿಕೆಶಿ ಭವಿಷ್ಯ ನಿಂತಿದೆ ಎಂದು ಹೇಳಲಾಗುತ್ತಿದೆ.

ಮತ್ತೊಂದೆಡೆ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಕಾಂಗ್ರೇಸ್‌ನಿಂದ ಕಣಕ್ಕಿಳಿದಿರುವ ಸಿ.ಪಿ.ಯೋಗೇಶ್ವರ್ ಅವರನ್ನು ಗೆಲ್ಲಿಸಲು ಡಿ.ಕೆ.ಶಿವಕುಮಾರ್ ವಿಶೇಷ ಕಾಳಜಿ ತೋರಿದ್ದು, ಇದು ಅವರು ಸಿಎಂ ಆಗಲು ಪ್ರಮುಖ ತಿರುವು ನೀಡಲಿದೆ ಎಂಬ ಗುಸುಗುಸು ಜೋರಾಗಿದೆ. ಇದಕ್ಕೆ ಪುಷ್ಟಿ ನೀಡುವಂತೆ ಕಾಂಗ್ರೇಸ್ ನಾಯಕರು ಕೂಡ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇಂದು ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗುವಂತಹ ಬೈಎಲೆಕ್ಷನ್ ಎಂದು ಕಾಂಗ್ರೇಸ್ ಶಾಸಕ ಶಿವಲಿಂಗೇಗೌಡ ಇಂದು ನೀಡಿರುವ ಹೇಳಿಕೆ ಕಾಂಗ್ರೇಸ್‌ನಲ್ಲಿ ಸಂಚಲನ ಮೂಡಿಸಿದೆ. ಚನ್ನಪಟ್ಟಣದಲ್ಲಿ

ಉದಯವಾಹಿನಿ ಚಿತ್ರ

> ಇನ್ನು ಚನ್ನಪಟ್ಟಣ ಭಾಗದಲ್ಲಿ ಒಕ್ಕಲಿಗ ಸಮುದಾಯದವರು ಹೆಚ್ಚಾಗಿರುವ ಕಾರಣ ಈ ಬಾರಿಯ ಉಪಚುನಾವಣೆಗೆ ಒಕ್ಕಲಿಗ ಸಿಎಂ ಬಾಣ ಬಿಡಲುಕಾಂಗ್ರೇಸ್ ತಂತ್ರ ರೂಪಿಸಿದೆ ಎನ್ನಲಾಗಿದೆ. ಸಿ.ಪಿ.ಯೋಗೇಶ್ವರ್ ಹಾಗೂ ಡಿ.ಕೆ.ಶಿವಕುಮಾರ್ ಕೂಡ ಒಕ್ಕಲಿಗ ಸಮುದಾಯವರಾಗಿರುವುದರಿಂದ ಚನ್ನಪಟ್ಟಣ ಗೆದ್ದರೆ, ರಾಜ್ಯಕ್ಕೆ ಒಕ್ಕಲಿಗ ಸಿಎಂ ಬರ್ತಾರೆ ಎಂದು ಮತದಾರರನ್ನು ಸೆಳೆಯುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

> ನೀವು ಯಾವುದೇ ಕಾರಣಕ್ಕೂ ಡಿ.ಕೆ.ಶಿವಕುಮಾರ್ ಅವರನ್ನು ಬಿಟ್ಟುಕೊಡಬೇಡಿ. ಚನ್ನಪಟ್ಟಣದಲ್ಲಿ ಡಿ.ಕೆ. ಸುರೇಶ್ ಅವರನ್ನೇ ನಿಲ್ಲಿಸಿ, ಗೆಲ್ಲಿಸಲು ಡಿ.ಕೆ.ಶಿವಕುಮಾರ್ ಅವರಿಗೆ ಆಗುತ್ತಿತ್ತು. ಆದರೆ, ಸಿ.ಪಿ.ಯೋಗೇಶ್ವರ್ ಕೂಡ ಬಹಳ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ. ಹಾಗಾಗಿ ಚನ್ನಪಟ್ಟಣ ಟಿಕೆಟ್ ಅನ್ನು ಅವರಿಗೆ ತ್ಯಾಗ ಮಾಡಲಾಗಿದೆ ಎಂದು ಶಿವಲಿಂಗೇಗೌಡ ಹೇಳಿದ್ದಾರೆ.

ಇಂದು ಮಾತನಾಡಿದ ಶಿವಲಿಂಗೇಗೌಡ, ಇದು ಡಿ.ಕೆ. ಶಿವಕುಮಾರ್ ಸಿಎಂ ಆಗುವ ಉಪಚುನಾವಣೆ. ಈ ಚುನಾವಣಾ ಫಲಿತಾಂಶವೇ ಡಿ.ಕೆ.ಶಿವಕುಮಾರ್ ಅವರ ನಾಯಕತ್ವವನ್ನು ತೋರಿಸುತ್ತದೆ. ರಾಜ್ಯದ ರಾಜಕಾರಣಕ್ಕೆ ಚನ್ನಪಟ್ಟಣ ಕ್ಷೇತ್ರವೇ ತಿರುವು ನೀಡುತ್ತೆ ಎಂದು ಭವಿಷ್ಯ ನುಡಿದಿದ್ದಾರೆ. ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ರಾಜಕೀಯ ಭವಿಷ್ಯ ಉಳಿಸಿಕೊಳ್ಳಲು ಬಿಜೆಪಿ ಜೊತೆ ಸೇರಿಕೊಂಡರು. ಇಲ್ಲದಿದ್ರೆ ಅವರ ರಾಜಕೀಯ ಜೀವನವೇ ಅಂತ್ಯವಾಗುತ್ತಿತ್ತು. ಈಗಲೂ ಕುಮಾರಸ್ವಾಮಿ ಅವರು ತಮ್ಮ ಕುಟುಂಬ ಉದ್ಧಾರವಾದ್ರೆ ಸಾಕು ಎಂದೇ ಇದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಇನ್ನು ಕಾಂಗ್ರೇಸ್ ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಕೂಡ ಡಿ.ಕೆ.ಶಿವಕುಮಾರ್ ಅವರು ಸಿಎಂ ಆಗುವ ಬಗ್ಗೆ ಚನ್ನಪಟ್ಟಣದಲ್ಲಿ ಮಾತನಾಡಿ ಗಮನ ಸೆಳೆದಿದ್ದಾರೆ.

ಸಿದ್ದರಾಮಯ್ಯ ಬಳಿಕ ಡಿ.ಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಆಗೋ ಎಲ್ಲ ಅವಕಾಶವಿದೆ. ಈ ಚನ್ನಪಟ್ಟಣ ಉಪಚುನಾವಣೆಯಲ್ಲಿ ಸಿ.ಪಿ.ಯೋಗೇಶ್ವರ್ ಅವರು ಗೆಲುವು ಸಾಧಿಸಿದ್ರೆ ಡಿ.ಕೆ.ಶಿವಕುಮಾರ್ ಅವರಿಗೆ ಬಲ ಹೆಚ್ಚಾಗುತ್ತೆ ಎಂದು ಹೇಳಿದ್ದಾರೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಡಿ.ಕೆ.ಸುರೇಶ್ ಅವರನ್ನು ಮಣಿಸಲು ಕುಮಾರಸ್ವಾಮಿ ಅವರು ತಮ್ಮ ಬಾವನನ್ನು (ಸಿ.ಎನ್. ಮಂಜುನಾಥ್) ಸ್ಪರ್ಧೆಗೆ ಇಳಿಸಿದರು.

ಈ ಬಾರಿ ಅವರು ಸಿ.ಪಿ.ಯೋಗೇಶ್ವರ್ ಅವರಿಗೆ ಟಿಕೆಟ್ ಕೊಡಬಹುದಿತ್ತು. ಆದರೆ, ಕುಮಾರಸ್ವಾಮಿ ಅವರಿಗೆ ತಮ್ಮ ಕುಟುಂಬದವರಿಗೆ ಮಾತ್ರವೇ ಟಿಕೆಟ್ ಕೊಡುತ್ತಾರೆ. ಕುಮಾರಣ್ಣನ ಟೂರಿಂಗ್ ಟಾಕೀಸ್ ಎಲ್ಲೂ ನಿಲ್ಲದು ಎಂದು ಲೇವಡಿ ಮಾಡಿದ್ದಾರೆ.

ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

ಸತ್ಯವನು ಹೇಳುತಲಿ ಕೆಲಸವನು ಮಾಡುವರು
ಮಿತ್ಯವನು ನುಡಿಯದೆಲೆ ನಡೆಯುವವರು
ನಿತ್ಯವದು ಮಾಹಿತಿಯ ಹುಡುಕುತಲೆ ಬರೆಯುವರು
ಸತ್ಯಕದು ಬೆಲೆಯಿಹುದು ಲಕ್ಷ್ಮಿ ದೇವಿ.....

ಭಾವಾರ್ಥ: ಪತ್ರಕರ್ತರ ವೃತ್ತಿ ಸತ್ಯವನ್ನು ನುಡಿಯುವುದು. ಜನರಿಗೆಲ್ಲ ಮಾಹಿತಿಯನ್ನು ಸಂಗ್ರಹಿಸಿ ಹೇಳುವುದು. ಅವರು ಎಂದಿಗೂ ಸುಳ್ಳನ್ನು ಹೇಳುವುದಿಲ್ಲ. ಅವರದೇ ಆದ ಒಂದು

ದಿನಕ್ಕೊಂದು ಮುಕ್ತಕ -8

ವ್ಯಕ್ತಿತ್ವವನ್ನು ಒಳಗೊಂಡಿರುತ್ತಾರೆ. ಆ ವ್ಯಕ್ತಿತ್ವದಂತೆ ದಿನನಿತ್ಯ ಕೆಲಸವನ್ನು ಮಾಡುತ್ತಾರೆ. ಕಾರ್ಯಕ್ರಮಗಳು ಎಲ್ಲಿ ನಡೆಯುತ್ತಿವೆ. ಎಲ್ಲಿ ಯಾವ ಘಟನೆ ನಡೆದಿದೆ. ಎಂಬುದನ್ನು ತಿಳಿಯುತ್ತಾ ಆ ಮಾಹಿತಿಗಳನ್ನು ಬರಹಗಳ ಮುಖಾಂತರ, ವಾಹಿನಿಗಳ ಮುಖಾಂತರ, ದೇಶಾದ್ಯಂತ ಜನರಿಗೆ ತಲುಪಿಸುವ ಕೆಲಸವನ್ನು ಮಾಡುತ್ತಾರೆ. ಸತ್ಯಕ್ಕೆ ಇರುವ ಬೆಲೆಯನ್ನು ತಿಳಿದು. ತನ್ನ ವೃತ್ತಿಗೆ ಎರಡು ಬಗೆಯದೆ ಸತ್ಯವಾಗಿ ನಡೆದುಕೊಳ್ಳುವವರು ಈ ಪತ್ರಕರ್ತರು. ಇಂತಹ ಪತ್ರಕರ್ತರಿಗೆ ಅನೇಕ ಸಮಸ್ಯೆಗಳು ಎದುರಾಗುತ್ತವೆ. ಆ ಸಮಸ್ಯೆಗಳನ್ನೆಲ್ಲ ಎದುರಿಸುತ್ತಾ ಕಾರ್ಯವನ್ನು ನಿರ್ವಹಿಸುತ್ತಾರೆ. ಇಂದಿನ ಪ್ರಸ್ತುತ ಸಮಾಜದಲ್ಲಿ ದಿನನಿತ್ಯದಲ್ಲಿ ಹಲವಾರು ಘಟನೆಗಳು ಸರ್ವೇ ಸಾಮಾನ್ಯವಾಗಿ ನಡೆಯುತ್ತಿರುತ್ತದೆ. ಅಂತಹ ಸಮಸ್ಯೆಗಳನ್ನು ಹುಡುಕಿ ಎಲ್ಲಿ ಏನು ನಡೆಯುತ್ತಿದೆ ಎಂದು ನೋಡುತ್ತಾ. ಜನರ ಜೀವನದ ಕಷ್ಟ-ನಷ್ಟಗಳನ್ನು ಆಲಿಸುತ್ತಾ. ಅತಿರೇಕಕ್ಕೆ ಹೋದಂತಹ ವಿಚಾರಗಳನ್ನು ಜನರಿಗೆ ತಲುಪಿಸುವಂತಹ ಕೆಲಸವನ್ನು ಮಾಡುತ್ತಾರೆ. ಎಲ್ಲಿ ಏನು ನಡೆಯುತ್ತಿದೆ ಏಕೆ ನಡೆದಿದೆ ಮುಂದೆ ಏನಾಗಬಹುದು ಎಂಬುದನ್ನು ತಿಳಿಸುವ ಕೆಲಸವನ್ನು ಮಾಡುತ್ತಾರೆ



ಪುಸ್ತಕವನ್ನು ಕನ್ನಡಿಗರು ಓದಬೇಕು: ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಉತ್ತರ ಪುಸ್ತಕವನ್ನು ಕನ್ನಡಿಗರು ಓದಬೇಕು, ನಮಗಾಗುತ್ತಿರುವ ಅನ್ಯಾಯವನ್ನು, ಹಿನ್ನಡೆಯನ್ನು ಅರ್ಥ ಮಾಡಿಕೊಂಡು ಚಳವಳಿಯನ್ನು ರೂಪಿಸಲು ಮುಂದಾಗಬೇಕು ಎಂದು ಕಾಂಗ್ರೇಸ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಭಾರತದ ಪ್ರತಿ ಪ್ರದೇಶವೂ ಸಮಾನ ಅವಕಾಶಗಳನ್ನು ಪಡೆಯಬೇಕು, ಸಮಾನ ನ್ಯಾಯವನ್ನು ಪಡೆಯಬೇಕು, ಪ್ರದೇಶವಾರು ಸಂಸ್ಕೃತಿ, ಅಸ್ಮಿತೆಗಳನ್ನು ಗೌರವಿಸಬೇಕು, ಆಗ ಮಾತ್ರ ಜನರಲ್ಲಿ ಒಕ್ಕೂಟ ವ್ಯವಸ್ಥೆ ಹಾಗೂ ಪ್ರಜಾಪ್ರಭುತ್ವದ ಮೇಲಿನ ನಂಬಿಕೆ, ಗೌರವವನ್ನು ಉಳಿಸಿ, ಬೆಳೆಸಲು ಸಾಧ್ಯ ಎಂದರು. ಕಳೆದ 10 ವರ್ಷಗಳಿಂದ ಆಳುತ್ತಿರುವ ಬಿಜೆಪಿಯ ಕೇಂದ್ರ ಸರ್ಕಾರವು ಭಾರತದ ಭಾಷೆ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯ ಮೇಲೆ ಬುಲ್ಡೋಜರ್ ಹರಿಸುತ್ತಿದೆ. ಇದೆಲ್ಲದಕ್ಕಿಂತ ಮುಖ್ಯವಾದ ಮತ್ತು ಸಹಿಸಲಾಗದ ವಿಷಯವೆಂದರೆ ಆರ್ಥಿಕ ಅನ್ಯಾಯ ಎಂದು ಖಂಡಿಸಿದ್ದಾರೆ. ದಕ್ಷಿಣ ಭಾರತಕ್ಕೆ ಅದರಲ್ಲೂ ಕರ್ನಾಟಕಕ್ಕೆ ಕೇಂದ್ರ ಸರ್ಕಾರ ಎಸಗುತ್ತಿರುವ ಆರ್ಥಿಕ ದಬ್ಬಾಳಿಕೆಯನ್ನು ಕನ್ನಡಿಗರು ತೀವ್ರವಾಗಿ ಖಂಡಿಸುತ್ತಾ ಬಂದಿದ್ದಾರೆ, ನಮ್ಮ

ಉದಯವಾಹಿನಿ ಚಿತ್ರ

> ಬಳಿಕ ಮಾತನಾಡಿದ ಅವರು, ದಕ್ಷಿಣ ಉತ್ತರ ಪುಸ್ತಕವನ್ನು ಜನಸಾಮಾನ್ಯರಿಗೆ ಸರಳವಾಗಿ ಅರ್ಥವಾಗುವ ಭಾಷೆಯಲ್ಲಿ ಅನುವಾದಿಸಿರುವ ಹಿರಿಯ ಚಿಂತಕ ಮತ್ತು ಬರಹಗಾರರಾದ ಕೆ.ಪಿ.ಸುರೇಶ್ ಅವರು ಅತ್ಯಂತ ಪರಿಣಾಮಕಾರಿಯಾಗಿ ಆರ್ಥಿಕ ಅನ್ಯಾಯದ ವಿಷಯಗಳನ್ನು ಸಾದರಪಡಿಸಿದ್ದಾರೆ ಎಂದು ಬಣ್ಣಿಸಿದರು.

ಸರ್ಕಾರವೂ ಕಾನೂನಿನ ಚೌಕಟ್ಟಿನ ಒಳಗೆ ಮತ್ತು ಹೊರಗೆ ಹೋರಾಟವನ್ನು ದಾಖಲಿಸಿದೆ ಎಂದಿದ್ದಾರೆ. ದಕ್ಷಿಣ ಭಾರತ ಮತ್ತು ವಿಶೇಷವಾಗಿ ಕರ್ನಾಟಕವು ದೇಶದ ಸರ್ವಾಂಗೀಣ ಬೆಳವಣಿಗೆಯಲ್ಲಿ ಮಹತ್ವದ ಕೊಡುಗೆ ನೀಡುತ್ತಿದ್ದಾಗಿಯೂ ಕೇಂದ್ರ ಸರ್ಕಾರದ ಆರ್ಥಿಕ ಅನ್ಯಾಯವು ಓಡುವ ಕುದುರೆಯ ಕಾಲನ್ನು ಕಟ್ಟಿ ಹಾಕಿದಂತಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಕಿಡಿಕಾರಿದ್ದಾರೆ.

> ಸಚಿವ ಕೃಷ್ಣಬೈರೇಗೌಡ ಮಾತನಾಡಿ, ದಕ್ಷಿಣ ಉತ್ತರ ದೇಶದ ಬಹುದೊಡ್ಡ ಬಿಕ್ಕಟ್ಟು ಪುಸ್ತಕ ಬಹಳ ಅರ್ಥಪೂರ್ಣವಾಗಿದೆ. ಕೇಂದ್ರ ಸರ್ಕಾರದಿಂದ ತೆರಿಗೆ ಹಂಚಿಕೆ, ಡಿಲಿಮಿಟೇಶನ್ ಸೇರಿದಂತೆ ಹಲವು ವಿಚಾರಗಳಲ್ಲಿ ಕೇಂದ್ರ ಸರ್ಕಾರ ಇಡೀ ದಕ್ಷಿಣ ಭಾರತದ ಸ್ವಾಯತ್ತತೆಯ ಮೇಲೆ ಪ್ರತ್ಯಕ್ಷ ದಾಳಿ ನಡೆಸುತ್ತಿದೆ. ಈ ಬಗ್ಗೆ ಕನ್ನಡ ನಾಡಿನ ಜನ ಮತ್ತಷ್ಟು ಪ್ರಜ್ಞಾವಂತರಾಗಬೇಕು ಎಂದು ಹೇಳಿದರು.

ಪುಸ್ತಕ ಬಿಡುಗಡೆ: ಒಕ್ಕೂಟ ಸರ್ಕಾರದ ಆರ್ಥಿಕ ತಾರತಮ್ಯದ ಬಗ್ಗೆ ಸವಿಸ್ತಾರವಾಗಿ ಬೆಳಕು ಚೆಲ್ಲುವ ಆರ್.ಎಸ್.ನೀಲಕಂಠನ್ ಅವರ ಇಂಗ್ಲಿಷ್ ಕೃತಿಯನ್ನು ದಕ್ಷಿಣ ಉತ್ತರ ಎಂಬ ಹೆಸರಿನಲ್ಲಿ ಕನ್ನಡಕ್ಕೆ ಅನುವಾದಿಸಿ ಪ್ರಕಟಿಸಿದ್ದು, ಸಚಿವ ಕೃಷ್ಣಬೈರೇಗೌಡ ಮತ್ತು ಸಿ.ಎಂ ಫೈಜ್ ಅವರೊಂದಿಗೆ ಈ ಪುಸ್ತಕವನ್ನು ಪ್ರಿಯಾಂಕ್ ಖರ್ಗೆ ಬಿಡುಗಡೆ ಮಾಡಿದರು.

ನರಕಾಸುರನೆಂಬ ಒಬ್ಬ ಬಲಾಢ್ಯ ರಾಕ್ಷಸ

• ಉದಯವಾಹಿನಿ, ವಿಶೇಷ

ಶ್ರೀಮದ್ಭಾಗವತ ಪುರಾಣದಲ್ಲಿ ಹೀಗೊಂದು ಕಥೆಯಿದೆ - ಹಿಂದೆ ಪ್ರಾಗ್ಜ್ಯೋತಿಷಪುರ ಎಂಬಲ್ಲಿ ಭೌಮಾಸುರ ಅಥವಾ ನರಕಾಸುರನೆಂಬ ಒಬ್ಬ ಬಲಾ

ಶ್ರೀರಾಮ ಕಾಲ್ಪನಿಕನಲ್ಲ ಐತಿಹಾಸಿಕ ಪುರುಷ: ದೇಶಪಾಂಡೆ

ರಾಮ ವಾಸ್ತವವೂ ಹೌದು, ಹಿಂದು ಸಮಾಜದ 500 ವರ್ಷಗಳ ಕಳಂಕ ರಾಮ ಮಂದಿರ ನಿರ್ಮಾಣದಿಂದ ತೊಳೆಯಿತು

• ಉದಯವಾಹಿನಿ, ಮುದ್ದೇಬಿಹಾಳ

ರಾಮಾಯಣ, ಮಹಾಭಾರತ ಮಹಾಕಾವ್ಯಗಳು ಜಗತ್ತಿಗೆ ಅತ್ಯುತ್ತಮ ಕೊಡುಗೆಗಳಾಗಿವೆ. ರಾಮ ಕಾಲ್ಪನಿಕ ಪುರುಷನಲ್ಲ, ಐತಿಹಾಸಿಕ ಪುರುಷ. ಇದಕ್ಕೆ ಸಂಶೋಧನೆ ದಾಖಲೆ ಇವೆ. ಲಂಕೆಗೆ ಹೋಗಲು ಸೇತುವೆ ಕಟ್ಟಿದ ಅಸ್ತಿತ್ವವನ್ನು ನಾಸಾ ಖಚಿತಪಡಿಸಿದೆ ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಬೆಳಗಾವಿ ಉತ್ತರ ಕರ್ನಾಟಕ ಪ್ರಾಂತ ಕಾರ್ಯಕಾರಣಿ ಸದಸ್ಯ ಅರವಿಂದರಾವ ದೇಶಪಾಂಡೆ ಹೇಳಿದರು. ಪಟ್ಟಣದ ವಿಬಿಸಿ ಹೈಸ್ಕೂಲ್ ಮೈದಾನದಲ್ಲಿ ಆರ್ ಎಸ್ ಎಸ್ ನ ಭವ್ಯ ಪಥ ಸಂಚಲನದ ನಂತರ ನಡೆದ ಕಾರ್ಯಕ್ರಮದ ದಿಕ್ಸೂಚಿ ಭಾಷಣ ಮಾಡಿದರು. ರಾಮ ವಾಸ್ತವವೂ ಹೌದು. ಹಿಂದು ಸಮಾಜದ 500 ವರ್ಷಗಳ ಕಳಂಕ ರಾಮ ಮಂದಿರ ನಿರ್ಮಾಣದಿಂದ ತೊಳೆಯಿತು. 6.5ಲಕ್ಷ ಹಳ್ಳಿಗಳ ಜನತೆಯಿಂದ ಮನೆಮನೆಗೆ ಹೋಗಿ ಪಟ್ಟಿ ಸಂಗ್ರಹಿಸಿ 3500 ಕೋಟಿ ಸಂಗ್ರಹಿಸಲಾಯಿತು ಎಂದರು.

ಆರ್ ಎಸ್ ಎಸ್ ನ ಅವಿರತ ಹೊರಾಟದಿಂದಾಯೇ ರಾಮಸೇತುವೆ ಧ್ವಂಸ ನಿಂತಿದೆ.

ತೆಲಂಗಾಣದ ಸಿಎಂ ರಾಜಶೇಖರ ರಡ್ಡಿ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಹೊಂದಿ ತಿರುಪತಿ ವೆಂಕಟರಮಣನ 7 ಬೆಟ್ಟಗಳ ಪೈಕಿ 6 ಬೆಟ್ಟಗಳನ್ನು ಐಷಾರಾಮಿ ತಾಣ ಮಾಡಲು, ಒಂದು ಬೆಟ್ಟವನ್ನು ಮಾತ್ರ ಹಿಂದುಗಳಿಗೆ ಕೊಡಲು ಮುಂದಾಗಿದ್ರು. ಆದರೆ ಆರ್ ಎಸ್ ಎಸ್ ನ ಹೋರಾಟದ ಫಲವಾಗಿ ಅವರ ಪ್ರಯತ್ನ ಕೈಗೂಡಲಿಲ್ಲ. ವಿಎಚ್‌ಪಿ, ಎಬಿವಿಪಿ, ಭಾರತೀಯ ಮಜ್ದೂರ ಸೇರಿ 52 ಸಂಘಟನೆಗಳು ಆರ್ ಎಸ್ ಎಸ್ ಅಡಿ ಪ್ರಾರಂಭಗೊಂಡಿವೆ ಎಂದರು. ಸಂಘದ ಸಂಸ್ಥಾಪಕ ಡಾ. ಹೆಡಗೇವಾರ ಅವರ ಮುಂದಾ ಲೋಚನೆಯಿಂದಾಗಿ ಆರ್ ಎಸ್ ಎಸ್ ನಲ್ಲಿ 6 ಉತ್ಸವಗಳನ್ನು ಆಚರಿಸಲಾಗುತ್ತದೆ.

ಅವುಗಳಲ್ಲಿ ವಿಜಯದಶಮಿ ಉತ್ಸವಕ್ಕೆ ಹೆಚ್ಚಿನ ಮಹತ್ವ ಇದೆ. ದೇಶಾದ್ಯಂತ ಈ ದಿನದಂದು ಪಥಸಂಚಲನ ನಡೆಯುತ್ತದೆ. ಪಥಸಂಚಲನವು ಸಂಘದ ಶಾಖೆಗಳಲ್ಲಿ ನಿತ್ಯ ನಡೆಯುವ ಚಟುವಟಿಕೆಗಳ ಪ್ರದರ್ಶನವಾಗಿದೆ. ಶರೀರ, ಮನಸ್ಸು, ಬುದ್ಧಿಗೆ ಸಂಸ್ಕಾರ ಕೊಡುವ ರೂಪವೇ ಶಾಖೆ. ಇದು ಸಮಾಜದಲ್ಲಿ ಆತ್ಮವಿಶ್ವಾಸ, ಕ್ಷಾತ್ರಭಾವ ತಂದುಕೊಡುತ್ತದೆ. ಸಮಾಜ ಒಂದಾಗಿ ನಿಲ್ಲಬೇಕೆನ್ನುವ ಭಾವ ಪಥಸಂಚಲನದಲ್ಲಿದೆ ಎಂದರು.

ಮುಖ್ಯ ಅತಿಥಿಯಾಗಿದ್ದ ಗಣ್ಯ ವರ್ತಕ ಬಸವರಾಜ ಮೋಟಗಿ ಆರ್ ಎಸ್ ಎಸ್ ಒಂದು ದೇಶಭಕ್ತರ ಸಂಘಟನೆ ದೇಶದಲ್ಲಿ ಎಲ್ಲಿ ಪ್ರಕೃತಿ ವಿಕೋಪ ಗಳಾದಾಗ ಸಂಘದ ಸ್ವಯಂ ಸೇವಕರು ನೆರವಿಗಾಗಿ ಮುಂದೆ ಇರುತ್ತಾರೆ ಎಂದರು .

ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ, ಬಾಬುಲಾಲ ಓಸ್ವಾಲ್, ಪ್ರಭು ಕಡಿ ಬಿ ಪಿ ಕುಲಕರ್ಣಿ ಸೇರಿದಂತೆ ಅನೇಕ ಗಣ್ಯರು, ಸಂಘ ಸಂಸ್ಥೆಗಳ ಮುಖಂಡರು, ಸ್ವಯಂ ಸೇವಕರು ಮಾತಾ ಭಗಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಘೋಷ್, ದಂಡ, ಕೇರಳದ ಕಲರಿ ಮಾದರಿಯ ನಿಯುದ್ಧ ದಂಡ, ವ್ಯಾಯಾಮ ಪ್ರದರ್ಶನಗಳು ಸ್ವಯಂಸೇವಕರಿಂದ ನಡೆದವು. ಗಿರೀಶ ದೇಶಪಾಂಡೆ ಸ್ವಾಗತಿಸಿ ಸಂಘ ಗೀತೆ ಹಾಡಿದರು ನೀಲಕಂಠ ಪವಾರ, ವರುಣ ದೇಶಪಾಂಡೆ ಧ್ವಜಾರೋಹಣಗೊಳಿಸಿದರು. ವಿನೋದ ಮಡಿವಾಳರ ವೈಯುಕ್ತಿಕ ಗೀತೆ ಹಾಡಿದರು. ಪ್ರಭು ನಂದೆಪ್ಪನವರ್ ನಿರ್ವಹಿಸಿದರು.

ಉದಯವಾಹಿನಿ ಚಿತ್ರ

ಹಿಂದು ಸಮಾಜದಲ್ಲಿ ಸಂಘಟಿತ ಶಕ್ತಿ ತರುವುದು ಛತ್ರಪತಿ ಶಿವಾಜಿ ಮಹಾರಾಜರ ಉದ್ದೇಶವಾಗಿತ್ತು. ಛತ್ರಪತಿ ಶಿವಾಜಿ ಮಹಾರಾಜರ ಕಾರಣದಿಂದಾಗಿಯೇ ನಾವೆಲ್ಲ ಇಂದು ಹಿಂದುಗಳಾಗಿ ಉಳಿದಿದ್ದೇವೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಿಂದುತ್ವವನ್ನು ಗಟ್ಟಿಗೊಳಿಸುವ ಕೆಲಸ ಮಾಡುವ ಮೂಲಕ ಶಿವಾಜಿ ಮಹಾರಾಜರ ಉದ್ದೇಶವನ್ನು ಸಾರ್ಥಕಗೊಳಿಸಿದೆ -ದೇಶಪಾಂಡೆ,
ಬೆಳಗಾವಿ ಉತ್ತರ ಕರ್ನಾಟಕ ಪ್ರಾಂತ ಕಾರ್ಯಕಾರಣಿ ಸದಸ್ಯ

ಆರ್ ಎಸ್ ಎಸ್ ಗೆ ವಿಶ್ವಮಾನ್ಯತೆ

ಆರ್ ಎಸ್ ಎಸ್ ಕಾರಣದಿಂದಾಗಿಯೇ ಇಂದು ಹಿಂದುಗಳು ತಾವು ಹಿಂದು ಎಂದು ಹೇಳಿಕೊಳ್ಳಲು ಮುಂದೆ ಬರುತ್ತಿದ್ದಾರೆ. 99 ವರ್ಷ ಪೂರೈಸಿ 100ನೇ ವರ್ಷದತ್ತ ದಾಪುಗಾಲು ಹಾಕುತ್ತಿರುವ ಆರ್ ಎಸ್ ಎಸ್ ಗೆ ಇಂದು ವಿಶ್ವಮಾನ್ಯತೆ ದೊರಕಿದೆ. ಸ್ವಾತಂತ್ರ್ಯಾನಂತರ ಆಡಳಿತಕ್ಕೆ ಬಂದವರು ಆರ್ ಎಸ್ ಎಸ್ ಸಂಘಟನೆ ತುಳಿಯುವ ಕೆಲಸ ಮಾಡಿದ್ದರು. ಆದರೆ ತುರ್ತು ಪರಿಸ್ಥಿತಿಯ ನಂತರ ವಸ್ತುಸ್ಥಿತಿ ಬದಲಾಗಿಯಿತು. ಮಹಾತ್ಮಾ ಗಾಂಧೀಜಿಯವರು 12 ವರ್ಷ ದೇಶ ಸುತ್ತಿದ ನಂತರ ಪ್ರತಿಯೊಬ್ಬ ಮುಸ್ಲಿಂ ಗುಂಡಾ, ಹಿಂದು ಹೇಡಿ ಎಂದು ಹೇಳಿದ್ದರು ಎಂದರು.

99 ವರ್ಷ ಪೂರೈಸಿ 100ನೇ ವರ್ಷದತ್ತ ದಾಪುಗಾಲು ಹಾಕುತ್ತಿರುವ ಆರ್ ಎಸ್ ಎಸ್

ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಇಂದು ಬೃಹತ್ ಪ್ರತಿಭಟನೆ

• ಉದಯವಾಹಿನಿ, ಹರಪನಹಳ್ಳಿ

ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಆದೇಶದಂತೆ ಒಳ ಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಆಕ್ಟೋಬರ್ 28 ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಆದ್ದರಿಂದ ಮಾದಿಗ ಸಮಾಜ ಮತ್ತು ಛಲವಾದಿ ಸಮಾಜದವರು, ದಲಿತ ಪ್ರಗತಿಪರ ಸಂಘಟನೆಗಳು, ಮಹಿಳಾ ಸಂಘಟನೆಗಳು, ಪೌರ ಕಾರ್ಮಿಕರು, ಮುಖಂಡರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಗವಹಿಸಬೇಕೆಂದು ಒಕ್ಕೂಟದ ಮುಖಂಡರು ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಆಕ್ಟೋಬರ್ ಬೆಳಗ್ಗೆ 11 ಕ್ಕೆ ಹರಿಹರ ಸರ್ಕಲ್‌ನಿಂದ ಇಜಾರಿ ಶಿರಸಪ್ಪ ವೃತ್ತ, ಹಳೇ ಬಸ್ ನಿಲ್ದಾಣ, ಪ್ರವಾಸಿ ಮಂದಿರ ವೃತ್ತ, ಹೊಸಪೇಟೆ ರಸ್ತೆಯ ಮೂಲಕ ಮಾದಿಗ ಸಮಾಜ ಮತ್ತು ಛಲವಾದಿ ಸಮಾಜದವರು ಸೇರಿಕೊಂಡು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಒಳ ಮೀಸಲಾತಿ ಜಾರಿ ಮಾಡಬೇಕೆಂದು ಉಪ ವಿಭಾಗಾಧಿಕಾರಿ ಕಚೇರಿಯವರೆಗೆ ಮೆರವಣಿಗೆ ನಡೆಸಿ ತಾಲ್ಲೂಕು ಆಡಳಿತದ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಹಲಗೇರಿ ಮಂಜಪ್ಪ ವಕೀಲರು ಮಾತನಾಡಿ, ಸೋಮವಾರ 28ರಂದು ತಾಲೂಕಿನಾದ್ಯಂತ ಮಾದಿಗ ಮತ್ತು ಛಲುವಾದಿ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪ್ರತಿಭಟನೆಯನ್ನು ಯಶಸ್ವಯಾಗಿಸಬೇಕು. ಜನಸಂಖ್ಯೆ ಆಧಾರದಲ್ಲಿ ಒಳ ಮೀಸಲಾತಿ ವರ್ಗೀಕರಣ ಮಾಡಲು ಒತ್ತಾಯಿಸಿ ಕಳೆದ ಮೂರು ದಶಕದಿಂದ ನಡೆಸಿದ ನಿರಂತರ ಹೋರಾಟದ ಫಲವಾಗಿ ಈಗ ಒಳ ಮೀಸಲಾತಿ ದೊರಕುವ ಸಮಯ ಬಂದಿದೆ.

ಸರ್ವೋಚ್ಚ ನ್ಯಾಯಾಲಯ ಆ.ರಂದು ಒಳ ಮೀಸಲಾತಿ ಕಲ್ಪಿಸುವ ಅಧಿಕಾರ ಮತ್ತು ಹೊಣೆಗಾರಿಕೆ ಆಯಾಯ ರಾಜ್ಯ ಸರಕಾರಗಳಿಗೆ ಇದೆ ಎಂಬುದನ್ನು ಸ್ಪಷ್ಟವಾಗಿ ತಿಳಿಸಿದೆ. ಆದರ ಅನ್ವಯ ರಾಜ್ಯ ಸರಕಾರ ಕೂಡಲೇ ಒಳ ಮೀಸಲಾತಿ ಸೌಲಭ್ಯ ಒದಗಿಸಬೇಕು ಎಂದು ಒತ್ತಾಯಿಸಿದರು.

ದಲಿತ ಮುಖಂಡ ಕಣವಿಹಳ್ಳಿ ಮಂಜುನಾಥ ಮಾತನಾಡಿ, ಈಗಾಗಲೇ ಸರಕಾರದಲ್ಲಿ ಇರುವ ಲಭ್ಯವಿರುವ ದತ್ತಾಂಶಗಳ ಆಧಾರದಲ್ಲಿ ಒಳ ಮೀಸಲಾತಿ ನೀಡುವುದಕ್ಕೆ ಯಾವುದೇ ಅಡ್ಡಿ ಆತಂಕ ಇಲ್ಲ. ಆದರೂ, ಸರಕಾರ ಮೀನಾಮೇಷ ಎಣಿಸುತ್ತಿರುವುದನ್ನು ಒಕ್ಕೂಟ ತೀವ್ರವಾಗಿ ಖಂಡಿಸುತ್ತದೆ. ಸರಕಾರ ಈಗ ನಡೆಸುತ್ತಿರುವ ಹೋರಾಟಕ್ಕೆ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಅಮರಣಾಂತ ಉಪವಾಸ ಸತ್ಯಾಗ್ರಹ ಒಳಗೊಂಡಂತೆ ತೀವ್ರ ಸ್ವರೂಪದ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ವೇಳೆ ನಿಚ್ಚವ್ವನಹಳ್ಳಿ ಬೀಮಪ್ಪ, ತಾ.ಪಂ. ಮಾಜಿ ಸದಸ್ಯ ಹುಲಿಕಟ್ಟಿ ಚಂದ್ರಪ್ಪ, ತಾ.ಪಂ. ಮಾಜಿ ಸದಸ್ಯ ಮೈದೂರು ಓ.ರಾಮಪ್ಪ, ತೆಲಿಗಿ ಹನುಮಂತಪ್ಪ, ಹೆಚ್.ಕೊಟ್ರೇಶ್, ಓ.ಮಹಾಂತೇಶ್, ಯರಬಾಳು ಹನುಮಂತಪ್ಪ, ಬಸವರಾಜ್.ಸಿ, ಕೊಟ್ರೇಶ್, ಬಸವರಾಜ್.ಸಿ, ಆಂಜನೇಯ ಬಾಗಳಿ, ಆಂಜನೇಯ ಸಿ, ಮಂಜುನಾಥ.ಸಿ, ವೀರೇಂದ್ರ.ಸಿ, ಬಸವರಾಜ್.ಸಿ, ಪಕ್ಕೀರಪ್ಪ ಛಲುವಾದಿ, ಸೇರಿದಂತೆ ಅನೇಕರು ಹಾಜರಿದ್ದರು.

ಉದಯವಾಹಿನಿ ಚಿತ್ರ

3 ದಶಕಗಳ ಕಾಲ ಹೋರಾಟದ ಫಲವಾಗಿ ಸರ್ವೋಚ್ಚ ನ್ಯಾಯಾಲಯ ನಮ್ಮ ಸಮುದಾಯಕ್ಕೆ ಮೀಸಲಾತಿಯಲ್ಲಿ ನ್ಯಾಯ ಕಲ್ಪಿಸಿದೆ. ಆದರೆ ರಾಜ್ಯ ಸರಕಾರದಿಂದ ನಮ್ಮ ಸಮುದಾಯಕ್ಕೆ ಮೀಸಲಾತಿ ಸಿಗುತ್ತಿಲ್ಲ. ಕೋರ್ಟ್ ಆದೇಶದಂತೆ ನಮಗೆ ಮೀಸಲಾತಿ ಶೀಘ್ರದಲ್ಲೇ ಜಾರಿಯಾಗಬೇಕು
-ಸಿ.ಪ್ರತಾಪ್, ಛಲವಾದಿ ಮಹಾಸಭಾದ ಅಧ್ಯಕ್ಷ

ಪ್ರಗತಿಯಲ್ಲಿ ಪ್ಲಾಟ್‌ಫಾರ್ಮ್ ಶೆಲ್ಟರ್ ಕಾಮಗಾರಿ

• ಉದಯವಾಹಿನಿ, ಸುಬ್ರಹ್ಮಣ್ಯ

ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ರೈಲು ನಿಲ್ದಾಣಗಳಲ್ಲಿ ಒಂದಾದ ಕಡಬ ತಾಲ್ಲೂಕಿನ ನೆಟ್ಟಣದ ಸುಬ್ರಹ್ಮಣ್ಯ ರೋಡ್ ರೈಲು ನಿಲ್ದಾಣದ ಎರಡನೇ ಪ್ಲಾಟ್‌ಫಾರ್ಮ್‌ನ ಶೆಲ್ಟರ್ ಕಾಮಗಾರಿ ಪ್ರಗತಿಯಲ್ಲಿದ್ದು, ಭರದಿಂದ ಸಾಗುತ್ತಿದೆ. ಇಲ್ಲಿನ ಪ್ರಯಾಣಿಕರ, ರೈಲು ಸಂಚಾರದ ಸಾಂದ್ರತೆ ಗಮನಿಸಿ ಇಲ್ಲಿ ಎರಡನೇ ಪ್ಲಾಟ್‌ಫಾರ್ಮ್ ನಿರ್ಮಾಣಗೊಂಡಿತ್ತು.

ಎರಡನೇ ಪ್ಲಾಟ್‌ಫಾರ್ಮ್ ನಿರ್ಮಾಣಗೊಂಡಿದ್ದರೂ ಅದನ್ನು ಸಂಪರ್ಕಸಲು ಮೇಲ್ಸೇತುವೆ ನಿರ್ಮಾಣಗೊಂಡಿರದೇ ಪ್ರಯಾಣಿಕರು ರೈಲು ಹಳಿ ದಾಟಿ ಅಪಾಯಕಾರಿಯಾಗಿ ಎರಡನೇ ಪ್ಲಾಟ್‌ಫಾರ್ಮ್‌ಗೆ ತೆರಳಬೇಕಾಗಿತ್ತು. ಬಳಿಕ ಪ್ರಯಾಣಿಕರ ಒತ್ತಾಯ, ಮಾಧ್ಯಮ ವರದಿ ಪರಿಣಾಮದಂತೆ ಮೇಲ್ಸೇತುವೆ ನಿರ್ಮಾಣಗೊಂಡು ಸಂಚಾರಕ್ಕೆ ಮುಕ್ತವಾಗಿತ್ತು.

ಎರಡನೇ ಪ್ಲಾಟ್‌ಫಾರ್ಮ, ಮೇಲ್ಸೇತುವೆ ನಿರ್ಮಾಣ ಗೊಂಡಿದ್ದರೂ ಪ್ಲಾಟ್‌ಫಾರ್ಮ್‌ನಲ್ಲಿ ಪ್ರಯಾಣಿಕರಿಗೆ ಕುಳಿತುಕೊಳ್ಳಲು ಅನುಕೂಲತೆಗೆ ತಕ್ಕಂತೆ ಯಾವುದೇ ಕೆಲಸಗಳು ನಡೆದಿರಲಿಲ್ಲ. ಮುಖ್ಯವಾಗಿ ಪ್ಲಾಟ್‌ಫಾರ್ಮ್‌ಗೆ ಶೆಲ್ಟರ್ ನಿರ್ಮಾಣ ಮಾಡದೇ ಪ್ರಯಾಣಿಕರು ಮಳೆ, ಬಿಸಿಲಿಗೆ ಸಮಸ್ಯೆ ಪಡುವಂತಾಗಿತ್ತು.

ಎರಡನೇ ಪ್ಲಾಟ್‌ಫಾರ್ಮ್‌ನಲ್ಲಿ ಕುಳಿತುಕೊಳ್ಳಲು ಬೆಂಜಿನ ವ್ಯವಸ್ಥೆ, ಕುಡಿಯುವ ನೀರು, ಬೆಳಕಿನ ವ್ಯವಸ್ಥೆ ಮತ್ತಿತರ ಮೂಲಸೌಕರ್ಯ ವ್ಯವಸ್ಥೆಗಳೂ ಇನ್ನಷ್ಟೇ ಆಗಬೇಕಾಗಿದೆ.

ಅಮೃತ ಭಾರತ್ ನಿಲ್ದಾಣ ಯೋಜನೆಯಡಿ ಸುಬ್ರಹ್ಮಣ್ಯ ರೋಡ್ ರೈಲು ನಿಲ್ದಾಣಕ್ಕೆ 26.16 ಕೋಟಿ ರೂ. ಅನುದಾನದ ಯೋಜನೆ ರೂಪಿಸಲಾಗಿದ್ದು, ಅದರಲ್ಲಿ ಈಗಾಗಲೇ 6.01 ಕೋಟಿ ರೂ. ವೆಚ್ಚದ ಕಾಮಗಾರಿ ನಡೆದಿದೆ.

ಇದರಲ್ಲಿ ಪ್ಲಾಟ್‌ಫಾರ್ಮ್ ಶೆಲ್ಟರ್, ನಿಲ್ದಾದ ಕ್ಯಾಂಟೀನ್ ಸ್ಲಾಬ್ ಕೆಲಸ ಸೇರಿದಂತೆ ನಿಲ್ದಾಣದ ಮೂಲಭೂತ ಅಭಿವೃದ್ಧಿ ಕೆಲಸಗಳು ಒಳಗೊಂಡಿದೆ ಎಂದು ರೈಲ್ವೇ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಉದಯವಾಹಿನಿ ಚಿತ್ರ

26.16 ಕೋಟಿ ರೂ. ಅನುದಾನದ ಯೋಜನೆ

ವಿಜಯಪುರದಲ್ಲಿ ಗೆಜೆಟ್ ದೋಷದಿಂದ ರೈತರ ಜಮೀನಿನಲ್ಲಿ ಗೊಂದಲ: ಎಂ.ಬಿ.ಪಾಟೀಲ

• ಉದಯವಾಹಿನಿ, ವಿಜಯಪುರ

ಹಳೆ ಗೆಜೆಟ್ ಅಧಿಸೂಚನೆಯಲ್ಲಿನ ದೋಷದ ಹಿನ್ನೆಲೆಯಲ್ಲಿ ವಕ್ಫ್ ಕಾಯ್ದೆಯಡಿ ಜಿಲ್ಲೆಯ ಹೊನವಾಡ ಗ್ರಾಮದ ರೈತರಿಗೆ ತಮ್ಮ ಪೂರ್ವಜರ ಭೂಮಿಯನ್ನು ಖಾಲಿ ಮಾಡುವಂತೆ ನೋಟಿಸ್ ನೀಡಲಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ಇದೆ ವೇಳೆ, ಗ್ರಾಮದಲ್ಲಿರುವ 1,200 ಎಕರೆ ರೈತರ ಜಮೀನಿನ ಮೇಲೆ ಕರ್ನಾಟಕ ವಕ್ಫ್ ಮಂಡಳಿ ಹಕ್ಕು ಪಡೆಯಲು ಸಾಧ್ಯವಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

1974ರಲ್ಲಿ ಗೆಜೆಟ್ ನೋಟಿಫಿಕೇಶನ್‌ನಲ್ಲಿ ಹೊನವಾಡ ಗ್ರಾಮ ಎಂದು ತಪ್ಪಾಗಿ ಬರೆಯಲಾಗಿತ್ತು. ಅಲ್ಲಿನ ಜಮೀನು ಮೂಲತಃ ಮಹಲ್ ಬಾಗ್ ಸರ್ವೆ ನಂಬರ್ ನ ಭಾಗವಾಗಿದೆ ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಪಾಟೀಲ್ ಸುದ್ದಿಗಾರರಿಗೆ ತಿಳಿಸಿದ್ದಾರೆ. 1977 ರಲ್ಲಿ, ವಕ್ಫ್ ಮಂಡಳಿಯು ತನ್ನ ದಾಖಲೆಗಳನ್ನು ಸರಿಪಡಿಸಿತ್ತು.

ಕೇವಲ 10 ಎಕರೆ ಖಬರಸ್ತಾನ್ ಭೂಮಿಗೆ ಸೇರಿದೆ ಎಂದು ಸ್ಪಷ್ಟಪಡಿಸಿತು. ಉಳಿದ ವಕ್ಫ್ ಎಂದು ಹೇಳಿಕೊಳ್ಳಲಾದ 1,200 ಎಕರೆ ಭೂಮಿ ರೈತರಿಗೆ ಸೇರಿದೆ. ಹಾಗಾಗಿ ರೈತರಿಗೆ ಸೇರಿದ ಒಂದು ಇಂಚು ಭೂಮಿಯೂ ವಕ್ಫ್ ಆಸ್ತಿಯಾಗಿಲ್ಲ ಎಂದು ಸಚಿವ ಪಾಟೀಲ್ ಹೇಳಿದ್ದಾರೆ.

ಗೊಂದಲ ಬಗೆಹರಿಸಲು ಜಿಲ್ಲಾ, ಕಂದಾಯ ಇಲಾಖೆ ಹಾಗೂ ವಕ್ಫ್ ಮಂಡಳಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು.10 ಎಕರೆ ಖಬರಸ್ತಾನ್ ಭೂಮಿ ಕೂಡ ಪಂಚಾಯತ್ ಆಸ್ತಿ, ಸಂಬಂಧಿಸಿದ ವಿಷಯವೂ ಅಧೀನವಾಗಿದೆ ಮತ್ತು ಫಲಿತಾಂಶ ಕ್ಕಾಗಿ ಜನರು ಕಾಯಬೇಕು ಎಂದರು.

ವಿಜಯಪುರದ ಇಂಡಿ ತಾಲೂಕಿನ ಗ್ರಾಮಗಳಲ್ಲಿ ಮ್ಯುಟೇಶನ್ ಬದಲಾವಣೆ ಬಗ್ಗೆ ಸಚಿವರ ಗಮನ ಸೆಳೆದಾಗ, ಹೊನವಾಡ ಗ್ರಾಮವನ್ನು ಉಲ್ಲೇಖಿಸಿ ಇಂಡಿ ಅಲ್ಲ ಎಂದು ಹೇಳಿದರು. ಹೊನವಾಡದ ಗ್ರಾಮಸ್ಥರು ತಮ್ಮ ಜಮೀನು ವಕ್ಫ್ ಮಂಡಳಿಗೆ ಸೇರಿದ್ದು ಎಂದು ನೋಟಿಸ್ ಬಂದಿದ್ದರಿಂದ ಆಕ್ರೋಶಗೊಂಡು ವಿಜಯಪುರದ ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಧರಣಿ ನಡೆಸಿ ಗಮನ ಸೆಳೆದಿದ್ದರು.

ಬೇಂದ್ರೆ ಅಂದರೆ ಶಬ್ದಗಾರುಡಿಗರು: ಬಿ. ಎಂ. ಹಿರೇಮಠ

• ಉದಯವಾಹಿನಿ, ಮುದ್ದೇಬಿಹಾಳ

ಬೇಂದ್ರೆಯವರ ಕಾವ್ಯ ಹಲವು ವೈಶಿಷ್ಟ್ಯಗಳಿಂದ ಕೂಡಿದೆ. ಅದನ್ನು ಸುಲಭವಾಗಿ ಅರ್ಥೈಸಲು ಸಾಧ್ಯವಿಲ್ಲ. ಬೇಂದ್ರೆಯವರ ಕಾವ್ಯದಲ್ಲಿ ತಾಯಿ, ಅಜ್ಜಿ, ಹೆಂಡತಿ, ಪರಿಸರ, ಸಾಹಿತ್ಯದ ಹಲವು ಪ್ರಕಾರಗಳು ಪ್ರಭಾವವನ್ನು ಬೀರಿವೆ ಬೇಂದ್ರೆ ಅಂದರೆ ಶಬ್ದ ಗಾರುಡಿಗರು ಎಂದು ಹಿರಿಯ ಸಾಹಿತಿ ವಾಗ್ಮಿ ಬಿ ಎಂ ಹಿರೇಮಠ ಹೇಳಿದರು.

ಅವರು ಪಟ್ಟಣದ ಖಾಸ್ಗತೇಶ್ವರ ಮಠದ ಪ್ರಾಂಗಣದಲ್ಲಿ ತಾಲೂಕ ಸಾಹಿತ್ಯ ಪರಿಷತ್ತಿನಿಂದ ನಡೆದ ದ.ರಾ ಬೇಂದ್ರೆಯವರ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕನ್ನಡಕ್ಕೆ ಎರಡನೇ ಜ್ಞಾನಪೀಠವನ್ನು ತಂದು ಕೊಟ್ಟವರು ಬೇಂದ್ರೆ ಅವರ ಸಾಹಿತ್ಯದಲ್ಲಿ ವ್ಯಕ್ತಿ ವಿಶಿಷ್ಟತೆಗಳನ್ನು ಹುಡುಕಾಟದ ಬದಲು ಜೀವನ ಸೃಜನಶಿಲತೆ ಹುಡುಕಾಟ ದಾರಿಯಾಗಿತ್ತು. ಸಮರಸದ ರಸ ಭಾವವನ್ನು ಸಂಸ್ಕೃತಿಯೊಂದಿಗೆ ನಮ್ಮ ಭಾಷೆಗೆ ತಾಯ್ತನದ ಗುಣವಿದೆ ಎಂದು ಬಣ್ಣಿಸಿದರು.

ತಾಲ್ಲೂಕ ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಮಾತನಾಡಿ ಮುದ್ದೇಬಿಹಾಳ ತಾಲ್ಲೂಕ ಕಸಾಪ ಪದಾಧಿಕಾರಿಗಳ ರಚನೆ ಬಗ್ಗೆ ಚಿಂತೆ ಬೇಡ ಕನ್ನಡ ಸಾಹಿತ್ಯದ ಕುರಿತು ಅಭಿರುಚಿಯ ಕನ್ನಡ ಮನಸ್ಸುಗಳು ಕಸಾಪದ ಪದಾಧಿಕಾರಿಗಳು ಇದ್ದಂತೆ ಕನ್ನಡ ನುಡಿ ಕಟ್ಟುವ ಕೈಂಕರ್ಯಕ್ಕೆ ಎಲ್ಲರ ಸಹಕಾರ ಅಗತ್ಯವಿದೆ ಸಾಹಿತ್ಯಕ್ಕೆ ಸಮಾಜದ ಮನೋಭಾವ ಬದಲಿಸುವ ಶಕ್ತಿ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು. ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ.

ವೃಷಭ ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡಬೇಡಿ. ನೀವು ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ.

ಮಿಥುನ ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ದೀರ್ಘ ಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು.

ಕರ್ಕಾಟಕ ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು.

ಸಿಂಹ ಸಂಗಾತಿಯ ಆರೋಗ್ಯಕ್ಕೆ ಸೂಕ್ತ ರಕ್ಷಣೆ ಮತ್ತು ಗಮನದ ಅಗತ್ಯವಿದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ.

ಕನ್ಯಾ ನಿಮ್ಮ ವಸ್ತುಗಳ ಬಗ್ಗೆ ಅಸಡ್ಡೆ ಹೊಂದಿದ್ದಲ್ಲಿ ಕಳ್ಳತನ ಆಗಬಹುದು. ಹಾಗೆ, ನೀವು ನಿಮ್ಮ ಸಂಗಾತಿಯ ಮೇಲೆ ಇಂದು ಬಹಳ ಹಣ ಖರ್ಚು ಮಾಡುವಂತೆ ತೋರುತ್ತದೆ, ಆದರೆ ಒಳ್ಳೆಯ ಸಮಯವನ್ನಂತೂ ಹೊಂದಿರುತ್ತೀರಿ.

ತುಲಾ ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ. ಪ್ರೀತಿ ಸಂಗಾತಿಯ ಸಾಮಾಜಿಕ ಮಾಧ್ಯಮದ ಕಳೆದ ಕೆಲವು ಸ್ಟೇಟಸ್‌ಗಳನ್ನು ಪರಿಶೀಲಿಸಿ, ನೀವು ಒಂದು ಸುಂದರ ಅಚ್ಚರಿಯನ್ನು ಪಡೆಯುತ್ತೀರಿ.

ವೃಶ್ಚಿಕ ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ಗಡಿಬಿಡಿಯ ನಿರ್ಧಾರಗಳನ್ನು ಕೈಗೊಳ್ಳಬೇಡಿ.

ಧನಸ್ಸು ಬಹಳಷ್ಟು ವಿಷಯಗಳು ನೀವು ಬಯಸಿದಂತಿರುವ ಹಾಸ್ಯದಿಂದ ತುಂಬಿದ ಒಂದು ದಿನ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು.

ಮಕರ ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು.

ಕುಂಭ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಹಾಗೂ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ.

ಮೀನ ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

ಸಿಂಥೆಟಿಕ್ ಡ್ರಗ್ಸ್ ಮೊರೆ ಹೋಗುತ್ತಿರುವ ಮಾದಕ ವ್ಯಸನಿಗಳು

ಮಾದಕ ದ್ರವ್ಯ ವ್ಯಸನಿಗಳು ಮೆಡಿಕಲ್‌ಗಳಲ್ಲಿ ಸಿಗುವ ಕೆಲ ಮಾತ್ರೆಗಳನ್ನು ಬಳಸುತ್ತಿದ್ದು ಇದಕ್ಕೆ ಕಡಿವಾಣ ಹಾಕಬೇಕಿದೆ

ಕಠಿಣ ಕ್ರಮಕ್ಕೆ ಪರಮೇಶ್ವರ್ ಸೂಚನೆ

• ಉದಯವಾಹಿನಿ, ಶಿವಮೊಗ್ಗ

ಶಿವಮೊಗ್ಗ ನಗರದಲ್ಲಿ ಪೊಲೀಸ್ ಇಲಾಖೆಯು ನೂತನವಾಗಿ ನಿರ್ಮಿಸಿರುವ ಜಿಲ್ಲಾ ಪೊಲೀಸ್ ಭವನವನ್ನು ಉದ್ಘಾಟಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು, ಬಳಿಕ ಶಿವಮೊಗ್ಗ ಜಿಲ್ಲಾ ಪೊಲೀಸ್ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕೆಲವು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಾದಕ ದ್ರವ್ಯ ವ್ಯಸನಿಗಳು ಸಿಂಥೆಟಿಕ್ ಡ್ರಗ್ ಮೊರೆ ಹೋಗುತ್ತಿದ್ದಾರೆ. ಮೆಡಿಕಲ್‌ಗಳಲ್ಲಿ ಸಿಗುವ ಕೆಲ ಮಾತ್ರೆಗಳನ್ನು ಬಳಸುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕಿದೆ. ಅಂತಹ ಔಷಧಗಳನ್ನು ವೈದ್ಯರ ಸಲಹೆ ಇಲ್ಲದೆ ಮಾರಾಟ ಮಾರಾಟಬಾರದು. ಸಮಾಜದ ಶಾಂತಿ ಕದಡುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳಲ್ಲಿ ದ್ವೇಷಪೂರಿತ, ಸುಳ್ಳು ಸುದ್ದಿ, ವಿವಾದಾತ್ಮಕ ಪೋಸ್ಟ್‌ಗಳನ್ನು ಪ್ರಕಟಿಸುವರ ಮೇಲೆ ನಿಗಾವಹಿಸಿ, ಕಾನೂನು ಚೌಕಟ್ಟಿನಲ್ಲಿ ಕ್ರಮ ಜರುಗಿಸುವಂತೆ ಸೂಚಿಸಿದರು.

ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಮಕ್ಕಳ ಓದಿಗಾಗಿ ಗ್ರಂಥಾಲಯಗಳಲ್ಲಿ ಹೆಚ್ಚಿನ ಸೌಲಭ್ಯಗಳನ್ನು ಕಲ್ಪಿಸಬೇಕು. ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವವರಿಗೆ ವಿವಿಧ ವಿಷಯಗಳ ಅವಶ್ಯಕ ಪುಸ್ತಕಗಳನ್ನು ಒದಗಿಸಿ. ಪೊಲೀಸ್ ಇಲಾಖೆ ಸರ್ಕಾರದ ಮುಖ. ಅಧಿಕಾರಿ ಮತ್ತು ಸಿಬ್ಬಂದಿಗಳು ಚೆನ್ನಾಗಿ ಕೆಲಸ ಮಾಡಿ, ಅಪರಾಧ ಪ್ರಕರಣಗಳನ್ನು ನಿಯಂತ್ರಣಕ್ಕೆ ತಂದರೆ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ. ನಮ್ಮ ಇಲಾಖೆಯ ಮೇಲೆ ಹೆಚ್ಚು ಜವಾಬ್ದಾರಿ ಇದೆ.

ಬಡವರ ಪರ ಸರ್ಕಾರ ನಮ್ಮದು. ಸಮಾಜದಲ್ಲಿ ಬಡವರಿಗೆ ಸಹಾಯವಾಗುವ ನಿಟ್ಟಿನಲ್ಲಿ ಕೆಲಸವಾಗಬೇಕು. ಎಸ್‌ಸಿ, ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾದ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಕಡಿಮೆ ಇದೆ. ಪ್ರಕರಣ ದಾಖಲಿಸುವ

ಉದಯವಾಹಿನಿ ಚಿತ್ರ

ಸಂದರ್ಭದಲ್ಲಿ ಎಚ್ಚರಿಕೆ ವಹಿಸಿ, ಸೂಕ್ತ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಬೇಕು. ಶಿಕ್ಷೆ ಆಗುವ ನಿಟ್ಟಿಲ್ಲಿ ಕೆಲಸ ಮಾಡಬೇಕು. ಕೊಪ್ಪಳದಲ್ಲಿ ನಡೆದಿದ್ದ ಘಟನೆಯಲ್ಲಿ ಒಂದೇ ಪ್ರಕರಣದಲ್ಲಿ 98 ಮಂದಿಗೆ ಜೀವಾವಧಿ ಶಿಕ್ಷೆಯಾಗಿರುವ ಪ್ರಕರಣವನ್ನು ಮಾದರಿಯಾಗಿ ತೆಗೆದುಕೊಂಡು ಕರ್ತವ್ಯ ನಿರ್ವಹಿಸಿ.

ಸೈಬರ್ ಕ್ರೈಂ, ಡ್ರಗ್ಸ್ ಪ್ರಕರಣಗಳು ಪೊಲೀಸ್ ಇಲಾಖೆಗೆ ಸವಲಾಗಿ ಪರಿಣಮಿಸುತ್ತಿವೆ. ಇದಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಸಿಬ್ಬಂದಿಗಳನ್ನು ನೀಡಿ ಸಿಇಎನ್ ಠಾಣೆಗಳ ಬಲವರ್ಧಿಸಲಾಗುವುದು ಎಂದು ಹೇಳಿದ್ದಾರೆ.

ನಿಗಾವಹಿಸಬೇಕು

ಶಿವಮೊಗ್ಗ ಪ್ರವಾಸದ್ಯೋಮ ಜಿಲ್ಲೆಯಾಗಿರುವುದರಿಂದ ಸಾಕಷ್ಟು ಜನರು ವಿವಿಧೆಡೆಯಿಂದ ಪ್ರವಾಸಕ್ಕೆ ಬರುತ್ತಾರೆ. ಕಿಡಿಗೇಡಿಗಳು ಪ್ರವಾಸಿಗರಿಗೆ ತೊಂದರೆ ಉಂಟು ಮಾಡುತ್ತಿರುತ್ತಾರೆ. ಈ ಬಗ್ಗೆ ಹೆಚ್ಚು ನಿಗಾವಹಿಸಿ ಬಿಸಿ ಮುಟ್ಟಿಸಬೇಕು. ವಿವಿಧ ಆಚರಣೆಗಳ ಸಂದರ್ಭದಲ್ಲಿ ವಿವಾದಾತ್ಮಕ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕುತ್ತಿದ್ದಾರೆ. ಈ ಬಗ್ಗೆ ನಿಗಾವಹಿಸಬೇಕು. ಸಂಬಂಧಪಟ್ಟವರಿಗೆ ಎಚ್ಚರಿಸಿ ಕ್ರಮ ತೆಗೆದುಕೊಂಡರೆ ವಿವಾದಗಳು ಸೃಷ್ಟಿಯಾಗುವುದಿಲ್ಲ.

ಈ ಸಂದರ್ಭದಲ್ಲಿ ಶಾಸಕರಾದ ಬಿ.ಕೆ.ಸಂಗಮೇಶ್ವರ, ಎಸ್.ಎನ್.ಚೆನ್ನಬಸಪ್ಪ, ಬೇಳೂರು ಗೋಪಾಲಕೃಷ್ಣ, ವಿಧಾನಪರಿಷತ್ ಸದಸ್ಯರಾದ

> ಬಹುತೇಕ ಪ್ರಕರಣಗಳು ಬಂದಾಗ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಸರಿಯಾಗಿ ಸ್ಪಂದಿಸುತ್ತಿಲ್ಲ. ಪೊಲೀಸರು ದೂರುಗಳನ್ನು ತೆಗೆದುಕೊಳ್ಳುತ್ತಿಲ್ಲ ಎಂದು ಪ್ರತಿದಿನ ಸಾರ್ವಜನಿಕರು ನನ್ನ ಬಳಿಗೆ ದೂರು ತೆಗೆದುಕೊಂಡು ಬರುತ್ತಿದ್ದಾರೆ. ಇದು ಮುಂದುವರಿದರೆ ಸಹಿಸುವುದಿಲ್ಲ. ಠಾಣೆಗೆ ಬರುವ ಜನರ ಸಮಸ್ಯೆಗಳನ್ನು ಆಲಿಸಿ, ಜನಸ್ನೇಹಿಯಾಗಿ ಕೆಲಸ ಮಾಡಬೇಕು. –ಸಚಿವ ಪರಮೇಶ್ವರ್

ಬಲ್ಕೀಶ್ ಭಾನು, ಡಿ.ಎಸ್.ಅರುಣ್, ಶಿವಮೊಗ್ಗ –ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಸ್.ಸುಂದರೇಶ್, ಪೂರ್ವ ವಲಯ ಐಜಿಪಿ ರಮೇಶ್ ಬಾನೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಕುಮಾರ್ ಅವರು ಉಪಸ್ಥಿತರಿದ್ದರು.

ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಶ್ಲಾಘನೀಯ: ಸಿಪಿಐ ಕಪಿಲದೇವ

• ಉದಯವಾಹಿನಿ, ಚಿಂಚೋಳಿ

ಮಹೇಶ ಹೂಂಡಾ ಶೋರೂಂ ವತಿಯಿಂದ ದೀಪಾವಳಿ ಹಾಗೂ ದಸರಾ ಹಬ್ಬದ ನಿಮಿತ್ತ ಸಾರ್ವಜನಿಕರು ನೂತನವಾಗಿ ದ್ವಿಚಕ್ರ ವಾಹನ ಖರೀದಿಸುವರಿಗೆ ರಸ್ತೆ ಸುರಕ್ಷತಾ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಮಾಡುತ್ತಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದು ಸಿಪಿಐ ಕಪಿಲದೇವ ಹೇಳಿದರು.

ಪಟ್ಟಣದ ಮಹೇಶ ಹೂಂಡಾ ಶೋರಂ ವತಿಯಿಂದ ನೂತನ ದ್ವಿಚಕ್ರ ವಾಹನ ವಿತರಣೆ ಜೋತೆ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ಷೇತ್ರದ ಜನರು ರಸ್ತೆಯ ಸುರಕ್ಷತಾ ಕ್ರಮ ಕೈಗೊಳ್ಳಬೇಕು ಯಾವುದೇ ಅಪಘಾತ ಸಂಭವಿಸದಂತೆ ವಾಹನ ಸವಾರರು ಕಾನೂನಿನ ಪಾಲನೆ ಮಾಡಬೇಕು.

ದ್ವಿಚಕ್ರ ವಾಹನ ಡಬಲ್ ಮಾತ್ರ ಹೋಗಿ ತಪ್ಪದೆ ಹೆಲ್ಮೆಟ್ ಧರಿಸಿ, ರಸ್ತೆಗಳ ಮಾರ್ಗಗಳಿಗೆ ಅಳವಡಿಸುವ

ಉದಯವಾಹಿನಿ ಚಿತ್ರ

ನಾಮಫಲಕಗಳು ಮತ್ತು ಲೈಸೆನ್ಸ್ ವಾಹನ ಇನ್ಸೂರೆನ್ಸ್ ಕಡ್ಡಾಯವಾಗಿ ತೆಗೆದುಕೊಳ್ಳಿ ಕಾನೂನು ಪಾಲನೆ ಮಾಡಬೇಕು ಕಾನೂನು ಪಾಲನೆ ಮಾಡುವವರಿಗೆ ನಾವು ಕೂಡ ಗೌರವ ಕೊಡುತ್ತೇವೆ, ಮಹೇಶ ಹೂಂಡಾ ಶೋರಂ ಮಾಲಿಕರು ವಾಹನ ಮಾರಾಟ ಜೋತೆ ರಸ್ತೆ ಸುರಕ್ಷತೆ ಕಾರ್ಯಕ್ರಮ ಮತ್ತು ಸಮಾಜ ಸೆವೆ ಮಾಡುತ್ತಿರುವುದು ಅತ್ಯಂತ ಶ್ಲಾಘನೀಯವಾಗಿದೆ ಎಂದರು.

ಪಿಎಸ್‌ಐ ಗಂಗಮ್ಮಾ, ಮಹೇಶ ಹೂಂಡಾ ಶೋರಂ ವ್ಯವಸ್ಥಾಪಕ ಮಹೇಶ ಪತ್ತಾರ ಇದ್ದರು.

6 ವರ್ಷ ಹಿಂದಿನ ಪ್ರಕರಣದ ತನಿಖೆಗೆ ಇಳಿದ ಎಡಿಜಿಪಿ ಬಿ.ಕೆ.ಸಿಂಗ್

• ಉದಯವಾಹಿನಿ, ಚಿಕ್ಕಮಗಳೂರು

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಅನ್ವರ್ ಕೊಲೆಯಾಗಿ ಆರು ವರ್ಷ ಕಳೆದಿದ್ದು ಇದುವರೆಗೂ ಕೊಲೆಗಾರರ ಪತ್ತೆಯಾಗಿಲ್ಲ, ಈ ಹಿನ್ನೆಲೆಯಲ್ಲಿ ಎಡಿಜಿಪಿ ಬಿ.ಕೆ. ಸಿಂಗ್ ಪ್ರಕರಣದ ತನಿಖೆಗೆ ಇಳಿದಿದ್ದು ನಗರಕ್ಕೆ ಆಗಮಿಸಿದ ಅವರು ಮಾಹಿತಿ ಕಲೆ ಹಾಕಿದ್ದಾರೆ.

ಬಿಜೆಪಿ ಮುಖಂಡ ಅನ್ವರ್ ಅವರನ್ನು 2018 ಜೂ.22 ರಂದು ಗೌರಿ ಕಾಲುವೆ ಬಡಾವಣೆಯಲ್ಲಿನ ಅವರ ಮನೆ ಸಮೀಪದಲ್ಲಿ ಕೊಲೆ ಮಾಡಲಾಗಿತ್ತು. ಈ ಕೊಲೆ ಪ್ರಕರಣ ಇಡೀ ಚಿಕ್ಕಮಗಳೂರು ನಗರವನ್ನು ಬೆಚ್ಚಿ ಬೀಳಿಸಿತ್ತು. ಈ ಪ್ರಕರಣವನ್ನು 2019ರಲ್ಲಿ ಅಂದಿನ ಬಿಜೆಪಿ ಸರ್ಕಾರ ಸಿಐಡಿಗೆ ವಹಿಸಿತ್ತು. ಆದರೂ ಅನ್ವರ್ ಕೊಲೆ ಪ್ರಕರಣದ ಆರೋಪಿಗಳ ಪತ್ತೆ ಸಾಧ್ಯವಾಗಿಲ್ಲ. ಅನ್ವರ್ ಕೊಲೆ ಪ್ರಕರಣದ ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸಬೇಕೆಂದು

ಉದಯವಾಹಿನಿ ಚಿತ್ರ

ಅನ್ವರ್ ಕುಟುಂಬದವರು ಚಿಕ್ಕಮಗಳೂರು ನಗರದಲ್ಲಿ ಅನೇಕ ಬಾರಿ ಪ್ರತಿಭಟನೆ ನಡೆಸಿ ಸರ್ಕಾರವನ್ನು ಆಗ್ರಹಿಸಿದ್ದರು. ಜತೆಗೆ ಕೊಲೆ ಆರೋಪಿಗಳನ್ನು ಶೀಘ್ರವೇ ಬಂಧಿಸಿ ಇಲ್ಲವೇ ದಯಾಮರಣಕ್ಕೆ ಅನುಮತಿ ನೀಡುವಂತೆ ಪ್ರಧಾನ ಮಂತ್ರಿಗಳಿಗೆ ಪತ್ರ ಬರೆದಿದ್ದ ಘಟನೆ ನಡೆದಿತ್ತು.

ಕುಟುಂಬಸ್ಥರು ಪೊಲೀಸ್ ಇಲಾಖೆ, ರಾಜ್ಯ ಸರ್ಕಾರದ ಮೇಲೆ ಎಷ್ಟೇ ಒತ್ತಡ ತಂದರೂ ಕೊಲೆ ಆರೋಪಿಗಳ ಸುಳಿವಿಲ್ಲ. ಪ್ರಕರಣ ನಡೆದು ಆರು ವರ್ಷಗಳು ಕಳೆದಿದ್ದು, ನ್ಯಾಯಕ್ಕಾಗಿ ಮೊರೆ ಇಟ್ಟಿದ್ದ ಕುಟುಂಬ ಕೈಚೆಲ್ಲಿ

ಕುಟುಂಬದಲ್ಲಿ ಆಶಾ ಭಾವನೆ

ಎಡಿಜಿಪಿ ಬಿ.ಕೆ.ಸಿಂಗ್ ಅವರು ಈ ಹಿಂದೆ ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದರು. ಸದ್ಯ ಅನ್ವರ್ ಕೊಲೆ ಪ್ರಕರಣದ ತನಿಖೆಯನ್ನು ಕೈಗೆತ್ತಿಕೊಂಡಿದ್ದು, ನ್ಯಾಯಕ್ಕಾಗಿ ಹಂಬಲಿಸುತ್ತಿದ್ದ ಅನ್ವರ್ ಕುಟುಂಬದಲ್ಲಿ ಆಶಾ ಭಾವನೆ ಮೂಡಿಸಿದೆ.

ಕುಳಿತಿದೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಎಡಿಜಿಪಿ ಬಿ.ಕೆ.ಸಿಂಗ್ ಅವರು ಖುದ್ದು ತನಿಖೆಗೆ ಇಳಿದಿದ್ದಾರೆ. ಅನ್ವರ್ ಕೊಲೆ ನಡೆದ ಜಾಗ, ಅಲ್ಲಿನ ಮಾರ್ಗಗಳು ಸೇರಿದಂತೆ ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಯನ್ನು ಪ್ರಕರಣದ ತನಿಖೆ ನಡೆಸಿದ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ.

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಕಿರಣಿ ಅಂಗಡಿ ಭಸ್ಮ: ಮಾಲಿಕ ಕಂಗಾಲು

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಸುಲೇಪೇಟ್ ಗ್ರಾಮದ ಕಿರಾಣಿ ಅಂಗಡಿಯೊಂದರಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಸಂಪೂರ್ಣ ಭಸ್ಮವಾಗಿರುವ ಘಟನೆ ಮಧ್ಯರಾತ್ರಿ ವರದಿಯಾಗಿದೆ.

ಸುಲೇಪೇಟದ ಸಿದ್ದಯ್ಯಸ್ವಾಮಿ ಕಪೂರ ಪಸ್ತಾಪೂರರವರಿಗೆ ಸೇರಿದ ಅಂಗಡಿ ಹಾಗೂ ಜನರಲ್ ಸ್ಟೋರ್ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ತಗುಲಿ ದಿನಸಿ ಮತ್ತು ಜನರಲ್ ಸ್ಟೋರ್ ಅಂಗಡಿ ಸಂಪೂರ್ಣವಾಗಿ ಭಸ್ಮವಾಗಿ ಅಂದಾಜು 6ಲಕ್ಷಕ್ಕಿಂತ ಹೆಚ್ಚು ಹಾನಿಯಾಗಿದೆ. ದಿನನಿತ್ಯದಂತೆ ಅಂಗಡಿಗೆ ಬೀಗ ಹಾಕಿಕೊಂಡು ಹೋಗಿದ್ದೇನೆ ಮಧ್ಯರಾತ್ರಿ ಒಂದು ಗಂಟೆ ಸುಮಾರಿಗೆ ಅಂಗಡಿಯಿಂದ ಹೊಗೆ ಬರುತ್ತಿರುವ ಬಗ್ಗೆ ಸ್ಥಳೀಯರು ನನಗೆ ಮಾಹಿತಿ ನೀಡಿದ್ದು ಅಂಗಡಿಗೆ ಬಂದು ನೋಡುವಷ್ಟರಲ್ಲಿ ನೆರೆ ಹೊರೆಯವರು ಬಂದು ಅಗ್ನಿ ನಂದಿಸಲು ಯತ್ನಿಸಿದ್ದರೂ ಬೆಂಕಿಯು ನಿಯಂತ್ರಣಕ್ಕೆ ಬರಲಿಲ್ಲ

ಉದಯವಾಹಿನಿ ಚಿತ್ರ

ತದನಂತರ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದರು ಎಂದು ಅಂಗಡಿ ಮಾಲಿಕ ಸಿದ್ದಯ್ಯಸ್ವಾಮಿ ಕಪೂರ ತಿಳಿಸಿದ್ದಾರೆ.

ಅಂಗಡಿ ಸಂಪೂರ್ಣ ಭಸ್ಮವಾಗಿ ಲಕ್ಷಾಂತರ ರೂಪಾಯಿ ನಷ್ಟವಾಗಿವೆ ರಾತ್ರಿ ಘಟನಾ ಸ್ಥಳಕ್ಕೆ ಸಿಪಿಐ ರಾಘವೇಂದ್ರ ಮತ್ತು ಸುಲೇಪೇಟ ಕಂದಾಯ ನಿರೀಕ್ಷಕ ಕೇಶವರಾವ ಕುಲಕರ್ಣಿ ಸ್ಥಳಕ್ಕೆ ಭೇಟಿ ನೀಡಿ ಅಂಗಡಿ ಮಾಲಿಕನಿಂದ ಮಾಹಿತಿ ಕಲೆ ಹಾಕಿದ್ದಾರೆ.

ಶನಿವಾರ ಬೆಳಿಗ್ಗೆ ಸೇಡಂ ಮತಕ್ಷೇತ್ರದ ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ್ ಭೇಟಿ ನೀಡಿ ಅಂಗಡಿ ಪರಿಶೀಲನೆ ಮಾಡಿ ಮಾತನಾಡಿದ

> ಶಾರ್ಟ್ ಸರ್ಕ್ಯೂಟ್ ನಿಂದ ಕಿರಾಣಿ ಅಂಗಡಿಯಲ್ಲಿ ಬೆಂಕಿ ಹೊತ್ತಿಕೊಂಡು ಅಕ್ಕಿ, ಜೋಳ, ಗೋಧಿ ಹಿಟ್ಟು, ಎಣ್ಣೆ ಇನ್ನೀತರ ದಿನಸಿ ಪದಾರ್ಥಗಳು ಬೆಂಕಿಗೆ ಸಂಪೂರ್ಣವಾಗಿ ಆಹುತಿಯಾಗಿ ಅಂದಾಜು 6ಲಕ್ಷ ರೂಪಾಯಿ ನಷ್ಟ ಸಂಭವಿಸಿದೆ ಸರಕಾರದಿಂದ ಸೂಕ್ತ ಪರಿಹಾರ ನೀಡಿದ್ದರೆ ಬಡ ವ್ಯಾಪಾರಿಗೆ ಅನುಕೂಲವಾಗುತ್ತದೆ
> – ಸಿದ್ದಯ್ಯಸ್ವಾಮಿ ಕಪೂರ, ಅಂಗಡಿ ಮಾಲಿಕರು ಸುಲೇಪೇಟ.

ಅವರು, ಸುಲೇಪೇಟ ಗ್ರಾಮದ ಸಿದ್ದಯ್ಯಸ್ವಾಮಿ ಕಪೂರ ಅವರಿಗೆ ಸೇರಿದ ಕಿರಾಣಿ ಅಂಗಡಿಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಕಿರಾಣಿ ಅಂಗಡಿ ಸಂಪೂರ್ಣ ಭಸ್ಮವಾಗಿ ಸಾಕಷ್ಟು ನಷ್ಟವಾಗಿದೆ, ಸರಕಾರದಿಂದ ಸಿಗುವ ಪರಿಹಾರ ನೀ

ಡೊನಾಲ್ಡ್ ಟ್ರಂಪ್ Vs ಕಮಲಾ ಹ್ಯಾರಿಸ್: ಯಾರ ನೀತಿಗಳು ಬೆಸ್ಟ್?

ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮಾಕ್ರೆಟಿಕ್, ರಿಪಬ್ಲಿಕನ್ ಪಕ್ಷದ ನೀತಿಗಳ ಫೈಟ್, ಗರ್ಭಪಾತ ಹಕ್ಕುಗಳ ವಿಚಾರವಾಗಿ ಭಿನ್ನ ನಿಲುವು

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷೀಯ ಚುನಾವಣೆ ದೇಶದ ನೀತಿ ನಿರೂಪಣೆಗಳ ಮೇಲೆ ನಿಂತಿದೆ. ಆರ್ಥಿಕತೆಯಿಂದ ಗರ್ಭಪಾತದ ಹಕ್ಕುಗಳು, ವಲಸೆ ನೀತಿಗಳಿಂದ ಹಿಡಿದು ಚೀನಾ ಜತೆಗಿನ ಸಂಘರ್ಷ, ಮಧ್ಯಪ್ರಾಚ್ಯ ಬಿಕ್ಕಟ್ಟಿನಿಂದ ಹವಾಮಾನ ಬದಲಾವಣೆ ವಿಷಯಗಳು ಚುನಾವಣಾ ಪ್ರಚಾರದಲ್ಲಿ ಪ್ರಮುಖ ವಿಷಯಗಳಾಗಿವೆ.

ಭಿನ್ನ ನಿಲುವು ಹೊಂದಿರುವ ಇಬ್ಬರು ಅಭ್ಯರ್ಥಿಗಳು ದೇಶದ ನೀತಿಗಳ ವಿಚಾರದಲ್ಲಿ ತಮ್ಮದೇ ಆದ ನಿಲುವು ಪ್ರತಿಪಾದಿಸುವ ಮೂಲಕ ಮತದಾರರ ಮನ ಗೆಲ್ಲಲು ಯತ್ನಿಸಿದ್ದಾರೆ. ಡೆಮಾಕ್ರಟಿಕ್ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರು ಸಮಗ್ರ ವಲಸೆ ನೀತಿ ರೂಪಿಸುವ ಆಶಯ ವ್ಯಕ್ತಪಡಿಸಿದ್ದರೆ, ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ವಿವಾದಾತ್ಮಕ ಎನಿಸಿರುವ ಹಳೆ ವಲಸೆ ನೀತಿ ಪುನಃ ಜಾರಿಗೊಳಿಸುವ ಇಚ್ಛೆ ವ್ಯಕ್ತಪಡಿಸಿದ್ದಾರೆ. **ಹ್ಯಾರಿಸ್, ಟ್ರಂಪ್ ನೀತಿ ನಿಲುವು:** ಡೆಮಾಕ್ರಟಿಕ್ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರು ಚುನಾವಣಾ ಪ್ರಚಾರದಲ್ಲಿ ತಮ್ಮ ಪಕ್ಷದ ನೀತಿಗಳ ಕುರಿತು ಮಾರ್ಗ ಸೂಚಿ ಬಿಡುಗಡೆ ಮಾಡಿದ್ದಾರೆ. ಭವಿಷ್ಯದ ಆಡಳಿತ ಹೇಗಿರಲಿದೆ ಎಂಬ ಬಗ್ಗೆ ಸಂಕ್ಷಿಪ್ತ ಮಾಹಿತಿ ನೀಡಿ, ಮತಯಾಚಿಸಿದ್ದಾರೆ.

ಅಡಮಾನದ ಸಹಾಯ ನೀಡುವ ಭರವಸೆ

ಆರ್ಥಿಕತೆ-ತೆರಿಗೆ: ಅಮೆರಿಕ ಜನರನ್ನು ಇನ್ನಿಲ್ಲದಂತೆ ಕಾಡಿರುವ ಹಣದುಬ್ಬರ, ಅತಿಯಾದ ಬಡ್ಡಿದರ ಇಳಿಕೆ ಮಾಡುವುದಾಗಿ ಹ್ಯಾರಿಸ್ ಭರವಸೆ ನೀಡಿ ದ್ದಾರೆ. ಮೊದಲ ಬಾರಿಗೆ ಮನೆ ಖರೀದಿರುವ ಜನ ರಿಗೆ ಅಡಮಾನದ ಸಹಾಯ ನೀಡುವ ಭರವಸೆ ನೀಡಿದ್ದಾರೆ. ಉದ್ಯಮಿಗಳು, ಸಣ್ಣ ವ್ಯಾಪಾರಿಗಳಿಗೆ ತೆರಿಗೆ ವಿನಾಯಿತಿ, ನವಜಾತ ಶಿಶು ಪಡೆಯುವ ಪೋಷಕರಿಗೆ ಶೂನ್ಯ ತೆರಿಗೆ ನೀತಿ ಜಾರಿ ಮಾಡುವ ಆಶ್ವಾಸನೆ ನೀಡಿದ್ದಾರೆ.

ಗರ್ಭಪಾತ ಹಕ್ಕುಗಳ ನಿಲುವು

ಗರ್ಭಪಾತ ಹಕ್ಕುಗಳ ಪರವಾದ ನಿಲುವು ಹೊಂದಿರುವ ಹ್ಯಾರಿಸ್, ಚುನಾವಣಾ ಪ್ರಚಾರದಲ್ಲಿ ಇದೇ ವಿಚಾರವನ್ನು ಪ್ರಮುಖವಾಗಿ ಪ್ರತಿಪಾದಿಸಿದ್ದಾರೆ. ಸಂತಾನೋತ್ಪತ್ತಿ ಹಕ್ಕುಗಳನ್ನು ರಕ್ಷಣೆ ಮಾಡುವ ಜತೆಗೆ ಮಹಿಳೆಯರ ಗರ್ಭಪಾತ ಹಕ್ಕುಗಳಿಗೆ ಆದ್ಯತೆ ನೀಡುವುದಾಗಿ ಹೇಳಿಕೊಂಡಿದ್ದಾರೆ. ಗರ್ಭಪಾತ ವಿಚಾರದಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನ ಪಾಲಿಸುವುದಾಗಿ ಟ್ರಂಪ್ ಘೋಷಣೆ ಮಾಡಿದ್ದಾರೆ. ಆದರೆ, ಮಕ್ಕಳನ್ನು ಬಯಸುವ ಪೋಷಕರಿಗೆ ಉಚಿತ ಐವಿಎಫ್ ಚಿಕಿತ್ಸೆ ನೀಡುವ ಭರವಸೆ ನೀಡಿದ್ದಾರೆ.

ಭಿನ್ನ ಆರ್ಥಿಕ ದೃಷ್ಟಿಕೋನ

ದೇಶದ ಆರ್ಥಿಕತೆ ವಿಷಯದಲ್ಲಿ ಟ್ರಂಪ್, ಹ್ಯಾರಿಸ್ ವಿರುದ್ಧ ದಿಕ್ಕಿನಲ್ಲಿ ಯೋಚಿಸಿದ್ದಾರೆ. ಪ್ರಚಾರ ಭಾಷಣಗಳಲ್ಲಿ ಆರ್ಥಿಕತೆ, ಸಂತಾನೋತ್ಪತ್ತಿ ಹಕ್ಕುಗಳು, ಅಂತಾರಾಷ್ಟ್ರೀಯ ಸಂಬಂಧಗಳು, ಭವಿಷ್ಯದ ಅಮೆರಿಕ ಕುರಿತು ಸಾಕಷ್ಟು ಮಾತನಾಡಿದ್ದಾರೆ. ಆದರೆ, ತಮ್ಮ ಉದ್ದೇಶಿತ ಯೋಜನೆ ಹಾಗೂ ಯೋಚನೆಗಳನ್ನು ಹೇಗೆ ಜಾರಿ ಮಾಡುತ್ತೇವೆ ಎಂಬ ಬಗ್ಗೆ ಯಾವುದೇ ನಿರ್ದಿಷ್ಟ ವಿವರಗಳನ್ನು ಇಬ್ಬರು ಪ್ರಕಟಿಸಿಲ್ಲ.

ಬೆಲೆ ಏರಿಕೆ ನಿಯಂತ್ರಣ ಮಾಡುವ, ತೆರಿಗೆ ಕಡಿತ ಪ್ರಸ್ತಾಪ ಮಾಡಿರುವ ಹ್ಯಾರಿಸ್ ನೀತಿಗಳಿಂದ ಮಧ್ಯಮ ವರ್ಗದ 10 ಕೋಟಿ ಜನರಿಗೆ ಲಾಭವಾಗಲಿದೆ ಎಂದು ನಿರೀಕ್ಷಿಸಲಾಗಿದೆ. ಹಣದುಬ್ಬರಕ್ಕೆ ಅಂತ್ಯ ಹಾಡುವ ಭರವಸೆ ನೀಡಿ ರುವ ಡೊನಾಲ್ಡ್ ಟ್ರಂಪ್, ಅಮೆರಿಕ ಜನರಿಗೆ ಎಲ್ಲವೂ ಕೈಗೆಟುಕುವ ದರದಲ್ಲಿ ಅಗತ್ಯ ವಸ್ತು ದೊರೆಯವಂತೆ ಮಾಡುವ ವಾಗ್ದಾನ ಮಾಡಿದ್ದಾರೆ. ಜನರ ಮೇಲೆ ತೆರಿಗೆ ಹೊರೆ ಕಡಿಮೆ ಮಾಡುವ ಆಶ್ವಾಸನೆ ನೀಡಿ ದ್ದಾರೆ. ಕಾರ್ಪೊರೇಟ್ ತೆರಿಗೆ ಶೇ.21 ರಿಂದ ಶೇ. 15ಕ್ಕೆ ಕಡಿತ, ಜನರ ಸಂಪತ್ತಿನ ಮೇಲಿನ ತೆರಿಗೆ ಕಡಿತ, ಸಾಮಾಜಿಕ ಭದ್ರತಾ ಯೋಜನೆಗಳಿಗೆ ತೆರಿಗೆ ವಿನಾಯಿತಿ ನೀಡುವುದಾಗಿ ಹೇಳಿದ್ದಾರೆ.

ಗಡಿ ಭದ್ರತೆ, ವಲಸೆ: ಗಡಿ ಭದ್ರತೆ ಹಾಗೂ ವಲಸೆ ನೀತಿ ವಿಚಾರದಲ್ಲಿ ಹ್ಯಾರಿಸ್ ವಿಭಿನ್ನ ಹೆಜ್ಜೆ ಇರಿಸಿದ್ದಾರೆ. ಕ್ರಾಸ್ ಪಾರ್ಟಿ ಗಡಿ ಭದ್ರತೆ ವಿಧೇಯಕ ಪರ ನಿಲವು ಹೊಂದಿದ್ದಾರೆ. ವಿಧೇಯಕದಲ್ಲಿ ದೇಶದಲ್ಲಿ ರಾಜಕೀಯ ಆಶ್ರಯ ಪಡೆದಿರುವ ಜನರ ಹಕ್ಕುಗಳ ಕುರಿತ ನಿರ್ಣಯ ಹೊಂದಿದೆ.

ವಲಸೆ ನೀತಿ ವಿಚಾರದಲ್ಲಿ ಸಮಗ್ರ ವಿಧೇಯಕ ರೂಪಿಸುವ ಇರಾದೆ ಹೊಂದಿರುವ ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ, ಅಮೆರಿಕಕ್ಕೆ ಪೋಷಕರ ಜತೆ ಬಾಲ್ಯದಲ್ಲೇ ವಲಸೆ ಬಂದ ಮಕ್ಕಳಿಗೆ ಪೌರತ್ವ ನೀಡುವ ನೀತಿ ರೂಪಿಸುವ ಭರವಸೆ ನೀಡಿದ್ದಾರೆ.

ಹಸೀನಾ ವಿರುದ್ಧ ಕೊಲೆ ಪ್ರಕರಣ: ವರದಿ ಸಲ್ಲಿಸುವಂತೆ ಬಾಂಗ್ಲಾ ನ್ಯಾಯಾಲಯ ಆದೇಶ

ಢಾಕಾ: ಮಾಜಿ ಪ್ರಧಾನಿ ಶೇಖ್ ಹಸೀನಾ ಮತ್ತು ಇತರ 23 ಜನರ ವಿರುದ್ಧದ ಕೊಲೆ ಪ್ರಕರಣದ ತನಿಖಾ ವರದಿಯನ್ನು ನವೆಂಬರ್ 28ರೊಳಗೆ ಸಲ್ಲಿಸುವಂತೆ ಬಾಂಗ್ಲಾದೇಶದ ನ್ಯಾಯಾಲಯ ಪೊಲೀಸರಿಗೆ ಆದೇಶಿಸಿದೆ. ವಿವಾದಾತ್ಮಕ ಉದ್ಯೋಗ ಮೀಸಲಾತಿಗೆ ಸಂಬಂಧಿಸಿದಂತೆ ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರದ ವಿರುದ್ಧ ಕಳೆದ ಆಗಸ್ಟ್ ನಲ್ಲಿ ಪ್ರತಿ ಭಟನೆಗಳು ಭುಗಿಲೆದ್ದಿದ್ದವು. ಈ ವೇಳೆ ಢಾಕಾದ ಮೀರ್‌ಪುರದಲ್ಲಿ ವಿದ್ಯಾರ್ಥಿಯೊಬ್ಬ ಮೃತಪಟ್ಟಿದ್ದರು. ಸಹೋದರನ ಸಾವಿನಲ್ಲಿ ಹಸೀನಾ ಹಾಗೂ ಅವಾಮಿ ಲೀಗ್ ಸರ್ಕಾರದ ಸಚಿವರು ನೇರವಾಗಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿ ಮೃತ ವಿದ್ಯಾರ್ಥಿಯ ಸಹೋದರ ಆಗಸ್ಟ್ 15 ರಂದು ಪ್ರಕರಣ ದಾಖಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಢಾಕಾದ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಎಂ.ಡಿ ಜಿಯಾದೂರ್ ರೆಹಮಾನ್, ನವೆಂಬರ್ 28 ರೊಳಗೆ ತನಿಖಾ ವರದಿಯನ್ನು ಸಲ್ಲಿಸುವಂತೆ ಆದೇಶಿಸಿದ್ದಾರೆ. ಈ ಬಗ್ಗೆ ಡೈಲಿ ಸ್ಟಾರ್ ಪತ್ರಿಕೆ ವರದಿ ಮಾಡಿದೆ. ಹಸೀನಾ ಅಲ್ಲದೇ, ಮಾಜಿ ಗೃಹ ಸಚಿವ ಅಸಾದುಝಮಾನ್ ಖಾನ್, ಅವಾಮಿ ಲೀಗ್ ಪ್ರಧಾನ ಕಾರ್ಯದರ್ಶಿ ಒಬೈದುಲ್ ಕ್ವಾಡರ್, ಮಾಜಿ ಸಚಿವ ಅನಿಸುಲ್ ಹಕ್ ಮತ್ತು ಮಾಜಿ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಚೌಧುರಿ ಅಬ್ದುಲ್ಲಾ ಅಲ್- ಮಾಮುನ್ ಅವರನ್ನು ಆರೋಪಿಗಳೆಂದು ಹೆಸರಿಸಲಾಗಿದೆ. ಹಸೀನಾ ವಿರುದ್ಧ ಒಟ್ಟು 225 ಪ್ರಕರಣಗಳು ದಾಖಲಾಗಿವೆ. ಅವುಗಳಲ್ಲಿ 194-ಕೊಲೆ ಪ್ರಕರಣ, 16- ನರಮೇಧ ಪ್ರಕರಣ, 3-ಅಪಹರಣ, 11-ಕೊಲೆ ಯತ್ನ ಪ್ರಕರಣಗಳು ಸೇರಿವೆ ಎಂದು ವರದಿಯಾಗಿದೆ. ವಿವಾದಾತ್ಮಕ ಉದ್ಯೋಗ ಮೀಸಲಾತಿಗೆ ಸಂಬಂಧಿಸಿದಂತೆ ಹಸೀನಾ ಸರ್ಕಾರದ ವಿರುದ್ಧ ಪ್ರತಿಭಟನೆಗಳು ಭುಗಿಲೆದ್ದಿದ್ದವು. ಆಗಸ್ಟ್ 5 ರಂದು ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ್ದ ಹಸೀನಾ ಭಾರತಕ್ಕೆ ಪಲಾಯನ ಮಾಡಿದ್ದರು.

ಡಿಜಿಟಲ್ ವಂಚನೆ ಪ್ರಕರಣ ಪ್ರಸ್ತಾಪಿಸಿ ಜಾಗೃತಿ ಮೂಡಿಸಿದ ಪ್ರಧಾನಿ

ನವದೆಹಲಿ: ದೇಶದಲ್ಲಿ ಇತ್ತೀಚೆಗೆ ಸೈಬರ್ ಕ್ರೈಂ ವಂಚನೆ ಹಾಗೂ ಡಿಜಿಟಲ್ ಅರೆಸ್ಟ್ ಸೇರಿದಂತೆ ವಂಚನೆ ಮಾಡುವವರಿಂದ ಬರುವ ಕರೆಗಳಿಂದ ಆದ ಷ್ಟು ದೂರವಿರಿ ಎಂದು ಪ್ರಧಾನಿ ನರೇಂದ್ರಮೋದಿ ಅವರು ಕರ್ನಾಟಕದ ಪ್ರಕರಣವೊಂದನ್ನು ಉಲ್ಲೇಖಿಸಿ ದೇಶದ ಜನತೆಗೆ ಕರೆ ಕೊಟ್ಟಿದ್ದಾರೆ. ಕರ್ನಾಟಕದ ವಿಜಯಪುರ ಜಿಲ್ಲೆಯ ಸಂತೋಷ ಎಂಬುವರಿಗೆ ಮುಂಬೈನಿಂದ ಕರೆ ಮಾಡಿ ನಾವು ಮುಂಬೈ ಕ್ರೈಂ ಬ್ರಾಂಚ್ ಪೊಲೀಸರು ಎಂದು ಎದುರಿಸಿ ಬ್ಲಾಕ್‌ಮೇಲ್ ಮಾಡಿದ್ದರು.

ಈ ಎಲ್ಲಾ ದೃಶ್ಯಾವಳಿಗಳನ್ನು ವಂಚನೆಗೊಳಗಾದ ಸಂತೋಷ ಮೊಬೈಲ್‌ನಲ್ಲಿ ತಮಗಾದ ಅನ್ಯಾಯನವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದರು. ಈ ಪ್ರಕರಣವನ್ನು ಉಲ್ಲೇಖಿಸಿದ ಮೋದಿಯವರು ಸೈಬರ್ ಕ್ರೈಂ ವಂಚನೆ ಬಗ್ಗೆ ಪ್ರತಿಯೊಬ್ಬರು ಜಾಗೃತ ರಾಗಬೇಕೆಂದು ಮನವಿ ಮಾಡಿದರು.

ಮೂರನೇ ಬಾರಿಗೆ ಕೇಂದ್ರದಲ್ಲಿ ಪ್ರಧಾನಿಯಾದ ನಂತರ ತಮ ಬಹು ನೆಚ್ಚಿನ ಮನ್ ಕೀ ಬಾತ್ ರೇಡಿಯೋ ಕಾರ್ಯಕ್ರಮದ 115 ನೇ ಸಂಚಿಕೆಯಲ್ಲಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಮೋದಿ ಅವರು ಹಲವಾರು ವಿಷಯಗಳ ಬಗ್ಗೆ ಬೆಳಕು ಚೆಲ್ಲಿದ್ದಾರೆ. ಸೈಬರ್ ಕ್ರೈಂ ವಂಚನೆ, ಡಿಜಿಟಲ್ ಅರೆಸ್ಟ್, ಪೊಲೀಸ್ ತನಿಖೆ ನೆಪದಲ್ಲಿ ವಿಡಿಯೋ ಕಾಲ್, ಪೊಲೀಸ್, ಸಿಬಿಐ, ಇಡಿ ಹೀಗೆ ಇನ್ನಿತರ ನೆಪಗಳನ್ನಿಟ್ಟುಕೊಂಡು ಕಾಲ್ ಮಾಡುತ್ತಾರೆ. ಕರ್ನಾಟಕದ ಪ್ರಕರಣ ಉಲ್ಲೇಖಿಸಿ, ನಿಮ ಬಗ್ಗೆ ಮಾಹಿತಿ ಕಲೆಹಾಕುತ್ತಾರೆ. ಭಯದ ವಾತಾವರಣ ನಿರ್ಮಾಣ ಮಾಡಿ, ನಿಮನ್ನು ಹೆದರಿಸುತ್ತಾರೆ. ಅಂತಹ ಸಮಯದಲ್ಲಿ ವಿಡಿಯೋ ರೆಕಾರ್ಡ್ ಮಾಡಿಟ್ಟುಕೊಳ್ಳಿ. ಡಿಜಿಟಲ್ ಅರೆಸ್ಟ್ ವಂಚನೆಗೆ ಎಲ್ಲಾ ವಯಸ್ಸಿನ ಜನರಿದ್ದಾರೆ. ಈ ಮೂಲಕ ತಮ ದುಡಿಮೆಯ ಹಣವನ್ನು ಕಳೆದುಕೊಳ್ಳುತ್ತಾರೆ. ಇಂತಹ ಕರೆ ಬಂದರೆ ಆತಂಕಗೊಳ್ಳಬೇಡಿ. ನಿಮ ಯಾವುದೇ ಮಾಹಿತಿಯನ್ನು ನೀಡಬೇಡಿ. ಸರ್ಕಾರಿ ತನಿಖಾ ಸಂಸ್ಥೆಗಳು ಹೀಗೆ ವಿಡಿಯೋ ಕರೆ ಮಾಡಿ ಬೆದರಿಕೆ ಹಾಕುವುದಿಲ್ಲ. ಇಂತಹ ಘಟನೆ ನಡೆದರೆ ರಾಷ್ಟ್ರೀಯ ಸೈಬರ್ ಕ್ರೈಂಗೆ ದೂರು ನೀಡಿ ಎಂದರು.

ಡಿಜಿಟಲ್ ಅರೆಸ್ಟ್ ಎನ್ನುವುದು ಕಾನೂನಿನ ವ್ಯವಸ್ಥೆಯಲ್ಲಿಯೇ ಇಲ್ಲ. ರಾಜ್ಯ ಸರ್ಕಾರದ ಜೊತೆಗೆ ಕೇಂದ್ರದ ಸಂಸ್ಥೆಗಳ ತನಿಖೆ ಮಾಡುತ್ತಿವೆ. ಇಂತಹ ಕಾಲ್ ಮಾಡುವುವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಹಾಗೂ ಅಂತವರ ಐಡಿ ಮತ್ತು ಸಿಮ್ ಬಂದ್ ಮಾಡಲಾಗುತ್ತಿದೆ ಎಂದು ಭರವಸೆ ನೀಡಿದರು. ಆನ್‌ಲೈನ್‌ನಲ್ಲಿ ನಡೆಯುತ್ತಿರುವ ವಂಚನೆ, ವಂಚಕರ ವಂಚನೆ ವಿಧಾನಗಳ ಬಗ್ಗೆ ಪ್ರಧಾನಿಗಳು ಸಾಕಷ್ಟು ಮಾಹಿತಿ ನೀಡಿ, ಹುಷಾರಾಗಿರುವಂತೆ ಜನತೆಗೆ ಮೋದಿ ಕರೆ ನೀಡಿದರು.

ಉತ್ತರ ಗಾಜಾದ ಮೇಲೆ ಇಸ್ರೇಲ್ ದಾಳಿ, 22 ಜನರು ಸಾವು

ಇರಾನ್: ಉತ್ತರ ಗಾಜಾದ ಮೇಲೆ ಇಸ್ರೇಲಿ ನಡೆಸಿದ ದಾಳಿಯಲ್ಲಿ ಕನಿಷ್ಠ 22 ಜನರು ಸಾವನ್ನಪ್ಪಿದ್ದಾರೆ ಎಂದು ಪ್ಯಾಲೇಸ್ಟಿನಿಯನ್ ವೈದ್ಯಕೀಯ ಅಧಿ ಕಾರಿಗಳು ತಿಳಿಸಿದ್ದಾರೆ. ಗಾಜಾ ಆರೋಗ್ಯ ಸಚಿ ವಾಲಯದ ತುರ್ತು ಸೇವೆಯು ಉತ್ತರದ ಪಟ್ಟಣವಾದ ಬೀಟ್ ಲಾಹಿಯಾದಲ್ಲಿ ಹಲವಾರು ಮನೆ ಗಳು ಮತ್ತು ಕಟ್ಟಡಗಳ ಮೇಲೆ ತಡರಾತ್ರಿ ನಡೆದ ಮುಷ್ಕರದಲ್ಲಿ 11 ಮಹಿಳೆಯರು ಮತ್ತು ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ.

ಇನ್ನೂ 15 ಮಂದಿ ಗಾಯಗೊಂಡಿದ್ದು, ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹೇಳಿದೆ. ಕಳೆದ ಮೂರು ವಾರಗಳಿಂದ ಉತ್ತರ ಗಾಜಾದಲ್ಲಿ ಹಮಾಸ್ ಉಗ್ರಗಾಮಿಗಳು ಮತ್ತೆ ಗುಂಪುಗೂಡಿದ್ದಾರೆ ಎಂದು ಹೇಳಿದ ನಂತರ, ಇಸ್ರೇಲ್ ಭಾರೀ ವಾಯು ಮತ್ತು ನೆಲದ ಮೇಲೆ ದಾಳಿ ನಡೆಸುತ್ತಿದೆ. ವರ್ಷಪೂರ್ತಿ ನಡೆಯುತ್ತಿರುವ ಯುದ್ಧದಲ್ಲಿ ಇತ್ತೀಚಿನ ಸ್ಥಳಾಂತರದ ಅಲೆಯಲ್ಲಿ ನೂರಾರು ಜನರು ಕೊಲ್ಲಲ್ಪಟ್ಟರು ಮತ್ತು ಹತ್ತಾರು ಪ್ಯಾಲೆಸ್ಟೀನಿಯಾದವರು ಗಾಜಾ ನಗರಕ್ಕೆ ಪಲಾಯನ ಮಾಡಿದ್ದಾರೆ. ಇಸ್ರೇಲ್ ಲೆಬನಾನ್‌ನಲ್ಲಿ ಹಿಜ್ಬುಲ್ಲಾ ಉಗ್ರಗಾಮಿ ಗುಂಪಿನೊಂದಿಗೆ ಯುದ್ಧ ಮಾಡುತ್ತಿರುವಾಗಲೂ ಗಾಜಾದಾದ್ಯಂತ ದೈನಂದಿನ ದಾಳಿಗಳನ್ನು ನಡೆಸುತ್ತಿದೆ. ಶನಿವಾರ, ಇಸ್ರೇಲಿ ಯುದ್ಧ ವಿಮಾನಗಳು ಇರಾನ್ ಮೇಲೆ ದಾಳಿ ಮಾಡಿತು, ಇದು ಈ ತಿಂಗಳ ಆರಂಭದಲ್ಲಿ ಇರಾನ್ ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿಗೆ ಪ್ರತಿಕ್ರಿಯೆಯಾಗಿ ಹಮಾಸ್ ಮತ್ತು ಹೆಜ್ಬುಲ್ಲಾ ಎರಡನ್ನೂ ಬೆಂಬಲಿಸುತ್ತದೆ. ಕ್ಯಾಸ್ಕೇಡಿಂಗ್ ಘರ್ಷಣೆಗಳು ಇರಾನ್, ಅದರ ಉಗ್ರಗಾಮಿ ಪ್ರಾಕ್ಸಿಗಳ ವಿರುದ್ಧ ಇಸ್ರೇಲ್ ಮತ್ತು ಯುನೈಟೆಡ್ ಸ್ಟೇಟ್ಸ್ ಅನ್ನು ಒಟ್ಟುಗೂಡಿಸುವ ಪ್ರಾದೇಶಿಕ ಯುದ್ಧದ ಭಯವನ್ನು ಹುಟ್ಟುಹಾಕಿದೆ, ಇದರಲ್ಲಿ ಯೆಮೆನ್‌ನಲ್ಲಿನ ಹೌತಿ ಬಂಡುಕೋರರು ಮತ್ತು ಸಿರಿಯಾ ಮತ್ತು ಇರಾಕ್‌ನಲ್ಲಿ ಸಶಸ ಗುಂಪುಗಳು ಸೇರಿವೆ.

ಗಾಜಾದ ಮೇಲಿನ ತನ್ನ ದಾಳಿಗಳು ಉಗ್ರಗಾಮಿಗಳನ್ನು ಮಾತ್ರ ಗುರಿಯಾಗಿಸಿಕೊಂಡಿದೆ ಎಂದು ಇಸ್ರೇಲ್ ಹೇಳುತ್ತದೆ ಮತ್ತು ಉಗ್ರ ಗಾಮಿಗಳು ಜನನಿಬಿಡ ಪ್ರದೇಶಗಳಲ್ಲಿ ಹೋರಾಡು ವುದರಿಂದ ನಾಗರಿಕ ಸಾವು ನೋವುಗಳಿಗೆ ಹಮಾಸ್ ಅನ್ನು ದೂಷಿಸುತ್ತದೆ. ಸಾಮಾನ್ಯವಾಗಿ ಮಹಿಳೆಯರು ಮತ್ತು ಮಕ್ಕಳನ್ನು ಕೊಲ್ಲುವ ವೈಯಕ್ತಿಕ ಸ್ಪೆಕ್ಟ್ ಗಳ ಬಗ್ಗೆ ಮಿಲಿಟರಿ ವಿರಳವಾಗಿ ಕಾಮೆಂಟ್ ಮಾಡುತ್ತದೆ.

2023ರ ಅಕ್ಟೋಬರ್ 7ರಂದು ಹಮಾಸ್ ನೇತೃತ್ವದ ಉಗ್ರಗಾಮಿಗಳು ಇಸ್ರೇಲ್‌ನ ಗಡಿ ಗೋಡೆಯಲ್ಲಿ ರಂಧ್ರಗಳನ್ನು ಸೋಟಿಸಿದಾಗ, ದಕ್ಷಿಣ ಇಸ್ರೇಲ್ ಗೆ ಹಠಾತ್ತನೆ ದಾಳಿ ಮಾಡಿದಾಗ ಯುದ್ಧ ಪ್ರಾರಂಭವಾಯಿತು. ಅವರು ಸುಮಾರು 1,200 ಜನರನ್ನು ಕೊಂದರು, ಹೆಚ್ಚಾಗಿ ನಾಗರಿಕರು ಮತ್ತು ಸುಮಾರು 250 ಜನರನ್ನು ಅಪಹರಿಸಿದರು. ಸುಮಾರು 100 ಒತ್ತೆಯಾಳುಗಳು ಗಾಜಾದೊಳಗೆ ಇನ್ನೂ ಇದ್ದಾರೆ. ಅವರಲ್ಲಿ ಮೂರನೇ ಒಂದು ಭಾಗದಷ್ಟು ಜನರು ಸತ್ತಿದ್ದಾರೆ ಎಂದು ಅಂದಾಜಿಸಲಾಗಿದೆ. ಸ್ಥಳೀಯ ಆರೋಗ್ಯ ಸಚಿವಾಲಯದ ಪ್ರಕಾರ ಇಸ್ರೇಲ್‌ನ ಪ್ರತೀಕಾರದ ಆಕ್ರಮಣವು 42,000 ಕ್ಕೂ ಹೆಚ್ಚು ಪ್ಯಾಲೆಸ್ಟೀನಿಯನ್ನರನ್ನು ಕೊಂದಿದೆ. ಇದು ತನ್ನ ಎಣಿಕೆಯಲ್ಲಿ ನಾಗರಿಕರು ಮತ್ತು ಹೋರಾಟಗಾರರ ನಡುವೆ ವ್ಯತ್ಯಾಸವನ್ನು ಹೊಂದಿಲ್ಲ ಆದರೆ ಕೊಲ್ಲಲ್ಪಟ್ಟವರಲ್ಲಿ ಅರ್ಧಕ್ಕಿಂತ ಹೆಚ್ಚು ಮಹಿಳೆಯರು ಮತ್ತು ಮಕ್ಕಳು ಎಂದು ಹೇಳುತ್ತದೆ. ಆಕ್ರಮಣವು ಬಡ ಕರಾವಳಿ ಪ್ರದೇಶವನ್ನು ಧ್ವಂಸಗೊಳಿಸಿದೆ ಮತ್ತು ಅದರ ಜನಸಂಖ್ಯೆಯ ಸುಮಾರು 90 ಪ್ರತಿಶತದಷ್ಟು ಸ್ಥಳಾಂತರಗೊಂಡಿದೆ, ಆಗಾಗ್ಗೆ ಅನೇಕ ಬಾರಿ. ಲಕ್ಷಾಂತರ ಜನರು ಕರಾವಳಿಯಾದ್ಯಂತ ಕೊಳಕು ಟೆಂಟ್ ಶಿಬಿರಗಳಲ್ಲಿ ಸೇರಿದ್ದಾರೆ ಮತ್ತು ಹಸಿವು ಅತಿರೇಕವಾಗಿದೆ ಎಂದು ಸಹಾಯ ಗುಂಪುಗಳು ಹೇಳುತ್ತವೆ.

ಭಾರತ ಮನವಿ

ಪಶ್ಚಿಮ ಏಷ್ಯಾದಲ್ಲಿ ವಿಕಸನಗೊಳ್ಳುತ್ತಿರುವ ಉಲ್ಬಣ, ಅಶಾಂತಿ ಮತ್ತು ಅಸ್ಥಿರತೆಗಾಗಿ ನಾವು ತೀವ್ರ ಕಳವಳ ಹೊಂದಿದ್ದೇವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಸಂಯಮವನ್ನು ಉಳಿದಿಕೊಂಡು ಮಾತುಕತೆ ಮತ್ತು ರಾಜ ತಾಂತ್ರಿಕತೆಯ ಹಾದಿಗೆ ಮರಳಲು ಎಲ್ಲಾ ದೇಶಗಳಿಗೂ ನಾವು ನಮ್ಮ ಕರೆಯನ್ನು ಪುನರುಚ್ಚರಿಸುತ್ತೇವೆ. ನಡೆಯುತ್ತಿರುವ ಹಗೆತನದಿಂದ ಅಮಾಯಕ ಜನರು ಬಳಲುತ್ತಿದ್ದಾರೆ ಎಂದಿದೆ. ಈ ಪ್ರದೇಶದಲ್ಲಿನ ನಮ್ಮ ಮಿಷನ್‌ಗಳು ಭಾರತೀಯ ಸಮುದಾಯದೊಂದಿಗೆ ಸಂಪರ್ಕದಲ್ಲಿವೆ ಎಂದು ಹೇಳಿಕೆ

ನಿವೇದಿತಾ ಶಿವರಾಜ್‌ಕುಮಾರ್ ನಿರ್ಮಾಣದ ಫ್ಲೈರ್ ಫ್ಲೈ ಚಿತ್ರಕ್ಕೆ ಕುಂಬಳಕಾಯಿ ಪ್ರಾಪ್ತಿ

ಶ್ರೀವಣ್ಣನ ಪುತ್ರಿ ನಿವೇದಿತಾ ನಿರ್ಮಾಣದ ಮೊದಲ ಸಿನಿಮಾ 'ಫ್ಲೈರ್ ಫ್ಲೈ' ಕುಂಬಳಕಾಯಿ ಪ್ರಾಪ್ತಿಯಾಗಿದೆ. ಕುಂಬಳಕಾಯಿ ಇವೆಂಟ್‌ನಲ್ಲಿ ಶಿವರಾಜ್ ಕುಮಾರ್, ಗೀತಾ ಶಿವರಾಜ್ ಕುಮಾರ್, ನಿವೇದಿತಾ ಶಿವರಾಜ್ ಕುಮಾರ್, ನಿರ್ದೇಶಕ ವಂಶಿ, ಸಂಗೀತ ನಿರ್ದೇಶಕ ಚರಣ್ ರಾಜ್, ನಾಯಕಿ ರಚನಾ ಸೇರಿದಂತೆ ಇಡೀ ತಂಡ ಭಾಗಿಯಾಗಿತ್ತು. ಈ ಸಿನಿಮಾದಲ್ಲಿ ಯುವ ಪ್ರತಿಭೆ ವಂಶಿ ನಾಯಕನಾಗಿ ನಟಿಸುತ್ತಿದ್ದಾರೆ. ಇದರೊಂದಿಗೆ ನಿರ್ದೇಶಕನಾಗಿಯೂ ಕೆಲಸ ಮಾಡಿದ್ದಾರೆ. ಫ್ಲೈರ್ ಫ್ಲೈ ಸಿನಿಮಾದಲ್ಲಿ ವಂಶಿ ನಟ ಕಮ್ ನಿರ್ದೇಶಕನಾಗಿ ಕಾಣಿಸಿಕೊಂಡಿದ್ದಾರೆ. ಈ ಸಿನಿಮಾದಲ್ಲಿ ವಂಶಿ ಜೊತೆ ಸುಧಾರಾಣಿ, ಅಚ್ಯುತ್ ಕುಮಾರ್, ಶೀತಲ್ ಶೆಟ್ಟಿ ಸೇರಿದಂತೆ ಹಲವು ಹಿರಿಯ ನಟರು ಕೂಡ ಅಭಿನಯಿಸಿದ್ದಾರೆ. ಇನ್ನು ವಂಶಿಗೆ ನಾಯಕಿಯಾಗಿ ರಚನಾ ಇಂದರ್ ಜೊತೆಯಾಗಿದ್ದಾರೆ. 'ಫ್ಲೈರ್ ಫ್ಲೈ' ಸಿನಿಮಾಗೆ ಅಭಿಲಾಷ್ ಕಳತ್ತಿ ಕ್ಯಾಮರಾ ವರ್ಕ್ ಇದ್ದರೆ, ಚರಣ್ ರಾಜ್ ಈ ಸಿನಿಮಾಗೆ ಸಂಗೀತ ಸಂಯೋಜನೆ ಮಾಡಿದ್ದಾರೆ. ರಘು ನಿಡುವಳ್ಳಿ ಅವರ ಸಂಭಾಷಣೆಯಿದೆ. ಈ ಸಿನಿಮಾವನ್ನು ಶ್ರೀ ಮುತ್ತು ಸಿನಿ ಸರ್ವಿಸ್ ಸಂಸ್ಥೆ ನಿರ್ಮಾಣ ಮಾಡುತ್ತಿದೆ.

ಪುಟ್ಟಕ್ಕನ ಮಕ್ಕಳು ಸ್ನೇಹಾ ಪಾತ್ರ ಅಂತ್ಯ - ಫ್ಯಾನ್ಸ್‌ಗೆ ಸಂದೇಶ ನೀಡಿದ ಸಂಜನಾ

ಕಿರುತೆರೆಯ ಜನಪ್ರಿಯ 'ಪುಟ್ಟಕ್ಕನ ಮಕ್ಕಳು' ಧಾರಾವಾಹಿ ಸ್ನೇಹಾ ಪಾತ್ರ ಅಂತ್ಯವಾಗಿದೆ. ಸ್ನೇಹಾ ಪಾತ್ರದಲ್ಲಿ ಸಂಜನಾ ಬುರ್ಲಿ ಸೀರಿಯಲ್‌ಗೆ ಅಧಿಕೃತವಾಗಿ ಗುಡ್ ಬೈ ಹೇಳಿದ್ದಾರೆ. ಸ್ನೇಹಾ ಪಾತ್ರದ ಸಾವಿನ ದೃಶ್ಯ ನೋಡಿ ಪ್ರೇಕ್ಷಕರು ಕಣ್ಣೀರಿಟ್ಟಿದ್ದಾರೆ. ತಮ್ಮ ಪಾತ್ರ ಅಂತ್ಯವಾದ ಬೆನ್ನಲ್ಲೇ ಅಭಿಮಾನಿಗಳಿಗೆ ಸೋಶಿಯಲ್ ಮೀಡಿಯಾದಲ್ಲಿ ಸಂದೇಶವೊಂದನ್ನು ಹಂಚಿಕೊಂಡಿದ್ದಾರೆ. ನಮಸ್ತೆ ಪ್ರಿಯರೇ, ಎಲ್ಲಾ ಫ್ಯಾನ್ಸ್‌ಗಳು ನಾನು ಒಂದು ಸುದ್ದಿಯನ್ನು ಹಂಚಿಕೊಳ್ಳಲು ಇಷ್ಟಪಡುತ್ತೇನೆ. ಪ್ರತಿಯೊಂದು ದೊಡ್ಡ ವಿಷಯವೂ ಕೊನೆಗೊಳ್ಳುತ್ತದೆ. ಅದರಂತೆ ಈ ಮಹತ್ವದ ಪಾತ್ರದೊಂದಿಗೆ ನನ್ನ ಪ್ರಯಾಣವೂ ಕೊನೆಗೊಂಡಿದೆ. 'ಪುಟ್ಟಕ್ಕನ ಮಕ್ಕಳು' ಸೀರಿಯಲ್‌ನ ಸ್ನೇಹಾ ಪಾತ್ರವು ಕೊನೆಯಾಗುತ್ತಿದೆ. ಕಳೆದ 3 ವರ್ಷಗಳಿಂದ ಸ್ನೇಹಾ ಪಾತ್ರವನ್ನು ನಿರ್ವಹಿಸುವುದು ನನ್ನ ನಟನಾ ವೃತ್ತಿಜೀವನದ ಅವಿಭಾಜ್ಯ ಅಂಗವಾಗಿತ್ತು. ಈ ಸಮಯ ಎಷ್ಟು ವೇಗವಾಗಿ ಮುಗಿಯಿತು ಅನ್ನೋದೇ ಗೊತ್ತಾಗಲಿಲ್ಲ. ಈ ಸೀರಿಯಲ್‌ನಲ್ಲಿ ನಾನು ಪ್ರಮುಖ ಪಾತ್ರವನ್ನು ನಿರ್ವಹಿಸಿದ್ದೆ. ಅದಕ್ಕಾಗಿ ನಾನು ಯಾವಾಗಲೂ ಕೃತಜ್ಞರಾಗಿರುತ್ತೇನೆ. ನನಗೆ ಈ ಉತ್ತಮ ಪಾತ್ರವನ್ನು ನೀಡಿದ್ದಕ್ಕಾಗಿ ಮತ್ತು ನನ್ನನ್ನು ಸ್ನೇಹಾ ಆಗಿ ಆಯ್ಕೆ ಮಾಡಿದ್ದಕ್ಕಾಗಿ ವಾಹಿನಿ ಮತ್ತು ಇಡೀ ತಂಡಕ್ಕೆ ಧನ್ಯವಾದಗಳನ್ನು ಹೇಳುತ್ತೇನೆ. ಆದರೆ ಈಗ ನಾನು ಮುಂದುವರಿಯುವ ಸಮಯ ಬಂದಿದೆ. ಕೆಲವು ಅನಿವಾರ್ಯ ಸಂದರ್ಭಗಳು ಮತ್ತು ನನ್ನ ವೈಯಕ್ತಿಕ ಕಾರಣಗಳಿಂದಾಗಿ ನಾನು ಭಾರವಾದ ಹೃದಯದಿಂದ ಈ ಸೀರಿಯಲ್ ಅನ್ನು ತೊರೆಯುವ ಸ್ಥಿತಿ ನಿರ್ಮಾಣವಾಯಿತು. ನನ್ನ ಜೀವನದಲ್ಲಿ ಈ ಸಮಯದಲ್ಲಿ ಸಾಧಿಸಲು ನನಗೆ ಇತರ ಸವಾಲುಗಳಿವೆ. ಈ ಪ್ರಾಜೆಕ್ಟನ್ನಲ್ಲಿನ ಈ ಪಾತ್ರಕ್ಕಾಗಿ ನಾನು ನಟಿನಾಗಿ ಪಡೆದ ಅಪಾರ ಪ್ರೀತಿ ಮತ್ತು ಮನ್ನಣೆಯು ನನ್ನ ದೊಡ್ಡ ಪ್ರಶಸ್ತಿ. ಅದು ನನ್ನೊಂದಿಗೆ ಶಾಶ್ವತವಾಗಿ ಉಳಿಯುತ್ತದೆ. ನಿಮ್ಮಲ್ಲಿ ಹೆಚ್ಚಿನವರು ಪಾತ್ರವು ಸಾಯುವುದನ್ನು ನೋಡಿ ದುಃಖಿತರಾಗಿದ್ದೀರಿ ಎಂದು ನನಗೆ ತಿಳಿದಿದೆ. ಆದರೆ, ನಾಯಕಿಯಾಗಿ ನಾನು ನಟಿಸಿದ್ದ ಪಾತ್ರವನ್ನು ಯಾರು ಬದಲಿಸಲು ಸಾಧ್ಯವಿಲ್ಲ ಎಂದು ಭಾವಿಸುತ್ತೇನೆ. ಅದನ್ನು ನಾವು ಪಾಸಿಟಿವ್ ಆಗಿ ತೆಗೆದುಕೊಳ್ಳೋಣ ಎಂದಿದ್ದಾರೆ ಸಂಜನಾ. ಸ್ವಲ್ಪ ಸಮಯದ ನಂತರ ವಿಭಿನ್ನ ಪಾತ್ರಗಳಲ್ಲಿ ನನ್ನ ಅಭಿಮಾನಿಗಳನ್ನು ಭೇಟಿಯಾಗಲು ಆಶಿಸುತ್ತಿದ್ದೇನೆ, ಆದರೆ, ಸದ್ಯದ ಮಟ್ಟಿಗೆ ನನ್ನ ಪಾತ್ರ ಅಂತ್ಯವಾಗಿದೆ. ಕಳೆದ 3 ವರ್ಷಗಳಲ್ಲಿ ಇಡೀ ಕರ್ನಾಟಕ ನನ್ನ ಮೇಲೆ ನೀಡಿದ ಪ್ರೀತಿ ಮತ್ತು ಬೆಂಬಲಕ್ಕೆ ಧನ್ಯವಾದಗಳು. ನನ್ನ ವೈಯಕ್ತಿಕ ಮತ್ತು ವೃತ್ತಿಪರ ಪ್ರಗತಿಗೆ ಸಂಬಂಧಿಸಿದಂತೆ ಹೆಚ್ಚಿನ ಅಪ್‌ಡೇಟ್‌ಗಳಿಗಾಗಿ ನನ್ನ ಸೋಶಿಯಲ್ ಮೀಡಿಯಾ ಫ್ಲಾಟ್‌ಫಾರ್ಮ್ ಅನ್ನು ನೋಡ್ತಾ ಇರಿ. ಈಗ ಪಾಸಿಟಿವ್ ನೋಟ್‌ನೊಂದಿಗೆ ಮುಂದುವರಿಯೋಣ. ಏನಾಗಲಿ ಮುಂದೆ ಸಾಗು ನೀ.. ಮತ್ತೊಮ್ಮೆ ತೆರೆ ಮೇಲೆ ಭೇಟಿ ಆಗೋಣ ಬೇರೆ ವಿಭಿನ್ನ ಪಾತ್ರ ಜೊತೆಗೆ, ಶೀಘ್ರದಲ್ಲಿ ನನ್ನ ಅಭಿಮಾನಿಗಳೇ ನನ್ನ ಸ್ಫೂರ್ತಿ, ಶಕ್ತಿ. ಚಿಯರ್ಸ್ ಸಂಜನಾ ಬುರ್ಲಿ ಎಂದು ಅವರು ಬರೆದುಕೊಂಡಿದ್ದಾರೆ.

ಸ್ವೀಟಿ ಫ್ಯಾನ್ಸ್‌ಗೆ ಬಿಗ್ ಅಪ್‌ಡೇಟ್

2 ಸಿನಿಮಾಗಳ ಶೂಟಿಂಗ್ ಮುಗಿಸಿದ ನಟಿ

ಕರಾವಳಿ ಬೆಡಗಿ ಅನುಷ್ಕಾ ಶೆಟ್ಟಿ ಅವರು ತೆಲುಗು ಮತ್ತು ಮಲಯಾಳಂ ಪ್ರಾಜೆಕ್ಟ್‌ಗಳಲ್ಲಿ ತೊಡಗಿಸಿಕೊಂಡಿದ್ದಾರೆ. 'ಮಿಸ್ ಶೆಟ್ಟಿ, ಮಿಸ್ಟರ್ ಪೋಲಿಶೆಟ್ಟಿ' ಚಿತ್ರದ ನಂತರ ಒಪ್ಪಿಕೊಂಡಿದ್ದ 2 ಬಿಗ್ ಪ್ರಾಜೆಕ್ಟ್‌ಗಳ ಶೂಟಿಂಗ್ ಅನ್ನು ನಟಿ ಮುಗಿಸಿಕೊಟ್ಟಿದ್ದಾರೆ. ಬೆಳ್ಳಿಪರದೆಯಲ್ಲಿ ಅನುಷ್ಕಾ ಸಿನಿಮಾ ನೋಡಲು ಕಾಯುತ್ತಿರುವ ಫ್ಯಾನ್ಸ್‌ಗೆ ಈಗ ಅವರ ಮುಂದಿನ ಸಿನಿಮಾಗಳ ಅಪ್‌ಡೇಟ್ ಸಿಕ್ಕಿದೆ. ಅನುಷ್ಕಾ ಶೆಟ್ಟಿ ಕ್ಯಾಮೆರಾ ಮುಂದೆ ಎಲ್ಲೂ ಕಾಣಿಸಿಕೊಳ್ಳುತ್ತಿಲ್ಲ. ಬದಲಾಗಿ ಕೆಲಸದ ಮೂಲಕ ಅವರು ಉತ್ತರ ಕೊಡೋಕೆ ರೆಡಿಯಾಗಿದ್ದಾರೆ. ತೆಲುಗಿನ 'ಘಾಟಿ' ಹಾರರ್ ಮತ್ತು ಮಲಯಾಳಂನಲ್ಲಿ ಜಯಸೂರ್ಯ ಜೊತೆ ಅನುಷ್ಕಾ ನಟಿಸಿದ್ದಾರೆ. ಈ 2 ಪ್ರಾಜೆಕ್ಟ್‌ಗಳ ಶೂಟಿಂಗ್ ಮುಗಿದಿದೆ. ಅದರಲ್ಲೂ ಮಲಯಾಳಂ ಸಿನಿಮಾದಲ್ಲಿ ಅವರು ನೀಲಿ ಎಂಬ ಮಾಟಗಾತಿಯ ಪಾತ್ರಕ್ಕೆ ಅನಷ್ಕಾ ಜೀವತುಂಬಿದ್ದಾರೆ. ಈ ಚಿತ್ರ 2 ಭಾಗಗಳಲ್ಲಿ ಮೂಡಿ ಬರಲಿದೆ. ಅನುಷ್ಕಾ ಭಾಗದ ಚಿತ್ರೀಕರಣ ಕಂಪ್ಲೀಟ್ ಆಗಿದೆ. ಈ ಚಿತ್ರಕ್ಕೆ ರೊಜಿನ್ ಥಾಮಸ್ ಆ್ಯಕ್ಷನ್ ಕಟ್ ಹೇಳಿದ್ದಾರೆ.

ಅಂದಹಾಗೆ, ಮಲಯಾಳಂ ಸಿನಿಮಾ, ಕಾಂಚೆ, ಘಾಟಿ, ಗೌತಮಿಪುತ್ರ ಶತಕರ್ಣಿ, ಕ್ರಿಷ್ ಜಗರ್ಲಮುಡಿ ನಿರ್ದೇಶನ ಮಹಿಳಾ ಪ್ರಧಾನ ಸಿನಿಮಾ ಸೇರಿದಂತೆ ಹಲವು ಚಿತ್ರಗಳು ಅನುಷ್ಕಾ ಕೈಯಲ್ಲಿವೆ. ಮುಂದಿನ ವರ್ಷ ಒಂದೊಂದೇ ಸಿನಿಮಾಗಳು ರಿಲೀಸ್ ಆಗಲಿವೆ.

ಆದಷ್ಟು ಬೇಗ ದರ್ಶನ್ ಬಿಡುಗಡೆಯಾಗಲಿ

ಹಾಸನಾಂಬೆ ಸನ್ನಿಧಿಯಲ್ಲಿ ತರುಣ್ ಸುಧೀರ್ ಮಾತು

ಸ್ಯಾಂಡಲ್‌ವುಡ್ ನಟ ಕಮ್ ನಿರ್ದೇಶಕ ತರುಣ್ ಸುಧೀರ್ ಅವರು ಹಾಸನಾಂಬೆ ದೇವಿ ದರ್ಶನ ಪಡೆದಿದ್ದಾರೆ. ಪತ್ನಿ ಜೊತೆ ಹಾಸನಾಂಬೆ ದೇವಿ ದೇವಸ್ಥಾನಕ್ಕೆ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ದೇವಿ ದರ್ಶನದ ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ತರುಣ್, ಆದಷ್ಟು ಬೇಗ ದರ್ಶನ್ ಬಿಡುಗಡೆಯಾಗಲಿ ಎಂದು ದೇವಿ ಬಳಿ ಕೇಳಿಕೊಂಡಿದ್ದೇವೆ ಎಂದು ಮಾತನಾಡಿದರು. ಮದುವೆ ಬಳಿಕ ಮೊದಲ ಬಾರಿಗೆ ಪತ್ನಿ ಸೋನಾಲ್ ಜೊತೆ ತರುಣ್ ಆಗಮಿಸಿ ಹಾಸನಾಂಬೆ ದೇವಿ ದರ್ಶನ ಪಡೆದು ಸಂತಸಪಟ್ಟಿದ್ದಾರೆ. ಆ ನಂತರ ಮಾಧ್ಯಮಕ್ಕೆ ಮಾತನಾಡಿದ ತರುಣ್ ಸುಧೀರ್, ಆದಷ್ಟು ಬೇಗ ದರ್ಶನ್ ಅವರು ಬಿಡುಗಡೆ ಆಗಲಿ ಎಂದು ಹಾಸನಾಂಬೆ ದೇವಿ ಬಳಿ ಕೇಳಿಕೊಂಡಿದ್ದೇನೆ.

ಅವರು ಇದ್ದಿದ್ದರೆ ಈ ಬಾರಿ ಹಾಸನಾಂಬೆ ದೇವಿ ದರ್ಶನಕ್ಕೆ ಬರುತ್ತಿದ್ದರು. ಆದಷ್ಟು ಬೇಗ ಎಲ್ಲಾ ಒಳ್ಳೆಯದಾಗಲಿ ಎಂದು ದೇವಿಯಲ್ಲಿ ಕೇಳಿಕೊಂಡಿದ್ದೇನೆ. ನಾವು ಮದುವೆಯಾದ ನಂತರ ದೇವಿ ದರ್ಶನಕ್ಕೆ ಬಂದಿದ್ದೇವೆ ಅದು ನನಗೆ ವಿಶೇಷ. ಈ ತಾಯಿ ಹತ್ತಿರ ದರ್ಶನಕ್ಕೆ ಬಂದಾಗ ಮನಸ್ಸಿನಲ್ಲಿ ಇರೋದೆನ್ನೆಲ್ಲಾ ಒಮ್ಮೆಲೆ ಹೇಳಿಕೊಳ್ಳಬೇಕು ಅನ್ನಿಸುತ್ತದೆ. ಇಲ್ಲಿ ಒಂದು ವೈಬ್ರೇಷನ್ ಇದೆ. ಪ್ರತಿ ವರ್ಷ ನಾನು ಹಾಸನಾಂಬೆ ದೇವಿ ದರ್ಶನಕ್ಕೆ ಬರುತ್ತೇನೆ.

ಶ್ರೀಲೀಲಾ ನಟಿಸಬೇಕಿದ್ದ ಪಾತ್ರಕ್ಕೆ ಪೂಜಾ ಹೆಗ್ಡೆ ಎಂಟ್ರಿ

ಕನ್ನಡದ ಬ್ಯೂಟಿ ಶ್ರೀಲೀಲಾಗೆ ಪರಭಾಷೆಯಲ್ಲಿ ಬೇಡಿಕೆಯ ನಟಿಯಾಗಿದ್ದಾರೆ. ನಟಿಸಿದ ಸಿನಿಮಾಗಳು ಬ್ಲಾಕ್ ಬಸ್ಟರ್ ಹಿಟ್ ಆಗದೆ ಇದ್ರೂ ಅವಕಾಶಗಳಿಗೆ ಕೊರತೆಯೇನು ಇಲ್ಲ. ಆದರೆ ಇದೀಗ ನಟಿ ಬಂಪರ್ ಅವಕಾಶವೊಂದನ್ನು ಕಳೆದುಕೊಂಡಿದ್ದಾರೆ. ಶ್ರೀಲೀಲಾ ನಟಿಸಬೇಕಿದ್ದ ಪಾತ್ರಕ್ಕೆ ಕರಾವಳಿ ಬೆಡಗಿ ಪೂಜಾ ಹೆಗ್ಗೆ ಎಂಟ್ರಿ ಕೊಟ್ಟಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಬಾಲಿವುಡ್ ನಟ ವರುಣ್ ಧವನ್ ಚಿತ್ರದಲ್ಲಿ ಮೃಣಾಲ್ ಠಾಕೂರ್ ಮತ್ತು ಶ್ರೀಲೀಲಾ ಆಯ್ಕೆಯಾಗಿದ್ದರು. ಎರಡು ಪಾತ್ರಕ್ಕೂ ಸಾಕಷ್ಟು ಪ್ರಾಮುಖ್ಯತೆ ಇತ್ತು. ಆದರೆ ಶ್ರೀಲೀಲಾ ಆಯ್ಕೆಯಾಗಿದ್ದ ಪಾತ್ರಕ್ಕೆ ಈಗ ಪೂಜಾರನ್ನು ಫೈನಲ್ ಮಾಡಲಾಗಿದೆ. ಶ್ರೀಲೀಲಾರನ್ನು ಆ ಪಾತ್ರದಿಂದ ಹೊರಗಿಡಲಾಗಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ. ಅಷ್ಟಕ್ಕೂ ಈ ಸುದ್ದಿ ಅದೆಷ್ಟರ ಮಟ್ಟಿಗೆ ನಿಜ ಎಂಬುದನ್ನು ಚಿತ್ರತಂಡ ಅನೌನ್ಸ್ ಮಾಡುವವರೆಗೂ ಕಾದುನೋಡಬೇಕಿದೆ. ಇನ್ನೂ ಈ ಹಿಂದೆ ಮಹೇಶ್ ಬಾಬು ನಟನೆಯ 'ಗುಂಟೂರು ಖಾರಂ' ಚಿತ್ರಕ್ಕೆ ಮೊದಲು ಪೂಜಾ ಹೆಗ್ಡೆ ಆಯ್ಕೆಯಾಗಿದ್ದರು. ಆ ನಂತರ ಪೂಜಾ ಬದಲು ಶ್ರೀಲೀಲಾಗೆ ಚಿತ್ರತಂಡ ಮಣೆ ಹಾಕಿತ್ತು. ಆ ಚಿತ್ರ ರಿಲೀಸ್ ಆಗಿ ಶ್ರೀಲೀಲಾ ನಟನೆ ಮತ್ತು ಡ್ಯಾನ್ಸ್‌ಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿತ್ತು. ಇನ್ನೂ ರಾಬಿನ್‌ಹುಡ್, ಉಸ್ತಾದ್ ಭಗತ್ ಸಿಂಗ್ ಸೇರಿದಂತೆ ಹಲವು ಚಿತ್ರಗಳು ಶ್ರೀಲೀಲಾ ಕೈಯಲ್ಲಿವೆ. ಈ ಎರಡು ಸಿನಿಮಾಗಳಲ್ಲಿ ವಿಭಿನ್ನ ಪಾತ್ರಗಳಲ್ಲಿ ಅವರು ನಟಿಸುತ್ತಿದ್ದಾರೆ.

ಸೆಹ್ವಾಗ್ ವಿರುದ್ಧ ಗಂಭೀರ್ ಆರೋಪ ಹೊರಿಸಿದ ಗ್ಲೆನ್ ಮ್ಯಾಕ್ಸ್‌ವೆಲ್

ನಿನ್ನಂತಹ ಅಭಿಮಾನಿಯ ಅಗತ್ಯವಿಲ್ಲ

ಗ್ಲೆನ್ ಮ್ಯಾಕ್ಸ್‌ವೆಲ್ ತಮ್ಮ ಆತ್ಮಕಥೆಯಲ್ಲಿ 2017ರ ಐಪಿಎಲ್‌ನಲ್ಲಿ ವೀರೇಂದ್ರ ಸೆಹ್ವಾಗ್ ಅವರೊಂದಿಗಿನ ಜಗಳವನ್ನು ಉಲ್ಲೇಖಿಸಿದ್ದಾರೆ. ಅದರಂತೆ ಪಂಜಾಬ್ ತಂಡದ ನಾಯಕನಾಗಿದ್ದ ಮ್ಯಾಕ್ಸ್‌ವೆಲ್ ಅವರನ್ನು ಪತ್ರಿಕಾಗೋಷ್ಠಿಯಿಂದ ತಡೆದು, ವಾಟ್ಸಾಪ್ ಗ್ರೂಪ್‌ನಿಂದ ತೆಗೆದುಹಾಕಿದರು. ಅಲ್ಲದೆ ಪತ್ರಿಕಾಗೋಷ್ಠಿಯಲ್ಲಿ ಸೆಹ್ವಾಗ್ ನನ್ನನ್ನು ಜರಿದು ಮಾತನಾಡಿದ್ದರು ಎಂದು ಮ್ಯಾಕ್ಸ್‌ವೆಲ್ ತಮ್ಮ ಪುಸ್ತಕದಲ್ಲಿ ಉಲ್ಲೇಖಿಸಿದ್ದಾರೆ.

18ನೇ ಆವೃತ್ತಿಯ ಐಪಿಎಲ್‌ಗೆ ಸಂಬಂಧಿಸಿದಂತೆ ಈಗಾಗಲೇ ಕೆಲಸಗಳು ಆರಂಭವಾಗಿವೆ. ಅದರಂತೆ ಈ ಟೂರ್ನಿ ಆರಂಭಕ್ಕೂ ಮುನ್ನ ಮೆಗಾ ಹರಾಜು ನಡೆಯಲ್ಲಿದೆ. ಆದರೆ ಈ ನಡುವೆ ಐಪಿಎಲ್‌ಗೆ ಸಂಬಂಧಿಸಿದ ವಿಚಾರವೊಂದು ಹೊಸ ವಿವಾದವನ್ನು ಹುಟ್ಟುಹಾಕಿದ್ದು, ಪ್ರಸ್ತುತ ಆರ್‌ಸಿಬಿಯಲ್ಲಿರುವ ಆಸ್ಟ್ರೇಲಿಯಾ ತಂಡದ ಗ್ಲೆನ್ ಮ್ಯಾಕ್ಸ್‌ವೆಲ್, ಟೀಂ ಇಂಡಿಯಾದ ಮಾಜಿ ಆರಂಭಿಕ ಆಟಗಾರ ವೀರೇಂದ್ರ ಸೆಹ್ವಾಗ್ ಅವರ ವಿರುದ್ಧ ಗಂಭೀರ ಆರೋಪವೊಂದನ್ನು ಹೊರಿಸಿದ್ದಾರೆ. ವಾಸ್ತವವಾಗಿ ಪ್ರತಿ ಐಪಿಎಲ್ ಸೀಸನ್‌ನಲ್ಲೂ ಒಂದಿಲ್ಲೊಂದು ವಿವಾದಗಳು ಹುಟ್ಟಿಕೊಳ್ಳುತ್ತಲೇ ಇರುತ್ತವೆ. ಆದರೆ ಆ ವಿವಾದಗಳು ಹೆಚ್ಚುಕಾಲ ಉಳಿಯುವುದಿಲ್ಲ. ಆದರೀಗ ಆಸ್ಟ್ರೇಲಿಯಾ ತಂಡದ ಆಲ್‌ರೌಂಡರ್ ಗ್ಲೆನ್ ಮ್ಯಾಕ್ಸ್‌ವೆಲ್ ತಮ್ಮ ಆತ್ಮಚರಿತ್ರೆಯಲ್ಲಿ ಬರೆದುಕೊಂಡಿರುವ ಐಪಿಎಲ್ ಪಂದ್ಯಾವಳಿಯ ವೇಳೆ ನಡೆದ ಘಟನೆಯೊಂದು ಇದೀಗ ಹೊಸ ವಿವಾದ ಕಿಡಿಯನ್ನು ಹೊತ್ತಿಸಿದೆ.

ಪ್ರಸ್ತುತ ಐಪಿಎಲ್‌ನಲ್ಲಿ ಆರ್‌ಸಿಬಿ ಪರ ಆಡುತ್ತಿರುವ ಗ್ಲೆನ್ ಮ್ಯಾಕ್ಸ್‌ವೆಲ್ – ದಿ ಶೋ ಮ್ಯಾನ್' ಎಂಬ ಹೆಸರಿನಲ್ಲಿ ತಮ್ಮ ಆತ್ಮಚರಿತ್ರೆಯನ್ನು ಹೊರತಂದಿದ್ದಾರೆ. ಈ ಪುಸ್ತಕದ ಕೆಲ ಭಾಗಗಳು ಈಗಾಗಲೇ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದ್ದು, ಅದರಲ್ಲಿ 2017 ರ ಐಪಿಎಲ್ ವೇಳೆ ನಡೆದ ಘಟನೆಯೊಂದು ಸೋಶಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ.

ವಾಸ್ತವವಾಗಿ ಮ್ಯಾಕ್ಸ್‌ವೆಲ್ 2014 ರಲ್ಲಿ ಕಿಂಗ್ಸ್ ಪಂಜಾಬ್ (ಈಗ ಪಂಜಾಬ್ ಕಿಂಗ್ಸ್) ತಂಡದ ಭಾಗವಾಗಿದ್ದರು. ಆ ವೇಳೆ ಪಂಜಾಬ್ ತಂಡದಲ್ಲಿ ಅವರ ಪ್ರದರ್ಶನ ಆರಂಭದಲ್ಲಿ ಅತ್ಯುತ್ತಮವಾಗಿತ್ತು. ಹೀಗಾಗಿ ಅವರನ್ನು 2017 ರ ಆವೃತ್ತಿಯಲ್ಲಿ ತಂಡದ ನಾಯಕರನ್ನಾಗಿ ನೇಮಿಸಲಾಯಿತು. ಅದೇ ಸೀಸನ್‌ನಲ್ಲಿ ಮಾಜಿ ಪಂಜಾಬ್ ನಾಯಕ ವೀರೇಂದ್ರ ಸೆಹ್ವಾಗ್ ಅವರನ್ನು ತಂಡದ ಕ್ರಿಕೆಟ್ ನಿರ್ದೇಶಕರಾಗಿ ನೇಮಿಸಲಾಯಿತು. ಆ ಆವೃತ್ತಿಯಲ್ಲಿ ಪಂಜಾಬ್ ತಂಡ ರೈಸಿಂಗ್ ಪುಣೆ ಸೂಪರ್ ಜೈಂಟ್ಸ್ ವಿರುದ್ಧದ ತನ್ನ ಕೊನೆಯ ಲೀಗ್ ಪಂದ್ಯದಲ್ಲಿ ಕೇವಲ 73 ರನ್‌ಗಳಿಗೆ ಆಲೌಟ್ ಆಗಿತ್ತು. ಆ ಬಳಿಕ ಪಂದ್ಯವನ್ನು 9 ವಿಕೆಟ್‌ಗಳಿಂದ ಕಳೆದುಕೊಂಡಿತು. ಇದರಿಂದಾಗಿ ಪಂಜಾಬ್ ತಂಡ ಕೇವಲ 2 ಅಂಕಗಳ ಅಂತರದಿಂದ ಪ್ಲೇಆಫ್‌ಗೇರುವ ಅವಕಾಶವನ್ನು ಕಳೆದುಕೊಂಡಿತ್ತು. ಆ ಪಂದ್ಯದ ಬಗ್ಗೆ ತಮ್ಮ ಆತ್ಮಚರಿತ್ರೆಯಲ್ಲಿ ಬರೆದುಕೊಂಡಿರುವ ಮ್ಯಾಕ್ಸ್‌ವೆಲ್, ಆ ವೇಳೆ ನಾನು ತಂಡದ ನಾಯಕನಾಗಿದ್ದ ಕಾರಣ, ಆ ಪಂದ್ಯ ಮುಗಿದ ಬಳಿಕ ನಾನು ಪತ್ರಿಕಾಗೋಷ್ಠಿಗೆ ಹೋಗಿ ಮಾಧ್ಯಮದ ಪ್ರಶ್ನೆಗಳನ್ನು ಎದುರಿಸಲು ನಿರ್ಧರಿಸಿದ್ದೆ. ಆದರೆ ಸೆಹ್ವಾಗ್ ನನ್ನನ್ನು ತಡೆದು, ನಾನೇ ಪತ್ರಿಕಾಗೋಷ್ಠಿಗೆ ಹೋಗುತ್ತೇನೆ ಎಂದು ಹೇಳಿದರು. ಹೀಗಾಗಿ ನಾನು ಪಂದ್ಯದ ನಂತರ ತಂಡದ ಬಸ್ ಏರಿ ಹೋಟೆಲ್‌ನತ್ತ ಹೊರಟ್ಟಿದೆ. ಆದರೆ ಅಷ್ಟರಲ್ಲಾಗಲೇ ನನ್ನನ್ನು ತಂಡದ ಪ್ರಮುಖ ವಾಟ್ಸಾಪ್ ಗ್ರೂಪ್‌ನಿಂದ ತೆಗೆದುಹಾಕಲಾಯಿತು. ಇಷ್ಟೇ ಅಲ್ಲ, ಪತ್ರಿಕಾಗೋಷ್ಠಿಯನ್ನುದ್ದೇಶಿ ಮಾತನಾಡಿದ್ದ ಸೆಹ್ವಾಗ್ ನನ್ನ ಮೇಲೆ ಕೋಪಗೊಂಡಿದಲ್ಲದೆ, ನಾನು ನಾಯಕನಾಗಿ ಜವಾಬ್ದಾರಿಯನ್ನು ತೆಗೆದುಕೊಳ್ಳಲಿಲ್ಲ ಎಂದು ನನ್ನ ಮೇಲೆ ಆರೋಪ ಹೊರಿಸಿದ್ದಾರೆ ಎಂಬ ಸಂದೇಶಗಳು ನನಗೆ ಬರಲಾರಂಭಿಸಿದವು.

ರಣಜಿಯಲ್ಲಿ ಬಾಲಿವುಡ್ ನಿರ್ಮಾಪಕನ ಮಗನ ಆರ್ಭಟ

ಪ್ರಸ್ತುತ ಭಾರತದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿಯಲ್ಲಿ ಮಿಜೋರಾಂ ಪರ ಆಡುತ್ತಿರುವ ಯುವ ಬ್